VOLUME: 16 | 27 JUNE 2026 | ಶನಿವಾರ | RS: 2 | PAGE: 06 ISSUE: 137 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಶಾಹಿದ್ ಕಪೂರ್, ರಶ್ಮಿಕಾ ಮಂದಣ್ಣ ಮತ್ತು ಕೃತಿ ಸನೋನ್ ಅಭಿನಯದ 'ಕಾಕ್‌ಟೇಲ್ 2' ಬಾಕ್ಸ್ ಆಫೀಸ್‌ನಲ್ಲಿ ಉತ್ತಮ ಪ್ರದರ್ಶನ ಮುಂದುವರಿಸಿದೆ. ಬಿಡುಗಡೆಯಾದ ಮೊದಲ ವಾರದಲ್ಲೇ ಸಿನಿಮಾ ವಿಶ್ವದಾದ್ಯಂತ 109.07 ಕೋಟಿ ರೂ. ಗಳಿಸಿದೆ.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ತ್ರಿಭಾಷಾ ನೀತಿ ಗೊಂದಲಕ್ಕೆ ತೆರೆ

ನವದೆಹಲಿ: ಸಿಬಿಎಸ್‌ಇ ಶಾಲೆಗಳಲ್ಲಿ ತ್ರಿಭಾಷಾ ನೀತಿ ಜಾರಿಗೆ ಸಂಬಂಧಿಸಿದಂತೆ ಉಂಟಾಗಿದ್ದ ಗೊಂದಲಕ್ಕೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಸ್ಪಷ್ಟನೆ ನೀಡಿದ್ದಾರೆ. ಹೊಸ ನಿಯಮವು ಈ ಶೈಕ್ಷಣಿಕ ವರ್ಷದಿಂದ 6ನೇ ತರಗತಿಗೆ ದಾಖಲಾತಿ ಪಡೆಯುವ ಹೊಸ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯವಾಗಲಿದ್ದು, ಈಗಾಗಲೇ 7, 8 ಮತ್ತು 9ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ತಮ್ಮ ಭಾಷಾ ವಿಷಯಗಳನ್ನು ಬದಲಾಯಿಸುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ.



ಸಿಬಿಎಸ್‌ಇಯ ಹಿಂದಿನ ಸೂಚನೆ ಸ್ಪಷ್ಟವಾಗಿರದ ಕಾರಣ, ಈಗಾಗಲೇ ಓದುತ್ತಿರುವ ವಿದ್ಯಾರ್ಥಿಗಳೂ ಭಾಷೆ ಬದಲಾಯಿಸಬೇಕಾಗುತ್ತದೆಯೇ ಎಂಬ ಆತಂಕ ಪೋಷಕರಲ್ಲಿ ಮೂಡಿತ್ತು. ಆದರೆ ಹೊಸ ಸ್ಪಷ್ಟೀಕರಣದ ಪ್ರಕಾರ, ಪ್ರಸ್ತುತ ಎರಡು ವಿದೇಶಿ ಭಾಷೆಗಳನ್ನು ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳು 10ನೇ ತರಗತಿಯ ಸಾರ್ವಜನಿಕ ಪರೀಕ್ಷೆಯವರೆಗೆ ಅದೇ ವಿಷಯಗಳೊಂದಿಗೆ ಮುಂದುವರಿಯಬಹುದು. ಈ ಕುರಿತು ಸಿಬಿಎಸ್‌ಇ ಶೀಘ್ರದಲ್ಲೇ ಪರಿಷ್ಕೃತ ಆದೇಶ ಹೊರಡಿಸಲಿದೆ.

ರಾಷ್ಟ್ರೀಯ ಶಿಕ್ಷಣ ನೀತಿಯಡಿ ಭಾಷಾ ಕಲಿಕೆಯನ್ನು ಮೂರು ಹಂತಗಳಲ್ಲಿ ವಿಂಗಡಿಸಲಾಗಿದೆ. ಮೊದಲ ಭಾಷೆಯು ಶಾಲೆಯ ಬೋಧನಾ ಮಾಧ್ಯಮವಾಗಿರುತ್ತದೆ. ಎರಡನೇ ಭಾಷೆ ಮೊದಲ ಭಾಷೆಯಿಂದ ಭಿನ್ನವಾಗಿರಬೇಕು. ಮೂರನೇ ಭಾಷೆಯು ಮೊದಲ ಎರಡು ಭಾಷೆಗಳಿಗಿಂತ ಸಂಪೂರ್ಣ ವಿಭಿನ್ನವಾಗಿರಬೇಕು. ವಿದ್ಯಾರ್ಥಿಗಳು ಆಯ್ಕೆ ಮಾಡುವ ಮೂರು ಭಾಷೆಗಳಲ್ಲಿ ಕನಿಷ್ಠ ಎರಡು ಭಾಷೆಗಳು ಭಾರತೀಯ ಭಾಷೆಗಳಾಗಿರುವುದು ಕಡ್ಡಾಯವಾಗಿದೆ.

ಜರ್ಮನ್, ಫ್ರೆಂಚ್ ಸೇರಿದಂತೆ ವಿದೇಶಿ ಭಾಷೆಗಳನ್ನು ಶಾಲೆಗಳಿಂದ ತೆಗೆದುಹಾಕಲಾಗುತ್ತಿದೆ ಎಂಬ ಆತಂಕವನ್ನು ಕೇಂದ್ರ ಸರ್ಕಾರ ತಳ್ಳಿಹಾಕಿದೆ.

ಮೂರು ಕಡ್ಡಾಯ ಭಾಷೆಗಳ ಜೊತೆಗೆ ವಿದ್ಯಾರ್ಥಿಗಳು ಹೆಚ್ಚುವರಿಯಾಗಿ ನಾಲ್ಕನೇ ಭಾಷೆಯಾಗಿ ವಿದೇಶಿ ಭಾಷೆಯನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವಿರಲಿದೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ. ಪಠ್ಯಪುಸ್ತಕ ಮತ್ತು ಶಿಕ್ಷಕರ ಕೊರತೆ ಕುರಿತು ವ್ಯಕ್ತವಾಗಿದ್ದ ಆತಂಕಕ್ಕೂ ಸರ್ಕಾರ ಸ್ಪಷ್ಟನೆ ನೀಡಿದೆ.

ದೇಶದ 22 ಅಧಿಕೃತ ಭಾರತೀಯ ಭಾಷೆಗಳಲ್ಲಿ ಅಗತ್ಯ ಪಠ್ಯಪುಸ್ತಕಗಳನ್ನು ಸಮಯಕ್ಕೆ ಸರಿಯಾಗಿ ಒದಗಿಸಲಾಗುವುದು. ಅಲ್ಲದೆ, ಶಾಲೆಗಳಿಗೆ ಅಗತ್ಯವಿರುವಷ್ಟು ಅರ್ಹ ಶಿಕ್ಷಕರು ಮತ್ತು ಸಂಪನ್ಮೂಲಗಳನ್ನು ಒದಗಿಸುವ ಜವಾಬ್ದಾರಿ ಸಿಬಿಎಸ್‌ಇಗೆ ಇರುತ್ತದೆ ಎಂದು ಸಚಿವರು ತಿಳಿಸಿದ್ದಾರೆ.

ದೇಶದ ಸುಮಾರು 90 ಶೇಕಡಾ ವಿದ್ಯಾರ್ಥಿಗಳು ಈಗಾಗಲೇ ಮೂರು ಭಾಷೆಗಳನ್ನು ಕಲಿಯುತ್ತಿದ್ದು, ಸಿಬಿಎಸ್‌ಇಯಲ್ಲಿ ಕೇವಲ 1.3 ಶೇಕಡಾ ವಿದ್ಯಾರ್ಥಿಗಳು ಮಾತ್ರ ಎರಡು ವಿದೇಶಿ ಭಾಷೆಗಳನ್ನು ಅಧ್ಯಯನ ಮಾಡುತ್ತಿದ್ದಾರೆ.

ಹೀಗಾಗಿ ಹೊಸ ವ್ಯವಸ್ಥೆಯಿಂದ ಬಹುತೇಕರಿಗೆ ಯಾವುದೇ ತೊಂದರೆಯಾಗುವುದಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ.

# ಸರ್ಕಾರಕ್ಕೆ ನೀರಿನದ್ದೇ ಸಮಸ್ಯೆ..!

ನವದೆಹಲಿ: ರಾಜ್ಯದ ಜೀವನಾಡಿಯಾದ ಕಾವೇರಿ ನದಿಯ ಜಲಾಶಯಗಳಲ್ಲಿ ನೀರಿನ ಮಟ್ಟ ದಿನದಿಂದ ದಿನಕ್ಕೆ ಕುಸಿಯುತ್ತಿದ್ದು, ನಿರೀಕ್ಷಿತ ಮುಂಗಾರು ಮಳೆಯೂ ಕೈಕೊಟ್ಟಿದೆ. ಇಂತಹ ಸಂಕಷ್ಟದ ಪರಿಸ್ಥಿತಿಯ ನಡುವೆಯೂ ತಮಿಳುನಾಡು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಮುಂದೆ ತನ್ನ ನೀರಿನ ಬೇಡಿಕೆಯನ್ನು ಮುಂದುವರಿಸಿರುವುದು ಕರ್ನಾಟಕದ ಆತಂಕಕ್ಕೆ ಕಾರಣವಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಕಾನೂನುಬದ್ಧ ಹಾಗೂ ವೈಜ್ಞಾನಿಕ ಆಧಾರಗಳೊಂದಿಗೆ ತನ್ನ ವಾದವನ್ನು ಸಮರ್ಥವಾಗಿ ಮಂಡಿಸುವ ಅಗತ್ಯ ಎದುರಾಗಿದೆ.

ಕಳೆದ ವರ್ಷ ಉತ್ತಮ ಮಳೆಯ ಪರಿಣಾಮವಾಗಿ ಕರ್ನಾಟಕವು ನಿಗದಿತ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ಸುಮಾರು 153 ಟಿಎಂಸಿ ನೀರನ್ನು ತಮಿಳುನಾಡಿಗೆ ಬಿಡುಗಡೆ ಮಾಡಿತ್ತು.

ನೆರೆರಾಜ್ಯದ ಹಿತವನ್ನು ಗಮನದಲ್ಲಿಟ್ಟುಕೊಂಡು ನೀಡಿದ್ದ ಈ ಹೆಚ್ಚುವರಿ ನೀರನ್ನು ಪರಿಗಣಿಸಿ, ಪ್ರಸಕ್ತ ವರ್ಷದ ಕೊರತೆಯ ಸಂದರ್ಭದಲ್ಲಿ ಅದನ್ನು ಸರಿದೂಗಿಸುವ ರೀತಿಯ ನಿರ್ಧಾರ ಕೈಗೊಳ್ಳಬೇಕು ಎಂಬುದು ರಾಜ್ಯ ಸರ್ಕಾರದ ಪ್ರಮುಖ ವಾದವಾಗುವ ಸಾಧ್ಯತೆ ಇದೆ.

ಪ್ರಸ್ತುತ ಕಾವೇರಿ ಕಣಿವೆಯ ಪ್ರಮುಖ ಜಲಾಶಯವಾದ ಕೆಆರ್‌ಎಸ್‌ನಲ್ಲಿ ಕೇವಲ 6 ಟಿಎಂಸಿ ನೀರು ಮಾತ್ರ ಲಭ್ಯವಿದೆ. ಈ ನೀರಿನ ಬಹುಪಾಲು ಬೆಂಗಳೂರು ಸೇರಿದಂತೆ ಕಾವೇರಿ ಕಣಿವೆಯ ನಗರ ಪ್ರದೇಶಗಳ ಕುಡಿಯುವ ನೀರಿನ ಪೂರೈಕೆಗೆ ಮೀಸಲಾಗಬೇಕಾದ ಅನಿವಾರ್ಯತೆ ಇದೆ. ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಬೇಕೆಂಬ ನ್ಯಾಯಾಲಯದ ಮಾರ್ಗಸೂಚಿಯನ್ನು ಉಲ್ಲೇಖಿಸಿ, ಕೃಷಿ ಉದ್ದೇಶಕ್ಕಾಗಿ ಹೆಚ್ಚಿನ ಪ್ರಮಾಣದ ನೀರನ್ನು ಬಿಡುಗಡೆ ಮಾಡುವುದು ಸಾಧ್ಯವಿಲ್ಲ ಎಂಬ ವಾದವನ್ನು ಸರ್ಕಾರ ಮಂಡಿಸಬೇಕಿದೆ.

ನೀರಿನ ಅಭಾವದ ಸಂದರ್ಭದಲ್ಲಿ ಒಂದು ರಾಜ್ಯದ ಹಿತಾಸಕ್ತಿಯನ್ನು ಕಾಪಾಡುವ ನೆಪದಲ್ಲಿ ಮತ್ತೊಂದು ರಾಜ್ಯದ ರೈತರ ಬದುಕಿಗೆ ಧಕ್ಕೆಯಾಗಬಾರದು ಎಂಬ ವಾದಕ್ಕೂ ಸರ್ಕಾರ ಒತ್ತು ನೀಡಬೇಕಿದೆ.

ಪಕ್ಕದ ರಾಜ್ಯಗಳ ವಾಣಿಜ್ಯ ತೆರಿಗೆ ಇಲಾಖೆ ಹಾಗೂ ಜಾರಿ ಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸಿ ತೆರಿಗೆ ಸೋರಿಕೆ ತಡೆಯುವ ಕೆಲಸಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದ ಅವರು, ರಾಜ್ಯದಲ್ಲಿ ಸುಮಾರು 12 ಲಕ್ಷ ತೆರಿಗೆದಾರರ ಮಾಹಿತಿಯಿದ್ದು, ತಂತ್ರಜ್ಞಾನ ಹಾಗೂ ದತ್ತಾಂಶ ವಿಶ್ಲೇಷಣೆಯ ಮೂಲಕ ಅವರ ವ್ಯವಹಾರ ಚಟುವಟಿಕೆಗಳನ್ನು ಸಮಗ್ರವಾಗಿ ಪರಿಶೀಲಿಸುವ ಸಾಮರ್ಥ್ಯ ಇಲಾಖೆಗೆ ಇದೆ ಎಂದು ಹೇಳಿದರು. "ನಮ್ಮ ಉದ್ದೇಶ ಪ್ರಾಮಾಣಿಕ ತೆರಿಗೆದಾರರಿಗೆ ತೊಂದರೆ ಕೊಡುವುದಲ್ಲ. ಅವರನ್ನು ಗೌರವದಿಂದ ನಡೆಸಿಕೊಳ್ಳಬೇಕು. ಆದರೆ ತೆರಿಗೆ ವಂಚನೆಗೆ ಮಾತ್ರ ಯಾವುದೇ ಅವಕಾಶ ಇರಬಾರದು" ಎಂದು ಸಿಎಂ ಸ್ಪಷ್ಟಪಡಿಸಿದರು.

# ಜಿಎಸ್‌ಟಿ ಸಂಗ್ರಹಕ್ಕೆ ಒತ್ತು ನೀಡಿ: ಸಿಎಂ

ಬೆಂಗಳೂರು: ಜಿಎಸ್‌ಟಿ ಸಂಗ್ರಹದಲ್ಲಿ ಕರ್ನಾಟಕ ಈಗಾಗಲೇ ದೇಶದಲ್ಲಿ ಎರಡನೇ ಸ್ಥಾನದಲ್ಲಿದ್ದು, ಮುಂದಿನ ದಿನಗಳಲ್ಲಿ ಮೊದಲ ಸ್ಥಾನಕ್ಕೇರುವ ಗುರಿಯೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.



ವಾಣಿಜ್ಯ ತೆರಿಗೆ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದ ಆರ್ಥಿಕ ಬಲವರ್ಧನೆಯಲ್ಲಿ ವಾಣಿಜ್ಯ ತೆರಿಗೆ ಇಲಾಖೆಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ.

"ನೀವು ಸರ್ಕಾರದ ಶಕ್ತಿ. ನೀವು ಶಕ್ತಿ ನೀಡದಿದ್ದರೆ ಸರ್ಕಾರವನ್ನು ಪರಿಣಾಮಕಾರಿಯಾಗಿ ನಡೆಸುವುದು ಕಷ್ಟ. ಇಲಾಖೆಗೆ ನೀಡಿರುವ ತೆರಿಗೆ ಸಂಗ್ರಹ ಗುರಿಯನ್ನು ಮೀರಿಸುವ ಸಾಮರ್ಥ್ಯ ನಿಮ್ಮಲ್ಲಿದೆ" ಎಂದು ಅಧಿಕಾರಿಗಳಿಗೆ ಪ್ರೋತ್ಸಾಹ ನೀಡಿದರು.

ಮೇ 2026ರವರೆಗೆ ಜಿಎಸ್‌ಟಿ ಸಂಗ್ರಹದಲ್ಲಿ ತೆಲಂಗಾಣ ಶೇ.10ರಷ್ಟು ಬೆಳವಣಿಗೆ ದಾಖಲಿಸಿದ್ದರೆ, ಕರ್ನಾಟಕ ಶೇ.9ರಷ್ಟು ಪ್ರಗತಿ ಸಾಧಿಸಿದೆ. ಮಹಾರಾಷ್ಟ್ರ ಹಾಗೂ ಗುಜರಾತ್ ತಲಾ ಶೇ.5, ಉತ್ತರ ಪ್ರದೇಶ ಶೇ.8ರಷ್ಟು ಬೆಳವಣಿಗೆ ಕಂಡಿದ್ದು, ಕರ್ನಾಟಕ ದೇಶದಲ್ಲೇ ಅಗ್ರ ಸ್ಥಾನಕ್ಕೇರುವ ಅವಕಾಶವನ್ನು ಬಳಸಿಕೊಳ್ಳಬೇಕು ಎಂದು ಹೇಳಿದರು.

ತೆರಿಗೆ ಸೋರಿಕೆಗೆ ಯಾವುದೇ ಅವಕಾಶ ನೀಡಬಾರದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದ ಮುಖ್ಯಮಂತ್ರಿ, "ಯಾವುದೇ ಸರಕು ಸಾಗಣೆ ವಾಹನ ಸೂಕ್ತ ದಾಖಲೆಗಳಿಲ್ಲದೆ ಚೆಕ್‌ಪೋಸ್ಟ್ ಅಥವಾ ರಾಜ್ಯದ ಗಡಿಯನ್ನು ದಾಟಬಾರದು. ತೆರಿಗೆ ವಂಚನೆ ವಿರುದ್ಧ ಶೂನ್ಯ ಸಹಿಷ್ಣುತೆ ನೀತಿ ಅನುಸರಿಸಬೇಕು" ಎಂದು ತಿಳಿಸಿದರು.

ರಾಜ್ಯದ ವಿವಿಧ ಭಾಗಗಳಿಂದ ಅಧಿಕಾರಿಗಳ ಕಾರ್ಯವೈಖರಿ ಕುರಿತು ನಿರಂತರ ಮಾಹಿತಿ ಬರುತ್ತಿದೆ ಎಂದು ಹೇಳಿದ ಅವರು, "ಚಿಕ್ಕಪೇಟೆಯಿಂದ ಗಾಂಧಿನಗರದವರೆಗೆ, ಗಡಿ ಜಿಲ್ಲೆಗಳಿಂದ ರಾಜ್ಯದ ಎಲ್ಲ ಭಾಗಗಳವರೆಗೆ ನನಗೆ ಸಂಪರ್ಕವಿದೆ. ಕಾರ್ಯನಿರ್ವಹಣೆಯಲ್ಲಿ ಯಾವುದೇ ನಿರ್ಲಕ್ಷ್ಯ ನಡೆದರೂ ಅದು ನನ್ನ ಗಮನಕ್ಕೆ ಬರುತ್ತದೆ.

ಹೀಗಾಗಿ ನಿಮ್ಮ ವರದಿಗಳು ಮತ್ತು ನೆಲಮಟ್ಟದ ವಾಸ್ತವಾಂಶಗಳು ಒಂದಕ್ಕೊಂದು ಹೊಂದಿಕೆಯಾಗಬೇಕು" ಎಂದು ಎಚ್ಚರಿಕೆ ನೀಡಿದರು.

ಪಕ್ಕದ ರಾಜ್ಯಗಳ ವಾಣಿಜ್ಯ ತೆರಿಗೆ ಇಲಾಖೆ ಹಾಗೂ ಜಾರಿ ಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸಿ ತೆರಿಗೆ ಸೋರಿಕೆ ತಡೆಯುವ ಕೆಲಸಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದ ಅವರು, ರಾಜ್ಯದಲ್ಲಿ ಸುಮಾರು 12 ಲಕ್ಷ ತೆರಿಗೆದಾರರ ಮಾಹಿತಿಯಿದ್ದು, ತಂತ್ರಜ್ಞಾನ ಹಾಗೂ ದತ್ತಾಂಶ ವಿಶ್ಲೇಷಣೆಯ ಮೂಲಕ ಅವರ ವ್ಯವಹಾರ ಚಟುವಟಿಕೆಗಳನ್ನು ಸಮಗ್ರವಾಗಿ ಪರಿಶೀಲಿಸುವ ಸಾಮರ್ಥ್ಯ ಇಲಾಖೆಗೆ ಇದೆ ಎಂದು ಹೇಳಿದರು.

"ನಮ್ಮ ಉದ್ದೇಶ ಪ್ರಾಮಾಣಿಕ ತೆರಿಗೆದಾರರಿಗೆ ತೊಂದರೆ ಕೊಡುವುದಲ್ಲ. ಅವರನ್ನು ಗೌರವದಿಂದ ನಡೆಸಿಕೊಳ್ಳಬೇಕು. ಆದರೆ ತೆರಿಗೆ ವಂಚನೆಗೆ ಮಾತ್ರ ಯಾವುದೇ ಅವಕಾಶ ಇರಬಾರದು" ಎಂದು ಸಿಎಂ ಸ್ಪಷ್ಟಪಡಿಸಿದರು.

ಎಲ್ಲಾ ಜಂಟಿ ಆಯುಕ್ತರುಗಳಿಗೆ ನೀಡಲಾದ ತೆರಿಗೆ ಸಂಗ್ರಹ ಗುರಿಯನ್ನು ಸಾಧಿಸುವಂತೆ ಸೂಚಿಸಿದ ಅವರು, ತೆರಿಗೆ ರಿಟರ್ನ್ ಸಲ್ಲಿಸದವರನ್ನು ಗುರುತಿಸಿ ನಿಗದಿತ ಅವಧಿಯೊಳಗೆ ರಿಟರ್ನ್ ಸಲ್ಲಿಸುವಂತೆ ಕ್ರಮ ಕೈಗೊಳ್ಳಬೇಕು ಎಂದರು.

"ನಿಮಗೆ ಈಗ ಬರುತ್ತಿರುವ ತೆರಿಗೆಯ ಎರಡರಷ್ಟು ಸಂಗ್ರಹಿಸುವ ಸಾಮರ್ಥ್ಯ ಇದೆ. ಆದರೆ ಕಾನೂನು ಮೀರಿ ಅಥವಾ ಯಾರನ್ನಾದರೂ ಶೋಷಣೆ ಮಾಡಿ ತೆರಿಗೆ ಸಂಗ್ರಹಿಸಬೇಕೆಂದು ನಾನು ಹೇಳುತ್ತಿಲ್ಲ" ಎಂದು ತಿಳಿಸಿದರು.

ಜಿಎಸ್‌ಟಿ ವಂಚನೆ ತಡೆಗೆ ಹೈದರಾಬಾದ್ ಐಐಟಿ ಸಹಯೋಗದಲ್ಲಿ ತಾಂತ್ರಿಕ ವ್ಯವಸ್ಥೆ ರೂಪಿಸಲಾಗಿದ್ದು, ನಕಲಿ ರಶೀದಿಗಳು ಹಾಗೂ ನಕಲಿ ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್ ಪ್ರಕರಣಗಳನ್ನು ಪತ್ತೆಹಚ್ಚುವಲ್ಲಿ ಮಹತ್ವದ ಸಾಧನೆ ಮಾಡಲಾಗಿದೆ. ಬೋಗಸ್ ಕಂಪನಿಗಳನ್ನು ಪತ್ತೆಹಚ್ಚಿ ಈಗಾಗಲೇ 166 ಕೋಟಿ ವಸೂಲಿ ಮಾಡಲಾಗಿದೆ ಎಂದು ಸಿಎಂ ತಿಳಿಸಿದರು. ಇಂತಹ ಪ್ರಕರಣಗಳಲ್ಲಿ ಕಾನೂನು ಕ್ರಮಗಳ ಪ್ರಮಾಣವನ್ನು ಇನ್ನಷ್ಟು ಹೆಚ್ಚಿಸಬೇಕು ಎಂದರು.

ತೆರಿಗೆದಾರರಿಗೆ ಸಲಹೆ, ಮಾರ್ಗದರ್ಶನ ಹಾಗೂ ಗೊಂದಲಗಳ ತ್ವರಿತ ಪರಿಹಾರಕ್ಕಾಗಿ ಆನ್‌ಲೈನ್ ವ್ಯವಸ್ಥೆ ಜಾರಿಗೊಳಿಸಿರುವುದಾಗಿ ತಿಳಿಸಿದ ಮುಖ್ಯಮಂತ್ರಿ, ನಾಗರಿಕ ಸ್ನೇಹಿ ತೆರಿಗೆ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಬೇಕಾಗಿದೆ ಎಂದರು.

ಮೈಸೂರು ವಿಭಾಗದಲ್ಲಿ ಕಾರ್ಯಕ್ಷಮತೆ ಕುಸಿದಿರುವುದನ್ನು ಗಂಭೀರವಾಗಿ ಪರಿಗಣಿಸಿರುವುದಾಗಿ ಹೇಳಿದ ಅವರು, "ಕಾರಣಗಳು ಮತ್ತು ನೆಪಗಳಿಗಿಂತ ಫಲಿತಾಂಶ ಮುಖ್ಯ. ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಿಕೊಂಡು ಉತ್ತಮ ಸಾಧನೆ ತೋರಬೇಕು" ಎಂದು ಸೂಚಿಸಿದರು. ಬಾಕಿ ಇರುವ ಮೇಲ್ಮನವಿಗಳ ತ್ವರಿತ ವಿಲೇವಾರಿ ಕುರಿತೂ ಹಿರಿಯ ಅಧಿಕಾರಿಗಳು ಹೆಚ್ಚಿನ ನಿಗಾ ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಕರ್ನಾಟಕದ ಅಭಿವೃದ್ಧಿಗೆ ಅಗತ್ಯವಾದ ಸಂಪನ್ಮೂಲ ಸಂಗ್ರಹಿಸುವ ಮಹತ್ವದ ಜವಾಬ್ದಾರಿ ವಾಣಿಜ್ಯ ತೆರಿಗೆ ಇಲಾಖೆಯ ಮೇಲಿದೆ. ತೆರಿಗೆದಾರ ಸ್ನೇಹಿ ಆಡಳಿತ, ಪಾರದರ್ಶಕತೆ ಮತ್ತು ಕಠಿಣ ತೆರಿಗೆ ಜಾರಿ ವ್ಯವಸ್ಥೆಯ ಮೂಲಕ ರಾಜ್ಯವನ್ನು ಜಿಎಸ್‌ಟಿ ಸಂಗ್ರಹದಲ್ಲಿ ದೇಶದ ಮೊದಲ ಸ್ಥಾನಕ್ಕೇರಿಸುವ ಗುರಿಯೊಂದಿಗೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರೆ ನೀಡಿದರು.

# ಟೌನ್‌ಶಿಪ್ ಅಗತ್ಯವಿಲ್ಲ: ಪರಮೇಶ್ವರ್

**ಬೆಂಗಳೂರು:** ರೈತರನ್ನು ಬಲವಂತವಾಗಿ ಸ್ಥಳಾಂತರಿಸಿ ಟೌನ್‌ಶಿಪ್ ನಿರ್ಮಿಸುವುದರಲ್ಲಿ ಯಾವುದೇ ಅರ್ಥವಿಲ್ಲ ಎಂದು ಉಪಮುಖ್ಯಮಂತ್ರಿ ಜಿ. ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಬಿಡದಿ ಟೌನ್‌ಶಿಪ್ ಯೋಜನೆ ಕುರಿತು ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸರ್ಕಾರ ರೈತರ ಒಪ್ಪಿಗೆಯೊಂದಿಗೆ ಮಾತ್ರ ಯೋಜನೆಯನ್ನು ಜಾರಿಗೆ ತರಲಿದೆ ಎಂದು ತಿಳಿಸಿದರು. ಯಾವುದೇ ಗೊಂದಲ ಅಥವಾ ವಿವಾದವಿಲ್ಲದೆ ಟೌನ್‌ಶಿಪ್ ನಿರ್ಮಾಣವಾಗಬೇಕು. ರೈತರಿಗೆ ನೀಡಲಾಗುತ್ತಿರುವ ಭೂ ಪರಿಹಾರ ಸಮರ್ಪಕವಾಗಿಲ್ಲವೆಂದು ಕಂಡುಬಂದರೆ ಅದನ್ನು ಮರುಪರಿಶೀಲಿಸಿ ಹೆಚ್ಚಿನ ಪರಿಹಾರ ನೀಡಲು ಸರ್ಕಾರ ಸಿದ್ಧವಿದೆ ಎಂದು ಹೇಳಿದರು.

ಎಐ ಹಬ್ ನಿರ್ಮಾಣಕ್ಕಾಗಿ ಟೌನ್‌ಶಿಪ್ ರೂಪಿಸಲಾಗುತ್ತಿದೆ ಎಂಬ ಆರೋಪವನ್ನು ತಳ್ಳಿಹಾಕಿದ ಪರಮೇಶ್ವರ್, ಬೆಂಗಳೂರಿನ ಮೇಲಿನ ಜನಸಂಖ್ಯೆ ಹಾಗೂ ಸಂಚಾರದ ಒತ್ತಡವನ್ನು ಕಡಿಮೆ ಮಾಡುವ ಉದ್ದೇಶದಿಂದಲೇ ಉಪನಗರಗಳ ಅಭಿವೃದ್ಧಿಗೆ ಒತ್ತು ನೀಡಲಾಗಿದೆ ಎಂದು ಹೇಳಿದರು. ಕೋಲಾರ, ತುಮಕೂರು ಮತ್ತು ಬಿಡದಿ ಪ್ರದೇಶಗಳನ್ನು ಯೋಜಿತವಾಗಿ ಅಭಿವೃದ್ಧಿಪಡಿಸಿದರೆ ಬೆಂಗಳೂರಿನ ಮೇಲಿನ ಒತ್ತಡ ಗಣನೀಯವಾಗಿ ಕಡಿಮೆಯಾಗಲಿದೆ ಎಂದು ಅಭಿಪ್ರಾಯಪಟ್ಟರು.

**ಇದೇ ವೇಳೆ ರಾಜ್ಯ ಸರ್ಕಾರದ ಬೃಹತ್ ನೇಮಕಾತಿ ಪ್ರಕ್ರಿಯೆ ಕುರಿತು ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ್ದ ಭರವಸೆಯಂತೆ ಖಾಲಿ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡುತ್ತಿದೆ ಎಂದು ಹೇಳಿದರು. ರಾಜ್ಯದಲ್ಲಿ ಸುಮಾರು 2.50 ಲಕ್ಷ ಹುದ್ದೆಗಳು ಖಾಲಿ ಇದ್ದು, ಅವುಗಳನ್ನು ಕ್ರಮೇಣ ತುಂಬುವ ಯೋಜನೆ ರೂಪಿಸಲಾಗಿದೆ.**

ಇದೇ ವೇಳೆ ರಾಜ್ಯ ಸರ್ಕಾರದ ಬೃಹತ್ ನೇಮಕಾತಿ ಪ್ರಕ್ರಿಯೆ ಕುರಿತು ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ್ದ ಭರವಸೆಯಂತೆ ಖಾಲಿ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡುತ್ತಿದೆ ಎಂದು ಹೇಳಿದರು. ರಾಜ್ಯದಲ್ಲಿ ಸುಮಾರು 2.50 ಲಕ್ಷ ಹುದ್ದೆಗಳು ಖಾಲಿ ಇದ್ದು, ಅವುಗಳನ್ನು ಕ್ರಮೇಣ ತುಂಬುವ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ನಾಗಮೋಹನ್ ದಾಸ್ ನೇತೃತ್ವದ ಸಮಿತಿಯ ಶಿಫಾರಸುಗಳ ಆಧಾರದ ಮೇಲೆ ಮೊದಲು 24 ಸಾವಿರ ಹುದ್ದೆಗಳ ಭರ್ತಿಗೆ ಸಿದ್ಧತೆ ನಡೆದಿತ್ತು. ನಂತರ ಮರುಪರಿಶೀಲನೆ ನಡೆಸಿ ಒಟ್ಟು 72 ಸಾವಿರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೀರ್ಮಾನಿಸಿದೆ ಎಂದು ಹೇಳಿದರು.

ಶಿಕ್ಷಕರು, ವೈದ್ಯರು, ಎಂಜಿನಿಯರ್‌ಗಳು ಸೇರಿದಂತೆ ವಿವಿಧ ಇಲಾಖೆಗಳ ಖಾಲಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಶೀಘ್ರ ಆರಂಭಿಸಲು ಸೂಚನೆ ನೀಡಲಾಗಿದೆ.

ನೇಮಕಾತಿ ಪ್ರಕ್ರಿಯೆಯ ಮೇಲ್ವಿಚಾರಣೆಗೆ ಉಮಾ ಮಹದೇವನ್ ಹಾಗೂ ಗೌರವ್ ಗುಪ್ತ ಅವರನ್ನು ಸರ್ಕಾರ ನೇಮಿಸಿದೆ ಎಂದು ಮಾಹಿತಿ ನೀಡಿದರು. ರಾಜ್ಯದಲ್ಲಿ ಸಾಕಷ್ಟು ನಿರುದ್ಯೋಗಿಗಳಿದ್ದು, ಉದ್ಯೋಗಾವಕಾಶಗಳ ಸೃಷ್ಟಿಗೆ ಸರ್ಕಾರ ಬದ್ಧವಾಗಿದೆ.



**ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಇಂದು ಶ್ರೀಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದರು. ನಂತರ ಧರ್ಮಾಧಿಕಾರಿಗಳಾದ ಪರಮಪೂಜ್ಯ ಡಾ.ಡಿ.ವೀರೇಂದ್ರ ಹೆಗ್ಗಡೆಯವರ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಎಲ್ಲಾ ಬಿಜೆಪಿ ಶಾಸಕರು, ಸಂಸದರು, ವಿಧಾನ ಪರಿಷತ್ ಸದಸ್ಯರು, ಬಿಜೆಪಿ ಪ್ರಮುಖರು ಉಪಸ್ಥಿತರಿದ್ದರು.**

# ವಿದ್ಯುತ್ ವ್ಯತ್ಯಯದಲ್ಲಿ ಇಳಿಕೆ

ಬೆಂಗಳೂರು: ರಾಜ್ಯದ ವಿದ್ಯುತ್ ಪ್ರಸರಣ ವ್ಯವಸ್ಥೆಯನ್ನು ಮತ್ತಷ್ಟು ಸುರಕ್ಷಿತ ಹಾಗೂ ವಿಶ್ವಾಸಾರ್ಹಗೊಳಿಸುವ ನಿಟ್ಟಿನಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್) ಅತ್ಯಾಧುನಿಕ ಡ್ರೋನ್ ತಂತ್ರಜ್ಞಾನವನ್ನು ಅಳವಡಿಸಿಕೊಂಡಿದ್ದು, ಇದರ ಪರಿಣಾಮವಾಗಿ ವಿದ್ಯುತ್ ವ್ಯತ್ಯಯ ಪ್ರಕರಣಗಳಲ್ಲಿ ಶೇಕಡಾ 85ರಷ್ಟು ಇಳಿಕೆ ಕಂಡುಬಂದಿದೆ.

ಹೈ-ವೋಲ್ಟೇಜ್ ಹಾಗೂ ಅತಿ ಹೆಚ್ಚು ವೋಲ್ಟೇಜ್ ವಿದ್ಯುತ್ ಪ್ರಸರಣ ಮಾರ್ಗಗಳ ತಪಾಸಣೆಗಾಗಿ ಬಳಸಲಾಗುತ್ತಿರುವ ಈ ಡ್ರೋನ್‌ಗಳ ಮೂಲಕ ರಾಜ್ಯದಾದ್ಯಂತ 11 ಸಾವಿರಕ್ಕೂ ಹೆಚ್ಚು ವಿದ್ಯುತ್ ಟವರ್‌ಗಳನ್ನು ಪರಿಶೀಲಿಸಲಾಗಿದ್ದು, 1.50 ಲಕ್ಷಕ್ಕೂ ಅಧಿಕ ತಾಂತ್ರಿಕ ದೋಷಗಳನ್ನು ಪತ್ತೆಹಚ್ಚಿ ಸರಿಪಡಿಸಲಾಗಿದೆ.

ಹೈ-ರೆಸಲ್ಯೂಶನ್ ಕ್ಯಾಮೆರಾ, ಥರ್ಮಲ್ ಇಮೇಜಿಂಗ್ ಮತ್ತು ಲಿಡಾರ್ ತಂತ್ರಜ್ಞಾನ ಹೊಂದಿರುವ ಡ್ರೋನ್‌ಗಳು ದಟ್ಟ ಅರಣ್ಯ, ಗುಡ್ಡಗಾಡು ಹಾಗೂ ಜನನಿಬಿಡ ಪ್ರದೇಶಗಳಲ್ಲಿನ ಪ್ರಸರಣ ಮಾರ್ಗಗಳನ್ನು ಅತ್ಯಂತ ನಿಖರವಾಗಿ ಪರಿಶೀಲಿಸಲು ನೆರವಾಗಿವೆ. ವಿದ್ಯುತ್ ಉಪಕರಣಗಳಲ್ಲಿ ಉಂಟಾಗುವ ಶಾಖದ ಅಸಾಮಾನ್ಯತೆ, ಸಡಿಲ ಸಂಪರ್ಕ ಹಾಗೂ ಸಂಭಾವ್ಯ ದೋಷಗಳನ್ನು ಮುಂಚಿತವಾಗಿಯೇ ಪತ್ತೆಹಚ್ಚುವ ಮೂಲಕ ದೊಡ್ಡ ಮಟ್ಟದ ವಿದ್ಯುತ್ ವ್ಯತ್ಯಯಗಳನ್ನು ತಡೆಯಲಾಗಿದೆ.

ಡ್ರೋನ್ ತಪಾಸಣೆಯಿಂದಾಗಿ ಹಿಂದೆ 519 ಪ್ರಕರಣಗಳಿದ್ದ ವಿದ್ಯುತ್ ವ್ಯತ್ಯಯಗಳು ಕೇವಲ 73ಕ್ಕೆ ಇಳಿದಿದ್ದು, ಇದು ಶೇಕಡಾ 85ರಷ್ಟು ಸುಧಾರಣೆಯನ್ನು ದಾಖಲಿಸಿದೆ. ಜೊತೆಗೆ 3,370 ಕಿಲೋಮೀಟರ್‌ಗಿಂತ ಹೆಚ್ಚು ವಿದ್ಯುತ್ ಮಾರ್ಗಗಳನ್ನು ಯಶಸ್ವಿಯಾಗಿ ತಪಾಸಣೆ ಮಾಡಲಾಗಿದೆ.

ಡ್ರೋನ್‌ಗಳಿಂದ ಸಂಗ್ರಹವಾಗುವ ಮಾಹಿತಿಯನ್ನು ವೆಬ್ ಮತ್ತು ಮೊಬೈಲ್ ಆಪ್‌ಗಳ ಮೂಲಕ ಅಧಿಕಾರಿಗಳು ನೈಜ ಸಮಯದಲ್ಲಿ ವೀಕ್ಷಿಸುತ್ತಿದ್ದು, ಸಮಸ್ಯೆಗಳಿರುವ ಸ್ಥಳಗಳನ್ನು ತ್ವರಿತವಾಗಿ ಗುರುತಿಸಿ ದುರಸ್ತಿ ಕಾರ್ಯ ಕೈಗೊಳ್ಳಲಾಗುತ್ತಿದೆ. ಈ ದತ್ತಾಂಶವನ್ನು ಮುಂದಿನ ದಿನಗಳಲ್ಲಿ ಡಿಜಿಟಲ್ ಟ್ವಿನ್, ಜಿಐಎಸ್ ಹಾಗೂ ಇಆರ್‌ಪಿ ವ್ಯವಸ್ಥೆಗಳೊಂದಿಗೆ ಸಂಯೋಜಿಸಲು ಸಿದ್ಧತೆ ನಡೆಸಲಾಗಿದೆ.

ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಮಾತನಾಡಿ, ರಾಜ್ಯದ 45 ಸಾವಿರ ಕಿಲೋಮೀಟರ್ ಉದ್ದದ ವಿದ್ಯುತ್ ಮಾರ್ಗಗಳನ್ನು ಮಾನವ ಸಂಪನ್ಮೂಲದ ಮೂಲಕ ಪರಿಶೀಲಿಸುವುದು ಸಮಯ ತೆಗೆದುಕೊಳ್ಳುವ ಹಾಗೂ ಅಪಾಯಕಾರಿ ಕಾರ್ಯವಾಗಿದೆ. ಡ್ರೋನ್ ತಂತ್ರಜ್ಞಾನದ ನೆರವಿನಿಂದ ಅತಿ ಕಡಿಮೆ ಸಮಯದಲ್ಲಿ 360 ಡಿಗ್ರಿ ತಪಾಸಣೆ ನಡೆಸಿ ಸಣ್ಣ ದೋಷಗಳನ್ನೂ ಪತ್ತೆಹಚ್ಚಲು ಸಾಧ್ಯವಾಗುತ್ತಿದೆ ಎಂದು ತಿಳಿಸಿದರು.

# ಕೃಷಿ ತಾಪಂಡ ಹೇಳಿಕೆ ದಾಖಲು

ಬೆಂಗಳೂರು: ನಟಿ ಕೃಷಿ ತಾಪಂಡ ಅವರ ಸ್ನೇಹಿತ ವೈಶಾಖ್ ಆತ್ಮಹತ್ಯೆ ಪ್ರಕರಣದ ತನಿಖೆಯನ್ನು ಪೊಲೀಸರು ಮುಂದುವರಿಸಿದ್ದು, ಘಟನೆ ನಡೆದ ದಿನವೇ ನಟಿಯ ಹೇಳಿಕೆಯನ್ನು ದಾಖಲಿಸಿಕೊಂಡಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಅವರ ಮೊಬೈಲ್‌ನ್ನು ಪರಿಶೀಲಿಸಿದ ಬಳಿಕ ವಾಪಸ್ ನೀಡಿದ್ದಾರೆ.

ಪೊಲೀಸರ ವಿಚಾರಣೆ ವೇಳೆ ಕೃಷಿ ತಾಪಂಡ ಅವರು ಮೂರು ದಿನಗಳ ಕಾಲ ಕ್ಷೇಮವನಕ್ಕೆ ತೆರಳಿದ್ದೆ ಎಂದು ತಿಳಿಸಿದ್ದಾರೆ. ಬುಧವಾರ ರಾತ್ರಿ ಸುಮಾರು 11 ಗಂಟೆಗೆ ಮನೆಗೆ ಹಿಂದಿರುಗಿದಾಗ ಫ್ಲ್ಯಾಟ್‌ನ ಬಾಗಿಲು ಲಾಕ್ ಆಗಿತ್ತು. ಫ್ಲ್ಯಾಟ್‌ಗೆ ಎರಡು ಕೀಗಳಿದ್ದು, ಒಂದು ತಮ್ಮ ಬಳಿ ಹಾಗೂ ಇನ್ನೊಂದು ವೈಶಾಖ್ ಬಳಿ ಇತ್ತು. ತಮ್ಮ ಬಳಿಯಿದ್ದ ಕೀಯಿಂದ ಬಾಗಿಲು ತೆರೆದಾಗ ವೈಶಾಖ್ ನೇಣು ಬಿಗಿದ ಸ್ಥಿತಿಯಲ್ಲಿ ಕಂಡುಬಂದರು ಎಂದು ಹೇಳಿಕೆ ನೀಡಿದ್ದಾರೆ.

ಬಳಿಕ ಸೀರೆಯನ್ನು ಕತ್ತರಿಸಿ ಅವರನ್ನು ಕೆಳಗಿಳಿಸಿ, ತಕ್ಷಣವೇ ಪೊಲೀಸರಿಗೆ ಹಾಗೂ ವೈಶಾಖ್ ಅವರ ಕುಟುಂಬದವರಿಗೆ ಮಾಹಿತಿ ನೀಡಿದ್ದಾಗಿ ಅವರು ತಿಳಿಸಿದ್ದಾರೆ. ತನಿಖೆಯ ಭಾಗವಾಗಿ ಪೊಲೀಸರು ಕೃಷಿ ತಾಪಂಡ ಅವರ ಮೊಬೈಲ್‌ನ್ನು ಪರಿಶೀಲಿಸಿ, ಸಂದೇಶಗಳು, ಕರೆ ವಿವರಗಳು ಹಾಗೂ ವಾಟ್ಸ್‌ಆಪ್ ಸಂಭಾಷಣೆಗಳನ್ನು ಪರಿಶೀಲಿಸಿದ್ದಾರೆ. ಯಾವುದೇ ಅನುಮಾನಾಸ್ಪದ ಮಾಹಿತಿ ಪತ್ತೆಯಾಗದ ಹಿನ್ನೆಲೆಯಲ್ಲಿ ಹೇಳಿಕೆ ದಾಖಲಿಸಿಕೊಂಡು ಮೊಬೈಲ್ ವಾಪಸ್ ನೀಡಿದ್ದಾರೆ.

ಸ್ಥಳಕ್ಕೆ ತೆರಳಿದಾಗ ಕೃಷಿ ತಾಪಂಡ ಅವರ ಫ್ಲ್ಯಾಟ್‌ನ ಕೋಣೆಯಲ್ಲಿ ವೈಶಾಖ್ ಅವರ ಮೃತದೇಹ ಪತ್ತೆಯಾಗಿದ್ದು, ಸೀರೆಯಿಂದ ನೇಣು ಬಿಗಿದ ಸ್ಥಿತಿಯಲ್ಲಿದ್ದರು ಎಂದು ದೂರಿನಲ್ಲಿ ತಿಳಿಸಲಾಗಿದೆ.

ಬಳಿಕ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಲಾಗಿದೆ.

ದೂರಿನಲ್ಲಿ ಯಾರ ಮೇಲೂ ನೇರ ಅನುಮಾನ ವ್ಯಕ್ತಪಡಿಸದಿರುವ ಮೇಘನಾ, ವೈಶಾಖ್ ಆತ್ಮಹತ್ಯೆಗೆ ಕಾರಣವೇನು ಎಂಬುದನ್ನು ಸಮಗ್ರವಾಗಿ ತನಿಖೆ ನಡೆಸಿ ಪತ್ತೆಹಚ್ಚುವಂತೆ ಪೊಲೀಸರಿಗೆ ಮನವಿ ಮಾಡಿದ್ದಾರೆ.

ಭಾರತ ಸಾರಥಿ
27/06/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಎಂ.ಎನ್.ಅನುಚೇತ್ ಅಧಿಕಾರ ಸ್ವೀಕಾರ



ಬೆಂಗಳೂರು

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೂತನ ಆಯುಕ್ತರಾಗಿ ಹಿರಿಯ ಐಪಿಎಸ್ ಅಧಿಕಾರಿ ಡಿಐಜಿ ಎಂ.ಎನ್. ಅನುಚೇತ್ ಗುರುವಾರ ಅಧಿಕಾರ ಸ್ವೀಕರಿಸಿದರು.

ಇದುವರೆಗೆ ಇಲಾಖೆಯ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿದ್ದ ಎಡಿಜಿಪಿ ಹೇಮಂತ್ ಎಂ. ನಿಂಬಾಳ್ಕರ್ ಅವರು ಅಧಿಕಾರ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳು ನೂತನ ಆಯುಕ್ತರಿಗೆ ಶುಭ ಹಾರೈಸಿದರು.

ಸರ್ಕಾರವು ಎಂ.ಎನ್. ಅನುಚೇತ್ ಅವರಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರ ಹುದ್ದೆಯ ಜೊತೆಗೆ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯ ಆಯುಕ್ತರ ಹೆಚ್ಚುವರಿ ಪ್ರಭಾರವನ್ನೂವಹಿಸಿದೆ.

ಕೋಲಾರ ಜಿಲ್ಲೆಯ ಮೂಲದ ಎಂ.ಎನ್. ಅನುಚೇತ್ ಅವರು ಬೆಂಗಳೂರಿನ ಆರ್.ವಿ. ಇಂಜಿನಿಯರಿಂಗ್ ಕಾಲೇಜಿನಲ್ಲಿ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಪದವಿ ಪಡೆದಿದ್ದು, 2008ರ ಸಿವಿಲ್ ಸರ್ವಿಸ್ ಪರೀಕ್ಷೆಯಲ್ಲಿ ಯಶಸ್ಸು ಸಾಧಿಸಿ 2009ರ ಬ್ಯಾಚ್‌ನ ಕರ್ನಾಟಕ ಕೇಡರ್ ಐಪಿಎಸ್ ಅಧಿಕಾರಿಯಾಗಿ ಆಯ್ಕೆಯಾಗಿದ್ದರು.

2011ರಲ್ಲಿ ಪುತ್ತೂರಿನಲ್ಲಿ ಸಹಾಯಕ ಪೊಲೀಸ್ ಅಧೀಕ್ಷಕರಾಗಿ ಸೇವೆ ಆರಂಭಿಸಿದ ಅವರು, ನಂತರ ಸಿಐಡಿ ವಿಭಾಗದ ಎಸ್ಪಿ, ಬೆಂಗಳೂರು ಕೇಂದ್ರ ವಿಭಾಗದ ಡಿಸಿಪಿ ಸೇರಿದಂತೆ ಹಲವು ಪ್ರಮುಖ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ್ದಾರೆ. ಇತ್ತೀಚೆಗೆ ಬೆಂಗಳೂರು ನಗರ ಜಂಟಿ ಪೊಲೀಸ್ ಆಯುಕ್ತ (ಸಂಚಾರ)ರಾಗಿ ಕಾರ್ಯನಿರ್ವಹಿಸಿ, ಸಂಚಾರ ನಿರ್ವಹಣೆಯಲ್ಲಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಅಳವಡಿಕೆಗೆ ಮಹತ್ವದ ಕೊಡುಗೆ ನೀಡಿದ್ದರು.

ಅತ್ಯುತ್ತಮ ತನಿಖಾ ಕಾರ್ಯಕ್ಷಮತೆಗೆ ಕೇಂದ್ರ ಸರ್ಕಾರದಿಂದ ಪ್ರತಿಷ್ಠಿತ ಕೇಂದ್ರ ಗೃಹ ಸಚಿವರ ಅತ್ಯುತ್ತಮ ತನಿಖಾ ಪದಕ ಪಡೆದಿರುವ ಅನುಚೇತ್ ಅವರು, ಆಡಳಿತಾತ್ಮಕ ದಕ್ಷತೆ ಹಾಗೂ ತಂತ್ರಜ್ಞಾನ ಬಳಕೆಯಲ್ಲಿ ಹೆಸರುವಾಸಿಯಾಗಿದ್ದಾರೆ.

ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಇಲಾಖೆಯ ಜಂಟಿ ನಿರ್ದೇಶಕರಾದ ಮಂಜುನಾಥ ಡೊಳ್ಳಿನ್, ಸಿದ್ದೇಶ್ವರಪ್ಪ ಜಿ.ಬಿ., ಸಿ.ಆರ್. ನವೀನ್, ಉಪನಿರ್ದೇಶಕರಾದ ಬಿ.ಕೆ. ರಾಮಲಿಂಗಪ್ಪ, ಶಫಿ ಸಾದುದ್ದೀನ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

ವಾರ್ತಾ ಇಲಾಖೆಯ ಕಾರ್ಯ ಚಟುವಟಿಕೆಗಳಿಗೆ ಹೊಸ ಚೈತನ್ಯ ಮತ್ತು ತಂತ್ರಜ್ಞಾನ ಆಧಾರಿತ ಕಾರ್ಯವೈಖರಿ ನೀಡುವ ನಿರೀಕ್ಷೆ ಎಂ.ಎನ್. ಅನುಚೇತ್ ಅವರ ನೇಮಕಾತಿಯಿಂದ ಮೂಡಿದೆ.

# ವಾರ್ತಾ ಇಲಾಖೆ ಆಯುಕ್ತರಿಗೆ ಕೆಯುಡಬ್ಲ್ಯೂಜೆ ಶುಭ ಹಾರೈಕೆ



ಬೆಂಗಳೂರು

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನೂತನ ಆಯುಕ್ತರಾಗಿ ಅಧಿಕಾರ ವಹಿಸಿಕೊಂಡಿರುವ ಎಂ.ಎನ್.ಅನುಚೇತ್ ಅವರನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ನೇತೃತ್ವದ ಪದಾಧಿಕಾರಿಗಳ ನಿಯೋಗ ಭೇಟಿ ಮಾಡಿ ಶುಭ ಹಾರೈಸಿತು.

ಈ ಸಂದರ್ಭದಲ್ಲಿ ಕೆಯುಡಬ್ಲ್ಯೂಜೆ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ರಾಜ್ಯ ಖಜಾಂಚಿ ವಾಸುದೇವ ಹೊಳ್ಳ, ರಾಜ್ಯ ಸಮಿತಿ ಸದಸ್ಯ ದೇವರಾಜು ಮತ್ತಿತರರು ಹಾಜರಿದ್ದರು.


ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ಮತ್ತು ಮಾಧ್ಯಮ ಸಂಜೀವಿನಿ ಯೋಜನೆಯ ಬಗ್ಗೆ ನೂತನ ಆಯುಕ್ತರಿಗೆ ಗಮನ ಸೆಳೆಯಲಾಯಿತು.

ಇದೇ ಸಂದರ್ಭದಲ್ಲಿ ಜುಲೈ 1ರಂದು ನಡೆಯುವ ಪತ್ರಿಕಾ ದಿನಾಚರಣೆ ಕಾರ್ಯಕ್ರಮಕ್ಕೆ ಆಹ್ವಾನಿಸಲಾಯಿತು. ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಷಾಖಾನಂ ಉಪಸ್ಥಿತರಿದ್ದರು.

# ಬೆಂಗಳೂರಿನಲ್ಲಿ ವ್ಯಾಪ್ತಿ ವಿಸ್ತರಿಸಿದ ನ್ಯೂಮಿ ಹೊಸ ಮಳಿಗೆಗಳು

ಬೆಂಗಳೂರು

ಭಾರತದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಜೆನ್ ಝೀ ಫ್ಯಾಷನ್-ಟೆಕ್ ಬ್ರಾಂಡ್ ನ್ಯೂಮಿ, ಬೆಂಗಳೂರಿನಲ್ಲಿ ತನ್ನ ಚಿಲ್ಲರೆ ವ್ಯಾಪಾರ ಜಾಲವನ್ನು ಮತ್ತಷ್ಟು ವಿಸ್ತರಿಸಿದ್ದು, ಕಮ್ಮನಹಳ್ಳಿಯಲ್ಲಿ ಹೊಸ ಮಳಿಗೆಯನ್ನು ಆರಂಭಿಸಿದೆ. ಜೊತೆಗೆ, ಮುಂದಿನ ತಿಂಗಳಲ್ಲಿ ಕೋರಮಂಗಲದಲ್ಲೂ ಮತ್ತೊಂದು ಮಳಿಗೆಯನ್ನು ಆರಂಭಿಸಲು ಸಿದ್ಧತೆ ನಡೆಸಿದೆ.




ಈ ಹೊಸ ಸೇರ್ಪಡೆಗಳೊಂದಿಗೆ ನ್ಯೂಮಿ ಬೆಂಗಳೂರಿನಲ್ಲಿ ಒಟ್ಟು ಏಳು ಮಳಿಗೆಗಳನ್ನು ಹೊಂದಲಿದ್ದು, ಕೋರಮಂಗಲ ಶಾಖೆ ಆರಂಭವಾದ ಬಳಿಕ ಬೆಂಗಳೂರು ಬ್ರಾಂಡ್‌ನ ಅತ್ಯಂತ ದೊಡ್ಡ ಹಾಗೂ ಪ್ರಮುಖ ಚಿಲ್ಲರೆ ಮಾರುಕಟ್ಟೆಗಳಲ್ಲಿ ಒಂದಾಗಿ ಹೊರಹೊಮ್ಮಲಿದೆ.

ನಗರದ ಯುವಜನತೆ ಮತ್ತು ಜೀವನಶೈಲಿಯ ಪ್ರಮುಖ ಕೇಂದ್ರಗಳಾದ ಕಮ್ಮನಹಳ್ಳಿ ಹಾಗೂ ಕೋರಮಂಗಲದಲ್ಲಿ ಸ್ಥಾಪಿಸಲಾಗಿರುವ ಈ ಮಳಿಗೆಗಳು, ಡಿಜಿಟಲ್-ಪ್ರಥಮ ಫ್ಯಾಷನ್ ಅನುಭವವನ್ನು ಗ್ರಾಹಕರಿಗೆ ಒದಗಿಸುವ ಉದ್ದೇಶದಿಂದ ವಿನ್ಯಾಸಗೊಳಿಸಲಾಗಿದೆ.

ಸುಮಾರು 2,000 ಚದರ ಅಡಿ ವಿಸ್ತೀರ್ಣದ ಎರಡು ಮಹಡಿಗಳ ಕಮ್ಮನಹಳ್ಳಿ ಮಳಿಗೆಯಲ್ಲಿ ನ್ಯೂಮಿಯ ಇತ್ತೀಚಿನ ಫ್ಯಾಷನ್ ಸಂಗ್ರಹಗಳು, ತಂತ್ರಜ್ಞಾನ ಆಧಾರಿತ ಖರೀದಿ ಸೌಲಭ್ಯಗಳು ಮತ್ತು ಆಕರ್ಷಕ ಶಾಪಿಂಗ್ ಅನುಭವ ಲಭ್ಯವಿದೆ. ಕೋರಮಂಗಲ ಮಳಿಗೆ ಸುಮಾರು 1,200 ಚದರ ಅಡಿ ವಿಸ್ತೀರ್ಣ ಹೊಂದಿದ್ದು, ಶೀಘ್ರದಲ್ಲೇ ಸಾರ್ವಜನಿಕರ ಸೇವೆಗೆ ಲಭ್ಯವಾಗಲಿದೆ.

# 62 ಲಕ್ಷ ಮಕ್ಕಳಿಗೆ ಪೋಲಿಯೋ ಲಸಿಕೆ ಗುರಿ

ಬೆಂಗಳೂರು

ರಾಜ್ಯದಲ್ಲಿ ಜೂನ್ 28ರಂದು ಒಂದು ಸುತ್ತಿನ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು, 0 ರಿಂದ 5 ವರ್ಷದೊಳಗಿನ ಸುಮಾರು 62 ಲಕ್ಷ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆ ನೀಡುವ ಗುರಿ ಹೊಂದಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ರಾಜ್ಯದ ಎಲ್ಲ ಆಸ್ಪತ್ರೆಗಳು, ಅಂಗನವಾಡಿಗಳು, ಗುಡ್ಡಗಾಡು ಪ್ರದೇಶಗಳು, ಇಟ್ಟಿಗೆ ಭಟ್ಟಿಗಳು, ಕಾಮಗಾರಿ ಸ್ಥಳಗಳು, ಸ್ಲಂ ಪ್ರದೇಶಗಳು, ವಲಸೆ ಕಾರ್ಮಿಕರ ವಸತಿಗಳು, ತೋಟದ ಮನೆಗಳು, ರೈಲು ನಿಲ್ದಾಣಗಳು, ಮೆಟ್ರೋ ನಿಲ್ದಾಣಗಳು, ವಿಮಾನ ನಿಲ್ದಾಣಗಳು ಹಾಗೂ ಇತರೆ ಜನನಿಬಿಡ ಪ್ರದೇಶಗಳಲ್ಲಿ ವಿಶೇಷ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಈ ಬಾರಿ ಟೈಪ್-1 ಮತ್ತು ಟೈಪ್-3 ತಳಿಗಳ ವಿರುದ್ಧ ರಕ್ಷಣೆ ನೀಡುವ ಪೋಲಿಯೋ ಲಸಿಕೆಯನ್ನು ಬಳಸಲಾಗುತ್ತಿದ್ದು, ಜೂನ್ 28ರಂದು ಬೂತ್‌ಗಳಲ್ಲಿ ಲಸಿಕೆ ನೀಡಿದ ಬಳಿಕ ಮುಂದಿನ ಎರಡು-ಮೂರು ದಿನಗಳ ಕಾಲ ಮನೆ-ಮನೆಗೆ ತೆರಳಿ ಮಕ್ಕಳಿಗೆ ಲಸಿಕೆ ಹಾಕಲಾಗುತ್ತದೆ. ವಲಸಿಗರು ಹಾಗೂ ಹೆಚ್ಚಿನ ಅಪಾಯದ ಪ್ರದೇಶಗಳಲ್ಲಿ ವಾಸಿಸುವ ಮಕ್ಕಳಿಗೆ ವಿಶೇಷ ಆದ್ಯತೆ ನೀಡಲಾಗುತ್ತಿದೆ.

ಸಚಿವರ ಪ್ರಕಾರ, ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಡಿ ಪ್ರತಿಯೊಂದು ಮಗುವಿಗೂ ಐದು ಡೋಸ್ ಓರಲ್ ಪೋಲಿಯೋ ವ್ಯಾಕ್ಸಿನ್ ಹಾಗೂ ಮೂರು ಡೋಸ್ ಇಂಜೆಕ್ಟಬಲ್ ಪೋಲಿಯೋ ವ್ಯಾಕ್ಸಿನ್ ನೀಡಲಾಗುತ್ತಿದೆ. ಯಾವುದೇ ಮಗು ಲಸಿಕೆಯಿಂದ ವಂಚಿತರಾಗದಂತೆ ನೋಡಿಕೊಳ್ಳುವುದು ಸರ್ಕಾರದ ಮುಖ್ಯ ಗುರಿಯಾಗಿದೆ.

ಭಾರತವು 2014ರಲ್ಲಿ ಅಧಿಕೃತವಾಗಿ ಪೋಲಿಯೋ ಮುಕ್ತ ರಾಷ್ಟ್ರದ ಮಾನ್ಯತೆ ಪಡೆದಿದ್ದು, ಕಳೆದ 14 ವರ್ಷಗಳಿಂದ ಯಾವುದೇ ಹೊಸ ಪೋಲಿಯೋ ಪ್ರಕರಣ ವರದಿಯಾಗಿಲ್ಲ. ಆದಾಗ್ಯೂ, ನೆರೆಯ ಕೆಲವು ರಾಷ್ಟ್ರಗಳಲ್ಲಿ ಇನ್ನೂ ಪೋಲಿಯೋ ವೈರಸ್ ಕಂಡುಬರುತ್ತಿರುವ ಕಾರಣ ಮುನ್ನೆಚ್ಚರಿಕೆ ಕ್ರಮವಾಗಿ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ನಿರಂತರವಾಗಿ ನಡೆಸಲಾಗುತ್ತಿದೆ.


ರಾಜ್ಯದಲ್ಲಿ ಈ ಅಭಿಯಾನಕ್ಕಾಗಿ 36,076 ಪೋಲಿಯೋ ಬೂತ್‌ಗಳು, 988 ಸಂಚಾರಿ ತಂಡಗಳು ಹಾಗೂ 2,125 ಟ್ರಾನ್ಸಿಟ್ ತಂಡಗಳನ್ನು ನಿಯೋಜಿಸಲಾಗಿದೆ. ಒಟ್ಟು 1.14 ಲಕ್ಷಕ್ಕೂ ಹೆಚ್ಚು ಲಸಿಕಾ ಕಾರ್ಯಕರ್ತರು ಮತ್ತು 7,197 ಮೇಲ್ವಿಚಾರಕರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಈ ಹಿಂದೆ ಎಷ್ಟೇ ಬಾರಿ ಪೋಲಿಯೋ ಲಸಿಕೆ ಪಡೆದಿದ್ದರೂ, ಜೂನ್ 28ರಂದು ನಡೆಯುವ ಅಭಿಯಾನದಲ್ಲಿ ಮತ್ತೆ ಎರಡು ಹನಿ ಲಸಿಕೆ ಹಾಕಿಸುವಂತೆ ಪೋಷಕರಿಗೆ ಸಚಿವರು ಮನವಿ ಮಾಡಿದ್ದಾರೆ. "ಪೋಲಿಯೋ ಮುಕ್ತ ಭಾರತ, ಪೋಲಿಯೋ ಮುಕ್ತ ಕರ್ನಾಟಕ" ಎಂಬ ಘೋಷಣೆಯಡಿ ನಡೆಯುವ ಈ ಅಭಿಯಾನವನ್ನು ಯಶಸ್ವಿಗೊಳಿಸಲು ಸಾರ್ವಜನಿಕರ ಸಹಕಾರ ಅಗತ್ಯ ಎಂದು

# ಅಡ್ಡಮತದಾನಕ್ಕೆ ವಿಜಯೇಂದ್ರ ಕಾರಣ: ಎಸ್‌ಟಿಎಸ್

ಬೆಂಗಳೂರು

ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಶಾಸಕರ ಅಡ್ಡಮತದಾನ ವಿಚಾರ ರಾಜ್ಯ ರಾಜಕಾರಣದಲ್ಲಿ ಹೊಸ ತಿರುವು ಪಡೆದುಕೊಂಡಿದ್ದು, ಬಿಜೆಪಿ ಉಚ್ಚಾಟಿತ ಶಾಸಕ ಎಸ್.ಟಿ. ಸೋಮಶೇಖರ್ ಪಕ್ಷದ ರಾಜ್ಯ ನಾಯಕರ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದಾರೆ.



ಮಾಧ್ಯಮ ಗಳೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಪ್ರತಿಪಕ್ಷ ನಾಯಕ ಆರ್. ಅಶೋಕ್ ಪರಸ್ಪರರ ಅಭ್ಯರ್ಥಿಗಳನ್ನು ಸೋಲಿಸುವ ಉದ್ದೇಶದಿಂದಲೇ ಅಡ್ಡಮತದಾನ ಮಾಡಿಸಿರಬಹುದು ಎಂದು ಆರೋಪಿಸಿದರು. ಈ ಬಗ್ಗೆ ಅನುಮಾನಗಳಿಗೆ ತೆರೆ ಎಳೆಯಬೇಕಾದರೆ ಇಬ್ಬರೂ ಧರ್ಮಸ್ಥಳಕ್ಕೆ ತೆರಳಿ ಪ್ರಮಾಣ ಮಾಡಲಿ ಎಂದು ಸವಾಲು ಹಾಕಿದರು.

ಪಕ್ಷದಿಂದ ತಮ್ಮನ್ನು ಉಚ್ಚಾಟನೆ ಮಾಡಿರುವ ಕ್ರಮದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಸೋಮಶೇಖರ್, ಅಡ್ಡಮತದಾನಕ್ಕೆ ಪಕ್ಷದ ಆಂತರಿಕ ಕಲಹವೇ ಕಾರಣ ಎಂದು ಹೇಳಿದರು. ವಿಧಾನ ಪರಿಷತ್ ಚುನಾವಣೆಗೆ ಮುನ್ನ ಶಾಸಕರನ್ನು ಒಗ್ಗೂಡಿಸುವ ಕೆಲಸವನ್ನು ನಾಯಕತ್ವ ಮಾಡಬೇಕಿತ್ತು. ಆದರೆ ಬಿಜೆಪಿಯಲ್ಲಿ ಅಂತಹ ಪ್ರಯತ್ನಗಳೇ ನಡೆದಿಲ್ಲ ಎಂದು ದೂರಿದರು.

"ಕಾಂಗ್ರೆಸ್ ಪಕ್ಷದಲ್ಲಿ ಶಾಸಕರಿಗೆ ಚುನಾವಣಾ ಪ್ರಕ್ರಿಯೆ ಕುರಿತು ಪೂರ್ವಭಾವಿ ತರಬೇತಿ ನೀಡಲಾಗಿತ್ತು. ಆದರೆ ಬಿಜೆಪಿಯಲ್ಲಿ ವಿಪ್ ಕೂಡ ಸಮರ್ಪಕವಾಗಿ ಜಾರಿ ಮಾಡಲಿಲ್ಲ. ಚುನಾವಣೆ ಬೆಳಗ್ಗೆ 9 ಗಂಟೆಗೆ ಇದ್ದರೂ, ಕೊನೆಯ ಕ್ಷಣದಲ್ಲಿ ಮಾತ್ರ ಮಾಹಿತಿ ನೀಡಲಾಯಿತು. ಈ ನಿರ್ಲಕ್ಷ್ಯವೇ ಅಡ್ಡಮತದಾನಕ್ಕೆ ಕಾರಣವಾಗಿದೆ," ಎಂದು ಅವರು ಹೇಳಿದರು.

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರ ಹೇಳಿಕೆಗೂ ತಿರುಗೇಟು ನೀಡಿದ ಸೋಮಶೇಖರ್, "ನಾನು ಮತ್ತು ಶಿವರಾಮ ಹೆಬ್ಬಾರ್ ರಾಜೀನಾಮೆ ನೀಡಬೇಕು ಎಂದು ಹೇಳುವ ಮೊದಲು ಪಕ್ಷದ ಒಳಗಿನ ಸಮಸ್ಯೆಗಳನ್ನು ಸರಿಪಡಿಸಲಿ. ಶೋಭಾ ಕರಂದ್ಲಾಜೆ ಅವರಿಗೆ ಅಶೋಕ್ ಕಂಡರೂ ಆಗುವುದಿಲ್ಲ, ವಿಜಯೇಂದ್ರ ಕಂಡರೂ ಆಗುವುದಿಲ್ಲ. ಬಿಜೆಪಿಯಲ್ಲಿನ ಇಂದಿನ ಗೊಂದಲಗಳಿಗೆ ಅವರೂ ಕಾರಣರಾಗಿದ್ದಾರೆ," ಎಂದು ವಾಗ್ದಾಳಿ ನಡೆಸಿದರು.

# ಎಸ್‌ಎಸ್ ಇನ್ನೋವೇಶನ್ಸ್‌ಗೆ 'ಔಟ್‌ಸ್ಟ್ಯಾಂಡಿಂಗ್ ಕಂಪನಿ' ಪ್ರಶಸ್ತಿ

ಮಂಗಳೂರು

ಭಾರತದ ವೈದ್ಯಕೀಯ ತಂತ್ರಜ್ಞಾನ ಕ್ಷೇತ್ರಕ್ಕೆ ಜಾಗತಿಕ ಮಟ್ಟದಲ್ಲಿ ಮಹತ್ವದ ಗೌರವ ದೊರೆತಿದೆ. ಸರ್ಜಿಕಲ್ ರೋಬೋಟಿಕ್ಸ್ ಟೆಕ್ನಾಲಜಿ (ಎಸ್‌ಆರ್‌ಟಿ) ಇಂಡಸ್ಟ್ರಿ ಅವಾರ್ಡ್ಸ್ 2026ರಲ್ಲಿ ಭಾರತದ ಎಸ್‌ಎಸ್ ಇನ್ನೋವೇಶನ್ಸ್ ಇಂಟರ್ನ್ಯಾಷನಲ್ ಸಂಸ್ಥೆ ಪ್ರತಿಷ್ಠಿತ 'ಔಟ್‌ಸ್ಟ್ಯಾಂಡಿಂಗ್ ಕಂಪನಿ' ಪ್ರಶಸ್ತಿಯನ್ನು ಪಡೆದು ಹೊಸ ಇತಿಹಾಸ ನಿರ್ಮಿಸಿದೆ.




ರೋಬೋಟಿಕ್ ಶಸ್ತ್ರಚಿಕಿತ್ಸಾ ತಂತ್ರಜ್ಞಾನ ಪ್ರಶಸ್ತಿಗಳಲ್ಲಿ ಒಂದಾದ ಎಸ್‌ಆರ್‌ಟಿ ಅವಾರ್ಡ್ಸ್‌ನಲ್ಲಿ ಈ ಸಾಧನೆ ದೇಶದ ಮೆಡ್‌ಟೆಕ್ ಕ್ಷೇತ್ರದ ಸಾಮರ್ಥ್ಯವನ್ನು ಮತ್ತೊಮ್ಮೆ ಜಗತ್ತಿಗೆ ಪರಿಚಯಿಸಿದೆ.

ರೋಬೋಟಿಕ್ ಶಸ್ತ್ರಚಿಕಿತ್ಸಾ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಇಂಟ್ಯೂಟಿವ್, ಮೆಡ್‌ಟ್ರಾನಿಕ್, ಜಾನ್ಸನ್ ಅಂಡ್ ಜಾನ್ಸನ್ ಮೆಡ್‌ಟೆಕ್, ಡಿಸ್ಟಾಲ್‌ಮೋಷನ್, ಮೆರಿಲ್, ಮೈಕ್ರೋಪೋರ್ಟ್, ಥಿಂಕ್ ಸರ್ಜಿಕಲ್, ಫ್ಯುಟೆಕ್ ಹಾಗೂ ಪ್ರೆಸಿಷನ್ ಐಒ ಗ್ರೂಪ್ ಸೇರಿದಂತೆ ಜಾಗತಿಕ ದಿಗ್ಗಜ ಸಂಸ್ಥೆಗಳ ನಡುವಿನ ತೀವ್ರ ಸ್ಪರ್ಧೆಯಲ್ಲಿ ಭಾರತೀಯ ಸಂಸ್ಥೆ ಪ್ರಶಸ್ತಿ ಗೆದ್ದಿರುವುದು ವಿಶೇಷವಾಗಿದೆ.

ಈ ಪ್ರಶಸ್ತಿಯನ್ನು ಗೆದ್ದುಕೊಂಡಿರುವ ಎಸ್‌ಎಸ್ ಇನ್ನೋವೇಶನ್ಸ್, ಜಾಗತಿಕ ಮಟ್ಟದಲ್ಲಿ ಈ ಗೌರವಕ್ಕೆ ಪಾತ್ರವಾದ ಮೊದಲ ಭಾರತೀಯ ಕಂಪನಿ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ವಿಶ್ವದ ಅತ್ಯಂತ ಪ್ರತಿಷ್ಠಿತ

# ಅಡ್ಡಮತದಾನ ವಿವಾದದ ಮಧ್ಯೆ ಧರ್ಮಸ್ಥಳಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಭೇಟಿ

ಬೆಂಗಳೂರು

ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡಮತದಾನ ಪ್ರಕರಣದ ಹಿನ್ನೆಲೆಯಲ್ಲಿ ಬಿಜೆಪಿ ಒಳರಾಜಕೀಯ ಚಟುವಟಿಕೆಗಳು ತೀವ್ರಗೊಂಡಿರುವ ನಡುವೆಯೇ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ನಾಳೆ ಧರ್ಮಸ್ಥಳಕ್ಕೆ ಭೇಟಿ ನೀಡಿ ಶ್ರೀ ಕ್ಷೇತ್ರ ಮಂಜುನಾಥ ಸ್ವಾಮಿಯ ದರ್ಶನ ಪಡೆಯಲಿದ್ದಾರೆ.



ಪರಿಷತ್ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗೆ ಅಡ್ಡಮತದಾನ ಮಾಡಿದ ಶಾಸಕರನ್ನು ಪತ್ತೆಹಚ್ಚುವ ಉದ್ದೇಶದಿಂದ ಧರ್ಮಸ್ಥಳದಲ್ಲಿ ಬಿಜೆಪಿ ಶಾಸಕಾಂಗ ಪಕ್ಷದ ಸಭೆ ನಡೆಸಿ ಆಣೆ-ಪ್ರಮಾಣ ಮಾಡಿಸುವ ಚಿಂತನೆ ಪಕ್ಷದೊಳಗೆ ನಡೆದಿತ್ತು. ಆದರೆ, ಈ ಪ್ರಸ್ತಾವನೆಗೆ ಕೆಲ ಶಾಸಕರು ಹಾಗೂ ಹಿರಿಯ ನಾಯಕರು ವಿರೋಧ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಆ ಯೋಜನೆಯನ್ನು ಕೈಬಿಡಲಾಗಿದೆ ಎನ್ನಲಾಗಿದೆ.

ಪ್ರಸ್ತುತ ದೆಹಲಿ ಪ್ರವಾಸದಲ್ಲಿರುವ ವಿಜಯೇಂದ್ರ ಅವರು ಇಂದು ರಾತ್ರಿ ನೇರವಾಗಿ ಮಂಗಳೂರಿಗೆ ಆಗಮಿಸಿ, ಅಲ್ಲಿಂದ ಧರ್ಮಸ್ಥಳಕ್ಕೆ ತೆರಳಲಿದ್ದಾರೆ. ಧರ್ಮಸ್ಥಳದಲ್ಲೇ ವಾಸ್ತವ್ಯ ಹೂಡಿ, ಶುಕ್ರವಾರ ಬೆಳಗ್ಗೆ ಶ್ರೀ ಮಂಜುನಾಥ ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಲಿದ್ದಾರೆ.

ಧರ್ಮಸ್ಥಳದಂತಹ ಧಾರ್ಮಿಕ ಕ್ಷೇತ್ರದಲ್ಲಿ ರಾಜಕೀಯ ಉದ್ದೇಶದ ಸಭೆ ನಡೆಸುವುದು ಕ್ಷೇತ್ರದ ಪಾವಿತ್ರ್ಯತೆಗೆ ಧಕ್ಕೆ ತರುತ್ತದೆ ಎಂಬ ಅಭಿಪ್ರಾಯ ಪಕ್ಷದ ಕೆಲವು ಮುಖಂಡರಿಂದ ವ್ಯಕ್ತವಾಗಿತ್ತು. ಈ ಹಿನ್ನೆಲೆಯಲ್ಲಿ ಶಾಸಕರನ್ನು ಧರ್ಮಸ್ಥಳಕ್ಕೆ ಕರೆತರುವ ಯೋಚನೆಯನ್ನು ಕೈಬಿಟ್ಟು, ವಿಜಯೇಂದ್ರ ಅವರು ವೈಯಕ್ತಿಕವಾಗಿ ದೇವರ ದರ್ಶನ ಪಡೆಯುವ ನಿರ್ಧಾರಕ್ಕೆ ಬಂದಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ವಿಧಾನ ಪರಿಷತ್ ಚುನಾವಣೆಯ ಅಡ್ಡಮತದಾನ ಪ್ರಕರಣದ ಬಳಿಕ ಬಿಜೆಪಿ ಒಳಗೆ ಆರೋಪ-ಪ್ರತ್ಯಾರೋಪಗಳು, ಅಸಮಾಧಾನ ಹಾಗೂ ನಾಯಕತ್ವದ ಕುರಿತ ಚರ್ಚೆಗಳು ಮುಂದುವರಿದಿರುವ ಸಂದರ್ಭದಲ್ಲಿ ವಿಜಯೇಂದ್ರ ಅವರ ಧರ್ಮಸ್ಥಳ ಭೇಟಿ ರಾಜಕೀಯವಾಗಿ ಮಹತ್ವ ಪಡೆದುಕೊಂಡಿದೆ. ಈ ಭೇಟಿ ಕೇವಲ ಧಾರ್ಮಿಕ ಪ್ರವಾಸವೇ ಅಥವಾ ಪಕ್ಷದೊಳಗಿನ ಬೆಳವಣಿಗೆಗಳಿಗೆ ಸಂಬಂಧಿಸಿದ ಸಂದೇಶವನ್ನೂ ಒಳಗೊಂಡಿದೆಯೇ ಎಂಬ ಬಗ್ಗೆ ರಾಜಕೀಯ ವಲಯದಲ್ಲಿ ಚರ್ಚೆ ನಡೆಯುತ್ತಿದೆ.

# ಮಾದಕ ವಸ್ತುಗಳ ವಿರುದ್ಧ ಪೊಲೀಸ್ ಕಾರ್ಯಾಚರಣೆ: ರೂ.76 ಲಕ್ಷ ಮೌಲ್ಯದ ಡ್ರಗ್ಸ್ ನಾಶ

ಕೋಲಾರ

ಮಾದಕ ವಸ್ತುಗಳ ಜಾಲಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಕೋಲಾರ ಜಿಲ್ಲಾ ಪೊಲೀಸರು ಕಳೆದ ಒಂಬತ್ತು ತಿಂಗಳ ಅವಧಿಯಲ್ಲಿ ನಡೆಸಿದ ವಿಶೇಷ ಕಾರ್ಯಾಚರಣೆಯಲ್ಲಿ ರೂ.76 ಲಕ್ಷಕ್ಕೂ ಹೆಚ್ಚು ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದು, ಇದೀಗ ಅವುಗಳನ್ನು ನಿಯಮಾನುಸಾರ ನಾಶಪಡಿಸಲಾಗಿದೆ.



ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಎನ್‌ಡಿಪಿಎಸ್ ಕಾಯ್ದೆ-1985ರಡಿ ದಾಖಲಾದ 19 ಪ್ರಕರಣಗಳಲ್ಲಿ ಒಟ್ಟು 40 ಕೆ.ಜಿ. 840 ಗ್ರಾಂ ಗಾಂಜಾ ಹಾಗೂ 860 ಗ್ರಾಂ ಎಂಡಿಎಂಎ (ಸಿಂಥೆಟಿಕ್ ಡ್ರಗ್) ವಶಪಡಿಸಿಕೊಳ್ಳಲಾಗಿದೆ. ಈ ಮಾದಕ ವಸ್ತುಗಳ ಅಂದಾಜು ಮೌಲ್ಯ ರೂ.76.15 ಲಕ್ಷ ಎಂದು ಪೊಲೀಸರು ತಿಳಿಸಿದ್ದಾರೆ.

ಕೋಲಾರ ಟೌನ್, ಮಾಲೂರು, ಮುಳಬಾಗಿಲು, ಶ್ರೀನಿವಾಸಪುರ, ವೇಮಗಲ್, ಗ್ರಾಮಾಂತರ, ಗಲ್‌ಪೇಟೆ ಹಾಗೂ ಸೆನ್ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ನಡೆದ ದಾಳಿಗಳ ವೇಳೆ ಗಾಂಜಾ, ಗಾಂಜಾ ಗಿಡಗಳು ಹಾಗೂ ಎಂಡಿಎಂಎ ಮಾದಕ ವಸ್ತುಗಳನ್ನು ಜಪ್ತಿ ಮಾಡಲಾಗಿದೆ. ಪ್ರಕರಣಗಳಿಗೆ ಸಂಬಂಧಿಸಿದಂತೆ 23 ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಪೊಲೀಸ್ ಪ್ರಧಾನ ಕಚೇರಿಯ ಮಾರ್ಗಸೂಚಿಯಂತೆ, "ಮಾದಕ ವಸ್ತುಗಳ ವಿಲೇವಾರಿ ಸಮಿತಿ"ಯ ಸಮ್ಮುಖದಲ್ಲಿ ಹಾಗೂ ಪರಿಸರ ಇಲಾಖೆಯ ಅನುಮತಿ ಪಡೆದು ವಶಪಡಿಸಿಕೊಂಡಿದ್ದ ಮಾದಕ ವಸ್ತುಗಳನ್ನು ಬೆಂಗಳೂರಿನ ಹೊಸಕೋಟೆಯ ಕೆಐಎಡಿಬಿ ಕೈಗಾರಿಕಾ ಪ್ರದೇಶದಲ್ಲಿರುವ ಖಾಸಗಿ ಸಂಸ್ಕರಣಾ ಘಟಕದಲ್ಲಿ ನಾಶಪಡಿಸಲಾಯಿತು.

ಪರಿಸರಕ್ಕೆ ಯಾವುದೇ ಹಾನಿಯಾಗದಂತೆ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಿ ವಿಲೇವಾರಿ ಕಾರ್ಯ ನಡೆಸಲಾಗಿದೆ.

# ಪ್ರೀ-ಪ್ಯಾಕಿಂಗ್ ಟೆಂಡರ್‌ನಲ್ಲಿ ಅಕ್ರಮ ಆರೋಪ: ಮರು ಟೆಂಡರ್‌ಗೆ ಒತ್ತಾಯ

ಕೋಲಾರ

ಕೋಲಾರ ಹಾಲು ಒಕ್ಕೂಟದ (ಕೋಮುಲ್) ಪ್ರೀ-ಪ್ಯಾಕಿಂಗ್ ವಿಭಾಗದ ಹಾಲು, ಮೊಸರು ಹಾಗೂ ಮಜ್ಜಿಗೆ ಪ್ಯಾಕಿಂಗ್ ಯಂತ್ರಗಳ ಚಾಲನೆ ಮತ್ತು ನಿರ್ವಹಣೆಗೆ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿರುವ ಕೋಲಾರ ತಾಲ್ಲೂಕು ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳ ನೌಕರರ ಸಂಘ ಹಾಗೂ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಪಾರದರ್ಶಕವಾಗಿ ಮರು ಟೆಂಡರ್ ಆಹ್ವಾನಿಸುವಂತೆ ಒತ್ತಾಯಿಸಿದ್ದಾರೆ.



ಗುರುವಾರ ಕೋಮುಲ್ ವ್ಯವಸ್ಥಾಪಕ ನಿರ್ದೇಶಕರಿಗೆ ಸಲ್ಲಿಸಿದ ಮನವಿಯಲ್ಲಿ, ಟೆಂಡರ್‌ನ ಕೆಲವು ಷರತ್ತುಗಳು ನಿರ್ದಿಷ್ಟ ಗುತ್ತಿಗೆದಾರರಿಗೆ ಅನುಕೂಲವಾಗುವ ರೀತಿಯಲ್ಲಿ ರೂಪಿಸಲಾಗಿದೆ ಎಂದು ಆರೋಪಿಸಲಾಗಿದೆ. ಹಲವು ಹಾಲು ಒಕ್ಕೂಟಗಳಲ್ಲಿ ಕಾರ್ಯನಿರ್ವಹಿಸಿರುವ ಅನುಭವ ಕಡ್ಡಾಯ ಎಂಬ ಷರತ್ತು ಅನಗತ್ಯವಾಗಿದ್ದು, ಯಾವುದೇ ಒಂದು ಹಾಲು ಒಕ್ಕೂಟದಲ್ಲಿ ಯಶಸ್ವಿಯಾಗಿ ಸೇವೆ ಸಲ್ಲಿಸಿರುವ ಅನುಭವವನ್ನೂ ಪರಿಗಣಿಸಬೇಕು ಎಂದು ಮನವಿದಾರರು ಆಗ್ರಹಿಸಿದ್ದಾರೆ.

ಪ್ರಸ್ತುತ ಪ್ರೀ-ಪ್ಯಾಕಿಂಗ್ ವಿಭಾಗದ ಗುತ್ತಿಗೆದಾರರಾಗಿರುವ ಎವಿಆರ್ ಎಂಟರ್‌ಪ್ರೈಸಸ್ ಸಂಸ್ಥೆಯ ಕಾರ್ಯನಿರ್ವಹಣೆ ತೃಪ್ತಿಕರವಾಗಿರಲಿಲ್ಲ ಎಂದು ಆರೋಪಿಸಿರುವ ಅವರು, ಯಂತ್ರಗಳ ಬಿಡಿಭಾಗಗಳನ್ನು ಸಮಯಕ್ಕೆ ಸರಿಯಾಗಿ ಪೂರೈಸದ ಹಿನ್ನೆಲೆಯಲ್ಲಿ ಕೋಮುಲ್ ಹಲವು ಬಾರಿ ನೋಟಿಸ್ ನೀಡಿದೆ ಎಂದು ತಿಳಿಸಿದ್ದಾರೆ. ಕೆಲ ಸಂದರ್ಭಗಳಲ್ಲಿ ಒಕ್ಕೂಟವೇ ಬಿಡಿಭಾಗಗಳನ್ನು ಖರೀದಿಸಿ ಅದರ ವೆಚ್ಚವನ್ನು ಗುತ್ತಿಗೆದಾರರ ಬಿಲ್‌ನಿಂದ ಕಡಿತಗೊಳಿಸಿರುವುದಾಗಿ ದೂರಿದ್ದಾರೆ.

ಬೆಂಗಳೂರು ಹಾಲು ಒಕ್ಕೂಟದಲ್ಲಿ ಸಂಸ್ಥೆಯ ಕಾರ್ಯವೈಖರಿ ಕುರಿತು ಗಂಭೀರ ಆಕ್ಷೇಪಗಳು ವ್ಯಕ್ತವಾಗಿದ್ದ ಹಿನ್ನೆಲೆಯಲ್ಲಿ ಎವಿಆರ್ ಎಂಟರ್‌ಪ್ರೈಸಸ್‌ನ್ನು ಕಪ್ಪುಪಟ್ಟಿಗೆ ಸೇರಿಸಲಾಗಿತ್ತು ಎಂಬ ಮಾಹಿತಿ ಇದ್ದರೂ, ಕಳೆದ ವರ್ಷ ಟೆಂಡರ್ ನೀಡಲಾಗಿತ್ತು. ಇದೀಗ ಪ್ರಸಕ್ತ ಸಾಲಿನಲ್ಲೂ ಅದೇ ಸಂಸ್ಥೆಗೆ ಟೆಂಡರ್ ನೀಡಲು ಪ್ರಯತ್ನ ನಡೆಯುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಎವಿಆರ್ ಎಂಟರ್‌ಪ್ರೈಸಸ್ ವಿರುದ್ಧದ ದೂರುಗಳು ಮತ್ತು ದಾಖಲೆಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ಜೊತೆಗೆ ಟೆಂಡರ್ ಷರತ್ತುಗಳನ್ನು ಮರುಪರಿಶೀಲಿಸಿ ತಿದ್ದುಪಡಿ ಮಾಡಿ, ಪಾರದರ್ಶಕವಾಗಿ ಹೊಸ ಟೆಂಡರ್ ಆಹ್ವಾನಿಸಬೇಕು ಎಂದು ಒತ್ತಾಯಿಸಿದ್ದಾರೆ.

ಈ ಕುರಿತು ಕ್ರಮ ಕೈಗೊಳ್ಳದಿದ್ದರೆ ಕೋಮುಲ್ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸುವುದಾಗಿ ಸಂಘದ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಮನವಿಯನ್ನು ಕೋಮುಲ್ ಆಡಳಿತ ವಿಭಾಗದ ವ್ಯವಸ್ಥಾಪಕಿ ನಂದಿನಿ, ಹಣಕಾಸು ವಿಭಾಗದ ವ್ಯವಸ್ಥಾಪಕ ಮುರಳಿ, ಪಿ&ಐ ವಿಭಾಗದ ವ್ಯವಸ್ಥಾಪಕ ಚೇತನ್ ಕುಮಾರ್ ಹಾಗೂ ಖರೀದಿ ವಿಭಾಗದ ವ್ಯವಸ್ಥಾಪಕ ವಿಶ್ವನಾಥ್ ಸ್ವೀಕರಿಸಿದರು. ಮನವಿಯಲ್ಲಿನ ಅಂಶಗಳನ್ನು ಆಡಳಿತ ಮಂಡಳಿ ಹಾಗೂ ವ್ಯವಸ್ಥಾಪಕ ನಿರ್ದೇಶಕರ ಗಮನಕ್ಕೆ ತರಲಾಗುವುದು ಮತ್ತು ಟೆಂಡರ್ ಪ್ರಕ್ರಿಯೆಯಲ್ಲಿನ ಲೋಪಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಮನವಿ ಸಲ್ಲಿಸಿದ ನಿಯೋಗದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರಾದ ವಿಟ್ಟಪ್ಪನಹಳ್ಳಿ ವಿ.ಆರ್. ಮಂಜುನಾಥ್, ಗೂಳಿಗಾನಹಳ್ಳಿ ಶಂಕರೇಗೌಡ, ಮಣಿಘಟ್ಟ ಮುನಿವೆಂಕಟಪ್ಪ, ನಾಯಕರಹಳ್ಳಿ ಲಕ್ಷ್ಮಣ್, ಬೆಳಗಾನಹಳ್ಳಿ ಸುರೇಶ್, ಹೊಳಲಿ ಹೊಸೂರು ಎಲ್. ಮಂಜುನಾಥಗೌಡ ಹಾಗೂ ನೌಕರರ ಸಂಘದ ಅಧ್ಯಕ್ಷ ಮುನಿಯಪ್ಪ (ರಾಮು), ಪ್ರಧಾನ ಕಾರ್ಯದರ್ಶಿ ಡಿ. ಶಿವರುದ್ರಯ್ಯ, ಕಾರ್ಯದರ್ಶಿ ಡಿ.ಆರ್. ಮಂಜುನಾಥ್, ನಿರ್ದೇಶಕ ನಾಗರಾಜ್ ವೀರಭದ್ರ ಸೇರಿದಂತೆ

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

27/06/2026

ಭಾರತ ಸಾರಥಿ

BHARATHA SARATHI KANNADA DAILY NEWS PAPER



# ಸಕಾಲಕ್ಕೆ ಮಳೆಯಿಲ್ಲ: ರೈತರಲ್ಲಿ ಆತಂಕ

ಬಾಗೇಪಲ್ಲಿ

ಸಕಾಲಕ್ಕೆ ಮಳೆಯಾಗದ ಕಾರಣ ಬಾಗೇಪಲ್ಲಿ ತಾಲ್ಲೂಕಿನ ರೈತರು ಗಂಭೀರ ಆತಂಕದಲ್ಲಿ ಇದ್ದು, ಕೃಷಿ ಚಟುವಟಿಕೆಗಳು ಸಂಪೂರ್ಣವಾಗಿ ಸ್ಥಗಿತಗೊಂಡಿರುವ ಸ್ಥಿತಿ ನಿರ್ಮಾಣವಾಗಿದೆ. ನೈರುತ್ಯ ಮುಂಗಾರು ದುರ್ಬಲಗೊಂಡ ಪರಿಣಾಮ ರಾಜ್ಯಾದ್ಯಂತ ಮಳೆ ಕೊರತೆ ಎದುರಾಗಿದ್ದು, ಅದರ ನೇರ ಪರಿಣಾಮ ಬಾಗೇಪಲ್ಲಿಯ ಕೃಷಿ ವಲಯದ ಮೇಲೆ ಬಿದ್ದಿದೆ.

ತಾಲ್ಲೂಕಿನಲ್ಲಿ ಜನಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯ ಜೊತೆಗೆ ಕೃಷಿಗೂ ನೀರಿನ ಕೊರತೆ ಉಂಟಾಗಿದ್ದು, ಬಿತ್ತನೆ ಕಾರ್ಯ ಆರಂಭಿಸಲು ಸಾಧ್ಯವಾಗದ ಸ್ಥಿತಿ ನಿರ್ಮಾಣವಾಗಿದೆ. ರೈತರು ಆಕಾಶದತ್ತ ನೋಡುವಂತಾಗಿದ್ದು, ಮಳೆ ಯಾವಾಗ ಬರುತ್ತದೆ ಎಂಬ ನಿರೀಕ್ಷೆಯಲ್ಲಿ ದಿನ ಕಳೆಯುತ್ತಿದ್ದಾರೆ.

ಹಿಂದಿನ ವರ್ಷಗಳಲ್ಲಿ ನೆಲಗಡಲೆ, ರಾಗಿ, ಜೋಳ ಮತ್ತು ಅಲಸಂದೆ ಸೇರಿದಂತೆ ಪ್ರಮುಖ ಬೆಳೆಗಳು ಉತ್ತಮ ಫಲ ನೀಡಿದ್ದರೂ, ಅನಿಯಮಿತ ಮಳೆಯ ಕಾರಣದಿಂದ



ಹಲವಾರು ಬಾರಿ ಬೆಳೆಗಳು ಹಾನಿಯಾಗಿದ್ದ ಉದಾಹರಣೆಗಳಿವೆ. ಕೆಲ ವರ್ಷಗಳಲ್ಲಿ ಅತಿವೃಷ್ಟಿಯಿಂದ ಬೆಳೆ ನಷ್ಟವಾದರೆ, ಮತ್ತೆ ಕೆಲ ವರ್ಷಗಳಲ್ಲಿ ಮಳೆಯ ಕೊರತೆಯಿಂದ ಬೆಳೆಗಳು ಒಣಗಿ ಹೋಗಿದ್ದು ರೈತರಿಗೆ ನಿರಂತರ ನಷ್ಟ ಎದುರಾಗಿದೆ.

ಈ ವರ್ಷವೂ ಪರಿಸ್ಥಿತಿ ಭಿನ್ನವಾಗಿಲ್ಲ. ಬಿತ್ತನೆಗೆ ತಯಾರಿ ಮಾಡಿಕೊಂಡಿದ್ದ ರೈತರು ಮಳೆಯ ನಿರೀಕ್ಷೆಯಲ್ಲಿ ಜಮೀನನ್ನು ಖಾಲಿ ಇಟ್ಟಿದ್ದಾರೆ. ಅನೇಕ ಕಡೆಗಳಲ್ಲಿ ನೆಲಗಡಲೆ ಬೀಜಗಳನ್ನು ಸಿದ್ಧಪಡಿಸಲಾಗಿದ್ದು, ಮಳೆಯಿಲ್ಲದೆ ಅವುಗಳನ್ನು ಬಿತ್ತಲಾಗದೇ ಉಳಿದಿವೆ. ನೀರಾವರಿ ಸೌಲಭ್ಯ ಇರುವ ಕೆಲವು ಪ್ರದೇಶಗಳಲ್ಲಿ ಮಾತ್ರ ಸುಮಾರು 30 ಶೇಕಡಾ ಬಿತ್ತನೆ ಕಾರ್ಯ ನಡೆದಿದೆ ಎಂದು ಮೂಲಗಳು ತಿಳಿಸಿವೆ.

ಬಾಗೇಪಲ್ಲಿ, ಕಸಬಾ, ಚೇಳೂರು, ಗೂಳೂರು, ಮಿಟ್ಟೇಮರಿ ಹಾಗೂ ಪಾತಪಾಳ್ಯ ಹೋಬಳಿಗಳಲ್ಲಿ ಕಳೆದ ಕೆಲವು ವರ್ಷಗಳ ಮಳೆಯ ಅಂಕಿಅಂಶಗಳನ್ನು ನೋಡಿದರೆ ಪರಿಸ್ಥಿತಿಯ ಅಸ್ಥಿರತೆ ಸ್ಪಷ್ಟವಾಗುತ್ತದೆ. 2024 ಮತ್ತು 2025ರಲ್ಲಿ ಸರಾಸರಿ ಮಳೆಯ ಪ್ರಮಾಣ ಕಂಡುಬಂದಿದ್ದರೂ, ಹವಾಮಾನ ವೈಪರೀತ್ಯದಿಂದ ಕೃಷಿ ಚಕ್ರ ಸಂಪೂರ್ಣವಾಗಿ ಸ್ಥಿರವಾಗಿಲ್ಲ. 2026ರಲ್ಲಿ ಮುಂಗಾರುಪೂರ್ವ ಮಳೆಯು ಕೆಲವು ಮಟ್ಟಿಗೆ ದಾಖಲಾಗಿದ್ದರೂ, ನಂತರದ ಅವಧಿಯಲ್ಲಿ ಮಳೆಯ ಕೊರತೆ ಹೆಚ್ಚಾಗಿದೆ ಎಂದು ಅಂಕಿಅಂಶಗಳು ತೋರಿಸುತ್ತಿವೆ.

ರಾಜ್ಯಮಟ್ಟದಲ್ಲಿಯೂ ಜೂನ್ 1 ರಿಂದ 21ರ ಅವಧಿಯಲ್ಲಿ ಶೇ 42ರಷ್ಟು ಮಳೆ ಕೊರತೆ ದಾಖಲಾಗಿದ್ದು, ದಕ್ಷಿಣ ಒಳನಾಡಿನಲ್ಲಿ ಶೇ 43ರಷ್ಟು ಮಳೆ ಕೊರತೆ ಕಂಡುಬಂದಿದೆ. ಇದರಿಂದಾಗಿ 23 ಜಿಲ್ಲೆಗಳಲ್ಲಿ ಮಳೆ ಕೊರತೆ ಗಂಭೀರವಾಗಿದೆ ಎಂದು ವರದಿಗಳು ಸೂಚಿಸುತ್ತಿವೆ.

ಮಳೆ ಅವಲಂಬಿತ ಕೃಷಿಯ ಮೇಲೆ ಸಂಪೂರ್ಣವಾಗಿ ನಂಬಿಕೆ ಇಟ್ಟಿರುವ ಬಾಗೇಪಲ್ಲಿ ರೈತರು ಈ ಬಾರಿ ಮತ್ತೆ ಸಂಕಷ್ಟ ಎದುರಿಸುತ್ತಿದ್ದು, ಹಲವರು ಹಿಂದಿನ ಬೆಳೆ ನಷ್ಟದ ಅನುಭವವನ್ನು ನೆನೆದು ಆತಂಕ ವ್ಯಕ್ತಪಡಿಸುತ್ತಿದ್ದಾರೆ. ಕೆಲ ರೈತರು ಮಳೆಯ ನಿರೀಕ್ಷೆಯಲ್ಲಿ ಬೀಜಗಳನ್ನು ಸಿದ್ಧಪಡಿಸಿಕೊಂಡಿದ್ದರೂ, ಬಿತ್ತನೆಗೆ ಸೂಕ್ತ ಸಮಯ ಕಳೆದುಹೋಗುವ ಭಯದಲ್ಲಿದ್ದಾರೆ.

ಸಂಜೆ ವೇಳೆಗೆ ಮೋಡಗಳು ಆವರಿಸಿದರೂ ಮಳೆ ಬೀಳದೆ ಗಾಳಿ ಬೀಸುವ ಸ್ಥಿತಿಯಿಂದ ರೈತರಲ್ಲಿ ನಿರಾಶೆ ಹೆಚ್ಚಾಗಿದೆ. "ಮಳೆ ಬರುತ್ತದೆ" ಎಂಬ ಆಶೆ ಕೆಲ ಕ್ಷಣ ಮಾತ್ರ ಉಳಿದು ಮತ್ತೆ ನಿರಾಸೆಗೆ ತಿರುಗುತ್ತಿದೆ ಎಂದು ಸ್ಥಳೀಯ ರೈತರು ಹೇಳುತ್ತಿದ್ದಾರೆ.

ಒಟ್ಟಾರೆಯಾಗಿ, ಹವಾಮಾನ ವೈಪರೀತ್ಯ ಹಾಗೂ ಮುಂಗಾರು ದುರ್ಬಲತೆಯಿಂದ ಬಾಗೇಪಲ್ಲಿ ಕೃಷಿ ವಲಯ ಸಂಕಷ್ಟದಲ್ಲಿದ್ದು, ಮುಂದಿನ ದಿನಗಳಲ್ಲಿ ಮಳೆಯ ಸ್ಥಿತಿ ಸುಧಾರಿಸದಿದ್ದರೆ ಕೃಷಿ ಉತ್ಪಾದನೆ ಮತ್ತು ಗ್ರಾಮೀಣ ಆರ್ಥಿಕತೆಯ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇದೆ.

## ಗಾಂಜಾ ಗಿಡಗಳು ವಶ

ಕೋಲಾರ

ಜಿಲ್ಲೆಯ ಅಬಕಾರಿ ಉಪ ಆಯುಕ್ತರಾದ ಸಯ್ಯದ್ ಅಜಮತ್ ಆಫ್ರೀನ್ ರವರ ನಿರ್ದೇಶನದ ಮೇರೆಗೆ ಅಬಕಾರಿ ಉಪ ಅಧೀಕ್ಷಕರು, ಕೋಲಾರ ಉಪ ವಿಭಾಗ, ಕೋಲಾರರವರಾದ ಶ್ರೀನಿವಾಸಮೂರ್ತಿ ಎಂ. ರವರ ನೇತೃತ್ವದಲ್ಲಿ ಅಬಕಾರಿ ಉಪ ಆಯುಕ್ತರ ಕಛೇರಿಯ ಅಬಕಾರಿ ನಿರೀಕ್ಷಕರಾದ ರವೀಂದ್ರ. ಆರ್ ಇವರು ಸಿಬ್ಬಂದಿಯೊಂದಿಗೆ ಕೋಲಾರ ತಾಲ್ಲೂಕು, ಅರಹಳ್ಳಿ ಗ್ರಾಮ ಪಂಚಾಯಿತಿ, ಹೊದಲವಾಡಿ ಗ್ರಾಮದ ವಾಸಿ ಚಂದ್ರಪ್ರಕಾಶ್ ಬಿನ್ ಲೇಟ್ ಹನುಮಪ್ಪ ಎಂಬುವವರಿಗೆ ಸೇರಿದ ಮನೆಯ ಹಿಂಬದಿಯಲ್ಲಿ ಅಕ್ರಮವಾಗಿ ಗಾಂಜಾ ಗಿಡಗಳನ್ನು ಬೆಳೆಸಿರುವುದು ಕಂಡು ಬಂದಿರುತ್ತದೆ. ನಂತರ ಗಾಂಜಾ ಗಿಡಗಳನ್ನು ಟೇಪ್ ನಿಂದ ಅಳತೆ ಮಾಡಲಾಗಿ ಸುಮಾರು 5 ರಿಂದ 7 ಅಡಿಗಳಷ್ಟು ಉದ್ದ ಇರುವುದು ಕಂಡು ಬಂದಿರುತ್ತದೆ. ಅವುಗಳನ್ನು ಏಣಿಕೆ ಮಾಡಲಾಗಿ 22 ಹಸಿ ಗಾಂಜಾ ಗಿಡಗಳು ಇರುತ್ತದೆ. ಪ್ರಕರಣದ ಆರೋಪಿಯಾದ ಚಂದ್ರಪ್ರಕಾಶ್ ಬಿನ್ ಲೇಟ್ ಹನುಮಪ್ಪ, 35-ವರ್ಷ, ಎಸ್.ಸಿ.ಜನಾಂಗ, ಹೊದಲವಾಡಿ ಗ್ರಾಮ, ಅರಹಳ್ಳಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು ಎಂಬುವವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿರುತ್ತದೆ. ರವೀಂದ್ರ ಆರ್. ಅಬಕಾರಿ ನಿರೀಕ್ಷಕರು ಮೊಕದ್ದಮೆಯನ್ನು ದಾಖಲಿಸಿದ್ದು, ಸದರಿ ದಾಳಿಯಲ್ಲಿ ಶ್ರೀನಿವಾಸಮೂರ್ತಿ, ಅಬಕಾರಿ ಉಪ ಅಧೀಕ್ಷಕರು, ವೇಣುಗೋಪಾಲ, ಅಬಕಾರಿ ಉಪ ನಿರೀಕ್ಷಕರು ಹಾಗೂ ಸಿಬ್ಬಂದಿಗಳಾದ ಅಂಬರೀಶ್ ಎಸ್. ಸುಬ್ರಮಣಿ.ಬಿ.ವಿ ಹಾಗೂ ಅರಹಳ್ಳಿ ಗ್ರಾಮ ಪಂಚಾಯಿತಿ, ದ್ವಿತಿಯ ದರ್ಜೆ ಸಹಾಯಕರು ಚಿಕ್ಕಮುನಿಯಮ್ಮ ಹಾಗೂ ಹೊದಲವಾಡಿ ಗ್ರಾಮದ ಜಲಗಾರ, (ವಾಟರ್ ಮ್ಯಾನ್) ಪಿಳ್ಳೇಗೌಡ ಇವರುಗಳು ಭಾಗವಹಿಸಿರುತ್ತಾರೆ.

## ವಿಮೆ ಯೋಜನೆ: ರೈತರು ನೋಂದಣಿಮಾಡಿಸಿಕೊಳ್ಳಲು ಮನವಿ

ಕೋಲಾರ

2026-27ನೇ ಸಾಲಿನ ಮುಂಗಾರು ಹಂಗಾಮಿನ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ ವ್ಯಾಪ್ತಿಗೆ ಕೋಲಾರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಾದ ಬಂಗಾರಪೇಟೆ, ಕೆ.ಜಿ.ಎಫ್, ಕೋಲಾರ, ಮಾಲೂರು, ಮುಳಬಾಗಿಲು ಮತ್ತು ಶ್ರೀನಿವಾಸಪುರ ತಾಲ್ಲೂಕುಗಳನ್ನು ಒಳಪಡಿಸಲಾಗಿದೆ.

ಕೋಲಾರ ಜಿಲ್ಲೆಯ ಎಲಾ ತಾಲ್ಲೂಕುಗಳಲ್ಲಿ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ ಮಾವು ಬೆಳೆಗೆ ಪ್ರತಿ ಹೇಕ್ಟರ್ ವಿಮಾ ಮೊತ್ತ ರೂ.80000/- ಗಳಾಗಿದ್ದು, ಶೇ. 5ರಷ್ಟು ರೈತರು ಪಾವತಿಸಬೇಕಾದ ವಿಮಾ ಕಂತಿನ ಮೊತ್ತ ರೂ.4000/- ಗಳಾಗಿರುತ್ತದೆ.

ಜಿಲೆಯಲ್ಲಿ ಬೆಳೆ ಸಾಲಪಡೆದ ರೈತರು ಹಾಗೂ ಸಾಲಪಡೆಯದ ರೈತರು ನೊಂದಣಿ ಮಾಡಿಕೊಳ್ಳಬಹುದಾಗಿದ್ದು, ಆಯಾ ತಾಲೂಕಿಗೆ ಸಂಬಂಧಪಟ್ಟ ವಿಮೆ ಮಾಡಿಸಲು ಇಚ್ಛಿಸುವ ರೈತರು ನಿಗಧಿತ ಅರ್ಜಿಯೊಂದಿಗೆ ಪಹಣಿ, ಬ್ಯಾಂಕ್ ಖಾತೆ ಪಾಸ್ ಪುಸ್ತಕ, ಆಧಾರ ಕಾರ್ಡ್ ನಕಲು ಪ್ರತಿಗಳನ್ನು ಲಗತ್ತಿಸಿ ತಾವು ಖಾತೆ ಹೊಂದಿರುವ ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಅಥವಾ ಗ್ರಾಮ ಪಂಚಾಯತ್ ಮಟ್ಟದಲ್ಲಿರುವ ಗ್ರಾಮ ಓನ್ ಕೇಂದ್ರಗಳಲ್ಲಿ ಅಥವಾ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಜುಲೈ 31 ರೊಳಗೆ ವಿಮೆ ಯೋಜನೆಯಡಿ ನೋಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ತಾಲೂಕು ತೋಟಗಾರಿಕೆ ಕಛೇರಿಗಳಿಗೆ ಹಾಗೂ ಹೋಬಳಿ ಮಟ್ಟದ ತೋಟಗಾರಿಕೆ ಅಧಿಕಾರಿಗಳಾದ ಬಂಗಾರಪೇಟೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ದೂ: 9845024906, ಕೋಲಾರ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ದೂ: 9448949104. ಜಿಲೆಯಲ್ಲಿ ಬೆಳೆ ಸಾಲಪಡೆದ ರೈತರು ಹಾಗೂ ಸಾಲಪಡೆಯದ ರೈತರು ನೊಂದಣಿ ಮಾಡಿಕೊಳ್ಳಬಹುದಾಗಿದ್ದು, ಆಯಾ ತಾಲೂಕಿಗೆ ಸಂಬಂಧಪಟ್ಟ ವಿಮೆ ಮಾಡಿಸಲು ಇಚ್ಛಿಸುವ ರೈತರು ನಿಗಧಿತ ಅರ್ಜಿಯೊಂದಿಗೆ ಪಹಣಿ, ಬ್ಯಾಂಕ್ ಖಾತೆ ಪಾಸ್ ಪುಸ್ತಕ, ಗ್ರಾಮ ಓನ್ ಕೇಂದ್ರಗಳಲ್ಲಿ ಅಥವಾ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಜುಲೈ 31 ರೊಳಗೆ ಖಘಃಅಖಖ ವಿಮೆ ಯೋಜನೆಯಡಿ ನೋಂದಾಯಿಸಿಕೊಳ್ಳಬಹುದು.

ಮಾಲೂರು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ದೂ: 9448955801. ಮುಳಬಾಗಿಲು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ದೂ: 9964749681. ಶ್ರೀನಿವಾಸಪುರ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ದೂ: 9008059912ಯನ್ನು ಸಂಪರ್ಕಿಸಬಹುದೆಂದು ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೀನುಪಾಶುವಾರು ಹಕ್ಕು ನೇರ ಗುತ್ತಿಗೆ ಮುಖಾಂತರ ವಿಲೇವಾರಿ

ಕೋಲಾರ

ಮುಳಬಾಗಿಲು ತಾಲ್ಲೂಕಿನ ಕಸಬಾ ಹೊಸಕೆರೆ, ತಿರುಪತಿ ಗಂಗಮ್ಮಕೆರೆ, ಬೊಮ್ಮರಾಸಕುಂಟೆ ಕೆರೆಗಳು ನಗರಸಭೆ ವ್ಯಾಪ್ತಿಗೆ ಒಲಪಟ್ಟಿದ್ದು, ಏತ ನೀರಾವರಿ ಯೋಜನೆ ವ್ಯಾಪ್ತಿಗೆ ಒಳಪಟ್ಟಿರುವುದಿಲ್ಲ. ಪ್ರಸಕ್ತ ಸಾಲಿನ ಮೀನುಗಾರಿಕೆ ಫಸಲಿ ವರ್ಷದಿಂದ 2030-2031ನೇ ಮೀನುಗಾರಿಕೆ ಫಸಲಿ ವರ್ಷದವರೆಗೆ ಅಥವಾ ಗರಿಷ್ಟ ಐದು ವರ್ಷಗಳ ಅವಧಿಗೆ ಅರ್ಹ ಮೀನುಗಾರರ ಸಹಕಾರ ಸಂಘಗಳಿಗೆ ಹಾಗೂ ಮೀನುಗಾರಿಕೆ ಇಲಾಖೆಯಿಂದ ಅನುಮತಿಸಲಾದ ರೈತ ಮೀನುಗಾರರ ಉತ್ಪಾದಕ ಸಂಸ್ಥೆಗಳಿಗೆ ಆದ್ಯಾತೆಯ ಮೇರೆಗೆ ಮೀನುಪಾಶುವಾರು ಹಕ್ಕನ್ನು ನೇರ ಗುತ್ತಿಗೆಗೆ ನೀಡಲಾಗುವುದು.

ರೈತ ಮೀನುಗಾರರ ಉತ್ಪಾದಕ ಸಂಸ್ಥೆಗಳು ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಜುಲೈ 11 ರೊಳಗೆ ಕಛೇರಿ ವೇಳೆಯಲ್ಲಿ ಸಲ್ಲಿಸಬೇಕು. ನಿಗಧಿತ ಅವಧಿಯ ನಂತರ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಗುತ್ತಿಗೆದಾರರು ಬರೆದುಕೊಡಬೇಕಾದ ಗುತ್ತಿಗೆ ಕರಾರಿನ ಮುಚ್ಚಳಿಕೆ ಪತ್ರದ ಪ್ರತಿಗಳನ್ನು ಕಛೇರಿಯ ವೇಳೆಯಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಕಛೇರಿಯ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ಮೀನುಗಾರಿಕೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 'ಸಮಾಜದ ಏಳಿಗೆಗೆ ಭಕ್ತಿ ಬಳಕೆಯಾಗಬೇಕಿತ್ತು'



ದೊಡ್ಡಬಳ್ಳಾಪುರ

ಸಮಾಜದ ಏಳಿಗೆ ಮತ್ತು ಆತ್ಮೋದ್ಧಾರಕ್ಕಾಗಿ ಬಳಕೆಯಾಗಬೇಕಿದ್ದ ಭಕ್ತಿ ಇಂದು ಕೋಮುವಾದ ಮತ್ತು ಶ್ರೇಣಿವಾದಕ್ಕೆ ಬಳಕೆಯಾಗುತ್ತಿರುವುದು ಅಪ್ರಸ್ತುತ ಹಾಗೂ ಅವೈಚಾರಿಕವಾಗಿದೆ ಎಂದು ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಅಧ್ಯಕ್ಷ ಕಾ. ತ. ಚಿಕ್ಕಣ್ಣ ಹೇಳಿದರು.

ನಗರದ ಕನ್ನಡ ಜಾಗೃತ ಪರಿಷತ್ ಹಾಗೂ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಸಹಯೋಗದಲ್ಲಿ ಕನ್ನಡ ಜಾಗೃತ ಭವನದಲ್ಲಿ ನಡೆದ 'ವಚನ ಮತ್ತು ದಾಸ ಸಾಹಿತ್ಯ ಬಹುಶಿಸ್ತೀಯ ನೋಟ' ಕುರಿತ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಕ್ತಿ ಪರಂಪರೆ ಮೂಲತಃ ಸಮಾಜದಲ್ಲಿ ಸಮಾನತೆ, ಮಾನವೀಯತೆ ಮತ್ತು ಆತ್ಮೋದ್ಧಾರವನ್ನು ಉತ್ತೇಜಿಸಲು ಇದ್ದದ್ದಾಗಿದ್ದು, ಆದರೆ ಇಂದಿನ ದಿನಗಳಲ್ಲಿ ಅದರ ಅರ್ಥವನ್ನು ತಪ್ಪಾಗಿ ಬಳಸಲಾಗುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು. ಇಂತಹ ಸಂದರ್ಭದಲ್ಲಿ ಕನಕದಾಸರ ಕೃತಿಗಳು, ವಿಶೇಷವಾಗಿ 'ರಾಮಧಾನ ಚರಿತೆ', ಸಮಾಜದಲ್ಲಿ ಅಸಮಾನತೆ, ಮೇಲು-ಕೀಳು ಮತ್ತು ಜಾತಿ ವ್ಯವಸ್ಥೆಯ ವಿರುದ್ಧ ಬೆಳಕು ಚೆಲ್ಲುವ ಮಹತ್ವದ ಸಂದೇಶವನ್ನು ನೀಡುತ್ತದೆ ಎಂದು ಅವರು ಹೇಳಿದರು.

ಬುದ್ಧ, ಬಸವ, ಕನಕದಾಸ ಹಾಗೂ ಅಂಬೇಡ್ಕರ್ ಅವರಂತಹ ಮಹನೀಯರ ಚಿಂತನೆಗಳು ಸಮಾಜದ ಅನಿಷ್ಠ ಪದ್ಧತಿಗಳನ್ನು ಹೋಗಲಾಡಿಸಲು ದಾರಿ ತೋರಿಸುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ವಚನ ಸಾಹಿತ್ಯವನ್ನು ಕನ್ನಡ ಸಾಹಿತ್ಯದ ಮುಕುಟಪ್ರಾಯವೆಂದು ಅವರು ಬಣ್ಣಿಸಿದ್ದು, ದಾಸ ಸಾಹಿತ್ಯವು ಭಕ್ತಿಯ ನೆಲೆಯಲ್ಲಿ ತನ್ನದೇ ಆದ ವಿಶಿಷ್ಟ ಸ್ಥಾನ ಹೊಂದಿದೆ ಎಂದರು. ಕನಕದಾಸರು ಮತ್ತು ಪುರಂದರದಾಸರು ದಾಸ ಪರಂಪರೆಯ ಪ್ರಮುಖ ಕವಿಗಳಾಗಿ ಮಾನವೀಯ ಮೌಲ್ಯಗಳನ್ನು ತಮ್ಮ ಕೃತಿಗಳ ಮೂಲಕ ಪ್ರತಿಪಾದಿಸಿದ್ದಾರೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಕೆ. ನರಸಿಂಹಮೂರ್ತಿ ಅವರು 'ಕೆಳವರ್ಗದ ವಚನಕಾರರು ಮತ್ತು ಕೀರ್ತನಕಾರರ ಅರಿವಿನ ಹಾದಿಗಳು' ಕುರಿತು ಮಾತನಾಡಿದರು. ಪ್ರಾಧ್ಯಾಪಕಿ ಎ. ಶ್ರೀಲತಾ ಅವರು 'ವಚನಕಾರ್ತಿಯರ ಜೀವನ ನೋಟ' ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಕನ್ನಡ ಜಾಗೃತ ಪರಿಷತ್ ಅಧ್ಯಕ್ಷ ಕೆ. ವೆಂಕಟೇಶ್, ಪ್ರಧಾನ ಕಾರ್ಯದರ್ಶಿ ಡಿ.ಪಿ. ಆಂಜನೇಯ, ಕಾರ್ಯಕಾರಿ ಸಮಿತಿಯ ಸದಸ್ಯರು ಹಾಗೂ ನಗರಸಭೆ ಸದಸ್ಯ ಟಿ.ಎನ್. ಪ್ರಭುದೇವ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಪ್ರಜಾಪ್ರಭುತ್ವದ ಮೌಲ್ಯಗಳನ್ನು ರಕ್ಷಿಸಲು ಹೋರಾಡಿದ ಎಲ್ಲರಿಗೂ ಗೌರವ ಅರ್ಪಣೆ

ನವದೆಹಲಿ

1975ರಲ್ಲಿ ದೇಶದಲ್ಲಿ ಜಾರಿಗೊಳಿಸಲಾದ ತುರ್ತು ಪರಿಸ್ಥಿತಿಯನ್ನು ಭಾರತದ ಸಂವಿಧಾನದ ಮೇಲಿನ ನೇರ ದಾಳಿ ಎಂದು ಪ್ರಧಾನಿ ನರೇಂದ್ರ ಮೋದಿ ಗುರುವಾರ ಬಣ್ಣಿಸಿದ್ದಾರೆ. ಜೂನ್ 25ರಂದು ಆಚರಿಸಲಾಗುತ್ತಿರುವ 'ಸಂವಿಧಾನ ಹತ್ಯಾ ದಿವಸ್' ಅಂಗವಾಗಿ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ಪ್ರಜಾಪ್ರಭುತ್ವದ ಮೌಲ್ಯಗಳನ್ನು ರಕ್ಷಿಸಲು ಹೋರಾಡಿದ ಎಲ್ಲರಿಗೂ ಗೌರವ ನಮನ ಸಲ್ಲಿಸಿದ್ದಾರೆ.

ತುರ್ತು ಪರಿಸ್ಥಿತಿ ಭಾರತದ ಇತಿಹಾಸದ ಅತ್ಯಂತ ಕರಾಳ ಅಧ್ಯಾಯಗಳಲ್ಲಿ ಒಂದಾಗಿದೆ ಎಂದು ಹೇಳಿದ ಪ್ರಧಾನಿ, ಆ ಅವಧಿಯಲ್ಲಿ ನಾಗರಿಕರ ಮೂಲಭೂತ ಹಕ್ಕುಗಳನ್ನು ಅಮಾನತುಗೊಳಿಸಲಾಗಿತ್ತು, ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ನಿರ್ಬಂಧಿಸಲಾಗಿತ್ತು ಹಾಗೂ ರಾಜಕೀಯ ನಾಯಕರು, ಪತ್ರಕರ್ತರು ಮತ್ತು ಸಾಮಾಜಿಕ ಕಾರ್ಯಕರ್ತರನ್ನು ಬಂಧಿಸಲಾಗಿತ್ತು ಎಂದು ಸ್ಮರಿಸಿದರು.

"ತುರ್ತು ಪರಿಸ್ಥಿತಿಯು ನಮ್ಮ ಸಂವಿಧಾನದ ಮೇಲಿನ ನೇರ ದಾಳಿಯಾಗಿತ್ತು. ಪ್ರಜಾಪ್ರಭುತ್ವದ ಅಡಿಪಾಯವಾಗಿರುವ ಸಂಸ್ಥೆಗಳ ಮೇಲೂ ಒತ್ತಡ ಹೇರಲಾಗಿತ್ತು. ಸಂವಿಧಾನದ ಮೌಲ್ಯಗಳನ್ನು ಉಳಿಸಲು ಹೋರಾಡಿದ ಎಲ್ಲರಿಗೂ ನಾನು ಗೌರವ ಸಲ್ಲಿಸುತ್ತೇನೆ" ಎಂದು ಪ್ರಧಾನಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

ಭಾರತದ 140 ಕೋಟಿ ಜನರ ಆಶಯಗಳು, ಹಕ್ಕುಗಳು ಮತ್ತು ಕರ್ತವ್ಯಗಳನ್ನು ಪ್ರತಿಬಿಂಬಿಸುವ ಮಹತ್ವದ ದಾಖಲೆ ಸಂವಿಧಾನವಾಗಿದೆ ಎಂದು ಪ್ರಧಾನಿ ಹೇಳಿದರು. "ನಾವು ಸಂವಿಧಾನದ ಮೌಲ್ಯಗಳನ್ನು ರಕ್ಷಿಸುವ ನಮ್ಮ ಸಾಮೂಹಿಕ ಬದ್ಧತೆಯನ್ನು ಮತ್ತೊಮ್ಮೆ ಪುನರುಚ್ಚರಿಸುತ್ತೇವೆ. ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ತತ್ವಗಳ ಆಧಾರದ ಮೇಲೆ ಭಾರತವನ್ನು ಇನ್ನಷ್ಟು ಬಲಿಷ್ಠ ರಾಷ್ಟ್ರವನ್ನಾಗಿ ನಿರ್ಮಿಸುತ್ತೇವೆ" ಎಂದು ಅವರು ಹೇಳಿದರು.

ಮತ್ತೊಂದು ಪೋಸ್ಟ್‌ನಲ್ಲಿ, "ಸಂವಿಧಾನ ಹತ್ಯಾ ದಿವಸ್ ಭಾರತೀಯ ಪ್ರಜಾಪ್ರಭುತ್ವವನ್ನು ಹೇಗೆ ಹತ್ತಿಕ್ಕಲಾಯಿತು ಎಂಬುದನ್ನು ನೆನಪಿಸುತ್ತದೆ. ಇದು ಪ್ರಜಾಪ್ರಭುತ್ವ, ಸಂವಿಧಾನ ಮತ್ತು ನಾಗರಿಕರ ಹಕ್ಕುಗಳ ರಕ್ಷಣೆಗೆ ಸದಾ ಬದ್ಧರಾಗಿರಲು ಪ್ರೇರಣೆ ನೀಡುತ್ತದೆ" ಎಂದು ತಿಳಿಸಿದ್ದಾರೆ.

## 'ರೈತರ ಆರ್ಥಿಕ ಬಲವರ್ಧನೆಗೆ ಒತ್ತು'

ದೊಡ್ಡಬಳ್ಳಾಪುರ

ತೂಬಗೆರೆ ಹಾಲು ಉತ್ಪಾದಕರ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಸಂಘದ ಅಧ್ಯಕ್ಷ ರಾಮಚಂದ್ರಪ್ಪ ಅವರ ನೇತೃತ್ವದಲ್ಲಿ ನಡೆಯಿತು. ಸಭೆಯಲ್ಲಿ ಹೈನುಗಾರಿಕೆಯ ಅಭಿವೃದ್ಧಿ, ರೈತರ ಆದಾಯ ಹೆಚ್ಚಳ ಹಾಗೂ ಸಂಘದ ಆರ್ಥಿಕ ಪ್ರಗತಿ ಕುರಿತು ವಿಸ್ತೃತವಾಗಿ ಚರ್ಚೆ ನಡೆಯಿತು.

ಸಭೆಯಲ್ಲಿ ಮಾಜಿ ಜಿಲ್ಲಾ ಪಂಚಾಯತಿ ಸದಸ್ಯ ಅರವಿಂದ್ ಮಾತನಾಡಿ, ಕೃಷಿಯೊಂದಿಗೆ ಹೈನುಗಾರಿಕೆ ಮತ್ತು ಪಶುಪಾಲನೆ ಗ್ರಾಮೀಣ ಆರ್ಥಿಕತೆಯ ಪ್ರಮುಖ ಬೆನ್ನೆಲುಬಾಗಿವೆ ಎಂದು ಹೇಳಿದರು. ಸರ್ಕಾರದ ಸಬ್ಸಿಡಿಗಳು, ಹಾಲು ಸಹಕಾರ ಸಂಘಗಳ ನೆರವು ಮತ್ತು ಪಶುಪಾಲನೆಯಿಂದ ರೈತರು ತಮ್ಮ ಆದಾಯವನ್ನು ಹೆಚ್ಚಿಸಿಕೊಳ್ಳುವ ಅವಕಾಶಗಳು ವಿಸ್ತರಿಸಿವೆ ಎಂದು ಅವರು ಅಭಿಪ್ರಾಯಪಟ್ಟರು. ನಂದಿನಿ ಫೀಡ್ಸ್ ಬಳಕೆಯಿಂದ ಹಾಲಿನ ಉತ್ಪಾದನೆ ಗುಣಮಟ್ಟ ಉತ್ತಮವಾಗುತ್ತದೆ ಎಂದು ಅವರು ಹೇಳಿದರು.

ಬೆಂಗಳೂರು ಹಾಲು ಒಕ್ಕೂಟದ ಉಪ ವ್ಯವಸ್ಥಾಪಕ ಎಲ್. ಬಿ. ನಾಗರಾಜ್ ಮಾತನಾಡಿ, ತೂಬಗೆರೆ ಹಾಲು ಉತ್ಪಾದಕರ ಸಹಕಾರ ಸಂಘವು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಈ ವರ್ಷ ಸುಮಾರು 14 ಲಕ್ಷ 90 ಸಾವಿರ ಲಾಭ ಗಳಿಸಿದೆ ಎಂದು ತಿಳಿಸಿದರು. ರೈತರು ಹೆಚ್ಚಿನ ಸಂಖ್ಯೆಯಲ್ಲಿ ಹಸುಗಳನ್ನು ಸಾಕಿ ಸಂಘಕ್ಕೆ ಹಾಲು ಪೂರೈಕೆ ಹೆಚ್ಚಿಸಿದರೆ ಸಂಘ ಇನ್ನಷ್ಟು ಬಲಿಷ್ಠವಾಗಲಿದೆ ಎಂದು ಅವರು ಹೇಳಿದರು.

ಅವರು ಮುಂದುವರೆದು, ಗ್ರಾಮೀಣ ಹಾಲು ಉತ್ಪಾದಕರಿಗೆ ನ್ಯಾಯಯುತ ದರ ನೀಡುವುದರ ಜೊತೆಗೆ ನಗರ ಪ್ರದೇಶದ ಗ್ರಾಹಕರಿಗೆ ಶುದ್ಧ, ಆರೋಗ್ಯಕರ ಹಾಗೂ ಗುಣಮಟ್ಟದ ಹಾಲು ಮತ್ತು ಹಾಲು ಉತ್ಪನ್ನಗಳನ್ನು ಪೂರೈಸಲಾಗುತ್ತಿದೆ ಎಂದು ವಿವರಿಸಿದರು. ಬೆಣ್ಣೆ, ತುಪ್ಪ, ಪೇಡಾ, ಬರ್ಫಿ, ಪನೀರ್, ಖೋವಾ ಸೇರಿದಂತೆ ಹಲವು ಉತ್ಪನ್ನಗಳಿಗೆ ಬೇಡಿಕೆ ಹೆಚ್ಚುತ್ತಿರುವುದಾಗಿ ಅವರು ತಿಳಿಸಿದರು.

ಹೈನುಗಾರಿಕೆ ಕ್ಷೇತ್ರದ ಅಭಿವೃದ್ಧಿಗಾಗಿ ತಾಂತ್ರಿಕ ಸಹಾಯ, ಪಶು ಆಹಾರ ಪೂರೈಕೆ ಹಾಗೂ ಮಾರುಕಟ್ಟೆ ಸಂಪರ್ಕವನ್ನು ವಿಸ್ತರಿಸಲಾಗುತ್ತಿದೆ ಎಂದು ಅವರು ಹೇಳಿದರು. ರೈತರ ಆರ್ಥಿಕ ಸ್ಥಿರತೆಗೆ ಸಹಕಾರಿ ಸಂಘಗಳು ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ಅವರು ಅಭಿಪ್ರಾಯಪಟ್ಟರು.

ಸಭೆಯಲ್ಲಿ ತೂಬಗೆರೆ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಟಿ.ವಿ. ವೆಂಕಟೇಶ್, ಸದಸ್ಯರುಗಳಾದ ಮುನಿಕೃಷ್ಣಪ್ಪ, ದೇವೇಂದ್ರ ಸ್ವಾಮಿ, ಹಾಲು ಉತ್ಪಾದಕರ ಸಹಕಾರ ಸಂಘದ ಮಾಜಿ ಅಧ್ಯಕ್ಷ ಗಂಗರಾಜು, ನಾರಾಯಣಸ್ವಾಮಿ, ವೆಂಕಟಪ್ಪ, ಹಾಲು ಒಕ್ಕೂಟದ ವಿಸ್ತರಣಾಧಿಕಾರಿ ವಿನಯ್ ಕುಮಾರ್, ಸಂಘದ ಕಾರ್ಯದರ್ಶಿ ಶ್ರೀನಿವಾಸ್ ಸೇರಿದಂತೆ ನಿರ್ದೇಶಕರು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಮಾಲೂರಿನಲ್ಲಿ ವಿಶ್ವ ತಂಬಾಕು ವಿರೋಧಿ ದಿನಾಚರಣೆ

ಮಾಲೂರು

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ಹಾಗೂ ಜಿಲ್ಲಾ ಜನಜಾಗೃತಿ ವೇದಿಕೆ ಕೋಲಾರ ವತಿಯಿಂದ ತಾಲೂಕಿನ ಕೆ.ಎಲ್.ಇ ಶಾಲೆಯಲ್ಲಿ ವಿಶ್ವ ತಂಬಾಕು ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿ ತಂಬಾಕು ಬಳಕೆಯ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಲಾಯಿತು.

ಧರ್ಮಸ್ಥಳ ಯೋಜನೆಯ ಜಿಲ್ಲಾ ಜನಜಾಗೃತಿ ವೇದಿಕೆ ಮೂಲಕ ಜನರಲ್ಲಿ ದುಶ್ಚಟಗಳ ವಿರುದ್ಧ ನಿರಂತರವಾಗಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಸಮಾಜದ ಆರೋಗ್ಯ ಹಾಗೂ ಸ್ವಾಸ್ಥ್ಯಕ್ಕಾಗಿ ಇಂತಹ ಕಾರ್ಯಕ್ರಮಗಳು ಅತ್ಯಂತ ಅಗತ್ಯವೆಂದು ಬಿ.ಎಸ್. ಹಿರೇಮಠ್ ಹೇಳಿದರು. ಅವರು ತಂಬಾಕು ವಿರೋಧಿ ದಿನಾಚರಣೆಯ ಮಹತ್ವವನ್ನು ವಿವರಿಸಿ, ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರ ಸಹಕಾರ ಅಗತ್ಯವೆಂದು ಒತ್ತಿಹೇಳಿದರು. ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ ಆರೋಗ್ಯ ಇಲಾಖೆಯ ಸುಮತಿ ಅವರು ತಂಬಾಕು ಸೇವನೆಯಿಂದ ಉಂಟಾಗುವ ಗಂಭೀರ ಆರೋಗ್ಯ ಸಮಸ್ಯೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ಕ್ಯಾನ್ಸರ್, ಶ್ವಾಸಕೋಶದ ಕಾಯಿಲೆಗಳು ಮತ್ತು ಹೃದಯ ಸಂಬಂಧಿ ಸಮಸ್ಯೆಗಳ ಅಪಾಯವನ್ನು ವಿವರಿಸಿದ ಅವರು, ವ್ಯಸನದಿಂದ ದೂರವಿರುವುದು ಆರೋಗ್ಯಕರ ಜೀವನಕ್ಕೆ ಮುಖ್ಯ ಎಂದು ಹೇಳಿದರು.

ಅವರು ಉತ್ತಮ ಆರೋಗ್ಯವೇ ಜೀವನದ ನಿಜವಾದ ಸಂಪತ್ತು ಎಂದು ಹೇಳಿ, ಮಾನಸಿಕ ದೃಢತೆ, ಶಿಸ್ತುಬದ್ಧ ಜೀವನಶೈಲಿ ಹಾಗೂ ಸಕಾರಾತ್ಮಕ ಚಟುವಟಿಕೆಗಳನ್ನು ಅಳವಡಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ವಲಯ ಮೇಲ್ವಿಚಾರಕ ಸುದರ್ಶನ್ ವೈ. ಎಂ, ಕೃಷಿ ಮೇಲ್ವಿಚಾರಕ ಶಿವಕುಮಾರ್, ಸ್ಥಳೀಯ ಸೇವಾ ಪ್ರತಿನಿಧಿಗಳು, ಶಿಕ್ಷಕರು ಹಾಗೂ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಭಾಗವಹಿಸಿದವರು ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಒಗ್ಗಟ್ಟಿನ ಸಂದೇಶ ನೀಡಿದರು.

## 'ಮಧ್ಯಾಹ್ನ ಬಿಸಿ ಊಟಕ್ಕೆ ಬೇಳೆ, ಎಣ್ಣೆ ವೆಚ್ಚ ದಾಸೋಹ ಅನುದಾನದಲ್ಲಿ ಭರಿಸಬೇಕು'

ಕೋಲಾರ

ಜಿಲ್ಲೆಯಾದ್ಯಂತ ಪ್ರಾಥಮಿಕ ಶಾಲೆಗಳಲ್ಲಿ ಮಧ್ಯಾಹ್ನ ಬಿಸಿ ಊಟ ಯೋಜನೆ ಸರಾಗವಾಗಿ ನಡೆಯಲು ಅಗತ್ಯವಿರುವ ತೊಗರಿ ಬೇಳೆ ಹಾಗೂ ಅಡುಗೆ ಎಣ್ಣೆಯ ವೆಚ್ಚವನ್ನು ದಾಸೋಹ ಅನುದಾನದ ಮೂಲಕ ಭರಿಸಬೇಕೆಂದು ಜಿಲ್ಲಾ ಅಕ್ಷರ ದಾಸೋಹ ಶಿಕ್ಷಣಾಧಿಕಾರಿ ತಿಮ್ಮರಾಯಪ್ಪ ಹೇಳಿದರು.

ಅವರು ತಮ್ಮ ಕಚೇರಿಯಲ್ಲಿ ಜಿಲ್ಲಾ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರ ಸಂಘದ ಮನವಿ ಸ್ವೀಕರಿಸಿ ಮಾತನಾಡಿದರು. ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಮಧ್ಯಾಹ್ನದ ಬಿಸಿ ಊಟ ಯೋಜನೆಯನ್ನು ಯಾವುದೇ ಅಡಚಣೆಯಿಲ್ಲದೆ ಯಶಸ್ವಿಯಾಗಿ ಮುಂದುವರಿಸುವುದು ಇಲಾಖೆಯ ಪ್ರಮುಖ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಅವರು ಮುಂದುವರೆದು, ಮೊಟ್ಟೆ ದರದಲ್ಲಿ ಉಂಟಾಗುತ್ತಿರುವ ವ್ಯತ್ಯಾಸದ ಕುರಿತು ಈಗಾಗಲೇ ರಾಜ್ಯ ಮಟ್ಟದಲ್ಲಿ ಚರ್ಚೆ ನಡೆಯುತ್ತಿದ್ದು, ಸಂಬಂಧಿತ ಉನ್ನತ ಅಧಿಕಾರಿಗಳ ನಿರ್ದೇಶನಕ್ಕಾಗಿ ಕಾಯಲಾಗುತ್ತಿದೆ ಎಂದು ಹೇಳಿದರು. ಹೆಚ್ಚುತ್ತಿರುವ ತರಕಾರಿ ಬೆಲೆ ಹಾಗೂ ಅನಿಲ ವೆಚ್ಚದ ಪರಿಣಾಮಗಳ ಕುರಿತು ಕೂಡ ಸಮಾಲೋಚನೆ ನಡೆಯುತ್ತಿದೆ ಎಂದು ಅವರು ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರ ಸಂಘದ ಜಿಲ್ಲಾಧ್ಯಕ್ಷ ಜಿ. ಶ್ರೀನಿವಾಸ್ ಸೇರಿದಂತೆ ಸಂಘದ ಪದಾಧಿಕಾರಿಗಳು ಭಾಗವಹಿಸಿ ಮನವಿ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಬಿ.ಎಂ. ನಾರಾಯಣಸ್ವಾಮಿ, ಕೋಶಾಧ್ಯಕ್ಷ ಕೆ.ವಿ. ಜಗನ್ನಾಥ್, ಕೋಲಾರ ತಾಲೂಕು ಅಧ್ಯಕ್ಷ ಶಿವರಾಜ್, ಕಾರ್ಯದರ್ಶಿ ಮುನಿಸ್ವಾಮಿ, ಶಿಕ್ಷಣ ಸಂಯೋಜಕ ಸಿ.ವಿ. ನಾಗರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮಾಲೂರಿನಲ್ಲಿ ಪಲ್ಸ್ ಪೋಲಿಯೋ ಪೂರ್ವಭಾವಿ ಸಭೆ: 2026ರ ಲಸಿಕಾ ಅಭಿಯಾನಕ್ಕೆ ಸಿದ್ಧತೆ

ಮಾಲೂರು

ಪೋಲಿಯೋ ನಿರ್ಮೂಲನೆ ಕಾರ್ಯದಲ್ಲಿ ಭಾರತ ದೇಶವು ಗಣನೀಯ ಪ್ರಗತಿ ಸಾಧಿಸಿದ್ದು, ಜನವರಿ 2011ರಿಂದ ಯಾವುದೇ ಹೊಸ ಪೋಲಿಯೋ ಪ್ರಕರಣ ದಾಖಲಾಗಿಲ್ಲ ಎಂದು ತಹಶಿಲ್ದಾರ್ ಎಂ. ವಿ. ರೂಪ ಹೇಳಿದರು. ಅವರು ನಗರದ ಸಾಮರ್ಥ್ಯ ಸೌಧ ಸಭಾಂಗಣದಲ್ಲಿ ನಡೆದ ಪೋಲಿಯೋ ನಿರ್ಮೂಲನೆ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಭಾರತವು ವಿಶ್ವ ಆರೋಗ್ಯ ಸಂಸ್ಥೆಯಿಂದ ಪೋಲಿಯೋ ಮುಕ್ತ ರಾಷ್ಟ್ರ ಎಂಬ ಪ್ರಮಾಣಪತ್ರ ಪಡೆದಿರುವುದು ದೊಡ್ಡ ಸಾಧನೆಯಾಗಿದ್ದು, ಆದರೆ ನೆರೆಯ ಕೆಲವು ದೇಶಗಳಲ್ಲಿ ಇನ್ನೂ ಪ್ರಕರಣಗಳು ವರದಿಯಾಗುತ್ತಿರುವುದರಿಂದ ಜಾಗರೂಕತೆ ಅಗತ್ಯವಿದೆ ಎಂದು ಅವರು ಹೇಳಿದರು. ಪಾಕಿಸ್ತಾನ, ಆಫ್ಘಾನಿಸ್ತಾನ ಮತ್ತು ಕೆಲವು ಇತರ ದೇಶಗಳಲ್ಲಿ ಇನ್ನೂ ಪೋಲಿಯೋ ಪ್ರಕರಣಗಳು ದಾಖಲಾಗುತ್ತಿರುವ ಹಿನ್ನೆಲೆಯಲ್ಲಿ ರೋಗ ಮರುಹರಡುವ ಅಪಾಯವನ್ನು



ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಲಾಗುವುದಿಲ್ಲ ಎಂದು ಅವರು ಎಚ್ಚರಿಸಿದರು.

ಈ ಹಿನ್ನೆಲೆಯಲ್ಲಿ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ, ನಿಯಮಿತ ಲಸಿಕಾ ಅಭಿಯಾನ ಹಾಗೂ ತೀವ್ರ ನಿಗಾ (ಂಈಕ) ಸರ್ವೇಕ್ಷಣಾ ಕಾರ್ಯಗಳನ್ನು ಹೆಚ್ಚು ಜಾಗರೂಕತೆಯಿಂದ ನಿರ್ವಹಿಸಬೇಕಾಗಿದೆ ಎಂದು ಅವರು ತಿಳಿಸಿದರು.

2026-27ನೇ ಸಾಲಿನ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಜೂನ್ 28ರಿಂದ ಜುಲೈ 1ರವರೆಗೆ ಹಮ್ಮಿಕೊಳ್ಳಲಾಗಿದ್ದು, ಮೊದಲ ದಿನ ಬೂತ್ ಮಟ್ಟದಲ್ಲಿ ಲಸಿಕೆ ನೀಡಲಾಗುತ್ತದೆ. ನಂತರದ ಎರಡು ರಿಂದ ಮೂರು ದಿನಗಳಲ್ಲಿ ಮನೆ ಮನೆ ಭೇಟಿ ಮೂಲಕ 05 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಹನಿ ನೀಡಲಾಗುತ್ತದೆ ಎಂದು ತಿಳಿಸಲಾಯಿತು.

ಮಾಲೂರು ತಾಲ್ಲೂಕಿನಲ್ಲಿ ಒಟ್ಟು 27,447 ಮಕ್ಕಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದ್ದು, 118 ಬೂತ್‌ಗಳು, 3 ಕೇಂದ್ರಗಳು ಹಾಗೂ 1 ಮೊಬೈಲ್ ತಂಡದ ಮೂಲಕ ಮೊದಲ ದಿನ ಕಾರ್ಯಕ್ರಮ ನಡೆಯಲಿದೆ. ನಂತರದ ಮನೆ ಮನೆ ಭೇಟಿ ಕಾರ್ಯದಲ್ಲಿ ಸುಮಾರು 63,456 ಮನೆಗಳನ್ನು ತಲುಪುವ ಯೋಜನೆ ರೂಪಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದರು.

ಒಟ್ಟಾರೆ 861 ಗಂಡಾಂತರ ಪ್ರದೇಶಗಳನ್ನು ಗುರುತಿಸಲಾಗಿದ್ದು, ಅಲ್ಲಿ ವಿಶೇಷವಾಗಿ ಮಕ್ಕಳಿಗೆ ಲಸಿಕೆ ನೀಡುವ ವ್ಯವಸ್ಥೆ ಮಾಡಲಾಗಿದೆ. ಈ ಕಾರ್ಯದಲ್ಲಿ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ನರ್ಸಿಂಗ್ ವಿದ್ಯಾರ್ಥಿಗಳು ಹಾಗೂ ಆರೋಗ್ಯ ಸಿಬ್ಬಂದಿ ಸೇರಿದಂತೆ ಒಟ್ಟು 492 ಸಿಬ್ಬಂದಿ ಭಾಗವಹಿಸಲಿದ್ದಾರೆ. ಜೊತೆಗೆ 24 ಮೇಲ್ವಿಚಾರಕರು ಕಾರ್ಯಾಚರಣೆಯನ್ನು ನಿಗಾ ವಹಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಪಂಚಾಯತ್ ರಾಜ್, ಶಿಕ್ಷಣ ಇಲಾಖೆ, ನಗರಸಭೆ ಸೇರಿದಂತೆ ಹಲವು ಇಲಾಖೆಗಳು ಹಾಗೂ ಎನ್‌ಜಿಒಗಳು ಸಹ ಭಾಗವಹಿಸಲಿವೆ ಎಂದು ತಿಳಿಸಲಾಯಿತು.

ಸಭೆಯಲ್ಲಿ ತಾಲೂಕು ಆರೋಗ್ಯ ನಿರೀಕ್ಷಣಾಧಿಕಾರಿಗಳು, ಆಸ್ಪತ್ರೆಯ ಆರ್‌ಕೆಎಸ್‌ಕೆ ಸಲಹೆಗಾರರು ಹಾಗೂ ವಿವಿಧ

ಭಾರತ ಸಾರಥಿ
27/06/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಆರಂಭ



ಚಿಕ್ಕಬಳ್ಳಾಪುರ

ತಾಲ್ಲೂಕಿನಲ್ಲಿ ಬೂತ್ ಮಟ್ಟದ ಅಧಿಕಾರಿಗಳು ಜೂನ್ 30ರಿಂದ ಜುಲೈ 29ರವರೆಗೆ ಮನೆಮನೆಗೆ ಭೇಟಿ ನೀಡಿ ಪ್ರತಿಯೊಬ್ಬ ಮತದಾರರಿಗೆ ಗಣತಿ ನಮೂನೆಯನ್ನು ಎರಡು ಪ್ರತಿಗಳಲ್ಲಿ ವಿತರಿಸಿ, ಭರ್ತಿ ಮಾಡಿದ ನಮೂನೆಗಳನ್ನು ಮರುಸ್ವೀಕರಿಸಲಿದ್ದಾರೆ ಎಂದು ತಹಸೀಲ್ದಾರ್ ರಶ್ಮಿ ಹೇಳಿದರು.

ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣಾ ಆಯೋಗದ ಮಾರ್ಗಸೂಚಿಗಳಂತೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ವ್ಯವಸ್ಥಿತವಾಗಿ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಈ ಅಭಿಯಾನದ ಮುಖ್ಯ ಉದ್ದೇಶ ಯಾವುದೇ ಅರ್ಹ ನಾಗರಿಕ ಮತದಾನದ ಹಕ್ಕಿನಿಂದ ವಂಚಿತರಾಗದಂತೆ ನೋಡಿಕೊಳ್ಳುವುದು ಹಾಗೂ ಅನರ್ಹ ಅಥವಾ ಅನಧಿಕೃತ ಹೆಸರುಗಳು ಪಟ್ಟಿಯಲ್ಲಿ ಸೇರ್ಪಡೆಯಾಗದಂತೆ ತಡೆಗಟ್ಟುವುದಾಗಿದೆ ಎಂದು ಅವರು ಹೇಳಿದರು.

ಮತದಾರರ ಪಟ್ಟಿಯ ಪರಿಷ್ಕರಣೆಯ ಭಾಗವಾಗಿ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ತರಬೇತಿ, ದಾಖಲೆ ಮುದ್ರಣ, ಮತಗಟ್ಟೆಗಳ ಪುನರ್‌ವಿಂಗಡಣೆ, ಮನೆಮನೆ ಭೇಟಿ, ಆಕ್ಷೇಪಣೆಗಳ ಸ್ವೀಕೃತಿ ಹಾಗೂ ವಿಲೇವಾರಿ ಸೇರಿದಂತೆ ಎಲ್ಲಾ ಹಂತದ ಕಾರ್ಯಗಳನ್ನು ಹಂತ ಹಂತವಾಗಿ ಕೈಗೊಳ್ಳಲಾಗುತ್ತಿದೆ ಎಂದು ಅವರು ವಿವರಿಸಿದರು. ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 7ರಂದು ಪ್ರಕಟಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಮತಗಟ್ಟೆ ಮಟ್ಟದ ಅಧಿಕಾರಿಗಳು ಜೂನ್ 30ರಿಂದ ಜುಲೈ 29ರವರೆಗೆ ಮನೆಮನೆಗೆ ಭೇಟಿ ನೀಡಿ ಮತದಾರರಿಗೆ ಗಣತಿ ನಮೂನೆಗಳನ್ನು ವಿತರಿಸಿ, ಭರ್ತಿ ಮಾಡಿದ ನಮೂನೆಗಳನ್ನು ಮರುಸ್ವೀಕರಿಸಲಿದ್ದಾರೆ. ನಮೂನೆ ಸರಿಯಾಗಿ ಭರ್ತಿ ಮಾಡಿ ಸಮಯಕ್ಕೆ ಸಲ್ಲಿಸುವುದು ಅತ್ಯಂತ ಮುಖ್ಯವಾಗಿದ್ದು, ವಿಳಂಬವಾದರೆ ಹೆಸರು ಕರಡು ಪಟ್ಟಿಯಲ್ಲಿ ಸೇರದ ಸಾಧ್ಯತೆ ಇದೆ ಎಂದು ಅವರು ಎಚ್ಚರಿಸಿದರು.

ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ 2025ರ ಮತದಾರರ ಪಟ್ಟಿಯ ಪ್ರಕಾರ ಒಟ್ಟು 2,09,268 ಮತದಾರರಿದ್ದು, ಈ ಪೈಕಿ 1,99,825 ಮತದಾರರ ಮ್ಯಾಪಿಂಗ್ ಪೂರ್ಣಗೊಂಡು ಶೇ.95.49 ಪ್ರಗತಿ ಸಾಧಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಸಭೆಯಲ್ಲಿ ನಗರಸಭೆ ಪೌರಾಯುಕ್ತ ಮನ್ಸೂರ್ ಅಲಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# 29ರಂದು ನೇರಸಂದರ್ಶನ

ತುಮಕೂರು

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಸೋಮರ್‌ಸೆಟ್ ಥೆರಪ್ಯೂಟಿಕ್ಸ್ ಲಿಮಿಟೆಡ್, ಆಶೀರ್ವಾದ್ ಮೈಕ್ರೋಫಿನ್ ಲಿಮಿಟೆಡ್, ಝುವೆಂಡಸ್ ಹೆಲ್ತ್ ಕೇರ್ ಲಿ. ದಾಬಸ್‌ಪೇಟೆ ಹಾಗೂ ಸನವ್ ಆಟೋ ಮೋಟಿವ್ಸ್ ಸಂಸ್ಥೆಯ ಸಹಭಾಗಿತ್ವದಲ್ಲಿ ನಿರುದ್ಯೋಗಿಗಳಿಗೆ ಉದ್ಯೋಗ ನೀಡುವ ಸಂಬಂಧ ಜೂನ್ 29ರಂದು ನೇರಸಂದರ್ಶನ ನಡೆಯಲಿದೆ.

ಪಿ.ಯು.ಸಿ, ಯಾವುದೇ ಪದವಿ, ಬಿ.ಎಸ್ಸಿ ಹಾಗೂ ಎಂ.ಎಸ್ಸಿ ಪಾಸಾದ ಅಭ್ಯರ್ಥಿಗಳು ನೇರಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ವೇತನ 15,000 ರೂ ಗಳಿಂದ 24,000 ರೂ.ಗಳವರೆಗೆ ನೀಡಲಾಗುತ್ತದೆ.

ಅರ್ಹ ಅಭ್ಯರ್ಥಿಗಳು ಜೂನ್ 29ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಡಿ.ಡಿ.ಪಿ.ಐ ಬಸ್ ನಿಲ್ದಾಣ, ವಾಸನ್ ಕಣ್ಣಿನ ಆಸ್ಪತ್ರೆ ಹತ್ತಿರ, ಮೂಲೆಮನೆ ಹೋಟೆಲ್ ಪಕ್ಕ, ಸೋಮೇಶ್ವರಪುರಂ, 14ನೇ ಕ್ರಾಸ್, ತುಮಕೂರು-572102 ಇಲ್ಲಿ ತಮ್ಮ ಬಯೋಡೇಟಾದೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0816-2278488, 8792669410ಯನ್ನು ಸಂಪರ್ಕಿಸಬಹುದೆಂದು ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಲಾ ಕಾಂಪೌಂಡ್‌ಗೆ ಕ್ಯಾಂಟರ್ ಡಿಕ್ಕಿ: ತಪ್ಪಿದ ಅನಾಹುತ



ಕೊರಟಗೆರೆ

ಚಾಲಕನ ನಿಯಂತ್ರಣ ತಪ್ಪಿದ ಕ್ಯಾಂಟರ್ ವಾಹನವು ಶಾಲಾ ಕೌಂಪೌಂಡ್‌ಗೆ ಡಿಕ್ಕಿ ಹೊಡೆದ ಘಟನೆ ತಾಲ್ಲೂಕಿನ ಹೊಳವನಹಳ್ಳಿ ಹೋಬಳಿಯ ಬೈರೇನಹಳ್ಳಿಯಲ್ಲಿ ನಡೆದಿದ್ದು, ಭಾರೀ ಅನಾಹುತ ತಪ್ಪಿದಂತಾಗಿದೆ.

ಬೈರೇನಹಳ್ಳಿ ಸರ್ಕಲ್ ಬಳಿ ಸಿರಾ-ಚಿಕ್ಕಬಳ್ಳಾಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ತಡರಾತ್ರಿ ಈ ಘಟನೆ ಸಂಭವಿಸಿದೆ. ಗೌರಿಬಿದನೂರಿನಿಂದ ಮಧುಗಿರಿ ಕಡೆಗೆ ವೇಗವಾಗಿ ಸಾಗುತ್ತಿದ್ದ ಕ್ಯಾಂಟರ್ ಚಾಲಕನ ನಿಯಂತ್ರಣ ತಪ್ಪಿ ನೇರವಾಗಿ ಶಾಲಾ ಕೌಂಪೌಂಡ್‌ಗೆ ಡಿಕ್ಕಿ ಹೊಡೆದಿದೆ ಎಂದು ತಿಳಿದುಬಂದಿದೆ.

ಘಟನೆ ಸಮಯದಲ್ಲಿ ಸ್ಥಳದಲ್ಲಿ ಯಾರೂ ಇಲ್ಲದ ಕಾರಣ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಆದರೆ ಅಪಘಾತದಿಂದ ಕೌಂಪೌಂಡ್‌ಗೆ ಹಾನಿಯಾಗಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಗಮನಾರ್ಹವಾಗಿ, ಇದೇ ಸ್ಥಳದಲ್ಲಿ ಮೇ 31ರಂದು ಟಾಟಾ ಏಸ್ ವಾಹನ ಅಪಘಾತಕ್ಕೊಳಗಾಗಿ ಇಬ್ಬರು ಯುವಕರು ಮೃತಪಟ್ಟಿದ್ದರು. ಅದೇ ಪ್ರದೇಶದಲ್ಲಿ ಪುನಃ ಅಪಘಾತ ಸಂಭವಿಸಿರುವುದು ಸ್ಥಳೀಯರಲ್ಲಿ ಆತಂಕ ಹೆಚ್ಚಿಸಿದೆ.

ಸ್ಥಳೀಯರು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ರಸ್ತೆ ನಿರ್ಮಾಣವು ವೈಜ್ಞಾನಿಕವಾಗಿಲ್ಲ ಎಂದು ಆರೋಪಿಸಿದ್ದು, ಈ ಭಾಗದಲ್ಲಿ ನಿರಂತರವಾಗಿ ಅಪಘಾತಗಳು ಸಂಭವಿಸುತ್ತಿವೆ ಎಂದು ದೂರಿದ್ದಾರೆ. ರಸ್ತೆ ಉಬ್ಬು ಸೇರಿದಂತೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಅವರು ಆರೋಪಿಸಿದ್ದಾರೆ.

ಅಪಘಾತಗಳ ಪುನರಾವೃತ್ತಿಯಿಂದಾಗಿ ಈ ಪ್ರದೇಶದಲ್ಲಿ ತಕ್ಷಣ ಸುರಕ್ಷತಾ ಕ್ರಮಗಳನ್ನು ಜಾರಿಗೆ ತರಬೇಕೆಂಬ ಒತ್ತಾಯ ಹೆಚ್ಚಾಗಿದೆ.

# ಶಿಡ್ಲಘಟ್ಟದಲ್ಲಿ ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆ

ಶಿಡ್ಲಘಟ್ಟ

ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆ ಕಾರ್ಯ ಯಾವುದೇ ರೀತಿಯ ಸಂಶಯಕ್ಕೆ ಅವಕಾಶವಿಲ್ಲದೆ ಸಂಪೂರ್ಣ ಪಾರದರ್ಶಕವಾಗಿ ನಡೆಯಲು ಎಲ್ಲಾ ಸಿದ್ಧತೆಗಳನ್ನು ಪೂರ್ಣಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಹೇಳಿದರು.

ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಮಂಗಳವಾರ ನಡೆದ ಬೂತ್ ಮಟ್ಟದ ಅಧಿಕಾರಿಗಳು, ರಾಜಕೀಯ ಪಕ್ಷಗಳಿಂದ ನೇಮಕಗೊಂಡ ಅಧಿಕಾರಿಗಳಿಗೆ ಆಯೋಜಿಸಿದ್ದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಅವರು ಮಾತನಾಡುತ್ತಾ, ಯಾವುದೇ ಅರ್ಹ ಮತದಾರರನ್ನು ಪಟ್ಟಿಯಿಂದ ಕೈಬಿಡಬಾರದು ಹಾಗೂ ಯಾವುದೇ ಅನರ್ಹ ವ್ಯಕ್ತಿ ಸೇರಬಾರದು ಎಂಬುದೇ ಖಆಖ ಕಾರ್ಯದ ಮೂಲ ಉದ್ದೇಶ ಎಂದು ಸ್ಪಷ್ಟಪಡಿಸಿದರು. ಈ ಪ್ರಕ್ರಿಯೆಯಲ್ಲಿ ಯಾವುದೇ ಪಕ್ಷ, ಜಾತಿ ಅಥವಾ ಧರ್ಮದ ಭೇದವಿಲ್ಲದೆ ನಿಷ್ಪಕ್ಷಪಾತವಾಗಿ ಕೆಲಸ ನಡೆಯಲಿದೆ ಎಂದು ಅವರು ಹೇಳಿದರು.

ಮನೆಮನೆಗೆ ಭೇಟಿ ನೀಡುವ ಅಧಿಕಾರಿಗಳು



ಈಗಾಗಲೇ ಮತದಾರರ ಪಟ್ಟಿಯಲ್ಲಿ ಇರುವವರ ವಿವರಗಳನ್ನು ಒಳಗೊಂಡ ನಮೂನೆಗಳನ್ನು ಕುಟುಂಬಗಳಿಗೆ ನೀಡಲಿದ್ದು, ಅವುಗಳನ್ನು ಸರಿಯಾಗಿ ಭರ್ತಿ ಮಾಡಿಸಿಕೊಳ್ಳಲಾಗುತ್ತದೆ ಎಂದು ಅವರು ತಿಳಿಸಿದರು. ಮತದಾರರು ಹೊರಗಿದ್ದರೆ ಕುಟುಂಬದ ಸದಸ್ಯರು ಅಗತ್ಯ ಮಾಹಿತಿಯನ್ನು ನೀಡಿ ಸಹಿ ಮಾಡಬಹುದು ಎಂದು ಅವರು ವಿವರಿಸಿದರು.

ಈ ಪ್ರಕ್ರಿಯೆ ಹಿಂದೆ 2002ರಲ್ಲಿ ನಡೆದಿದ್ದು, ಇದೀಗ ಮತ್ತೆ ಅದೇ ರೀತಿಯ ಸಮಗ್ರ ಪರಿಷ್ಕರಣೆ ನಡೆಯುತ್ತಿದೆ ಎಂದು ಅವರು ನೆನಪಿಸಿದರು. 2002ಕ್ಕೂ ಮೊದಲು ಮತದಾರರ ಪಟ್ಟಿಯಲ್ಲಿ ಹೆಸರು ಹೊಂದಿದ್ದವರು ತಮ್ಮ ಹಿಂದಿನ ವಿಧಾನಸಭಾ ಕ್ಷೇತ್ರದ ವಿವರಗಳನ್ನು ನೀಡಬೇಕಾಗುತ್ತದೆ ಎಂದು ಅವರು ತಿಳಿಸಿದರು.

ಈಗಾಗಲೇ ಕುಟುಂಬವಾರು ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದ್ದು, ಅಧಿಕಾರಿಗಳು ಮನೆಮನೆಗೆ ಭೇಟಿ ನೀಡಿ ಮಾಹಿತಿಯನ್ನು ಸಂಗ್ರಹಿಸಲಿದ್ದಾರೆ. ಈ ವೇಳೆ ಸ್ಥಳೀಯರು ಹಾಜರಾಗಬಹುದಾಗಿದೆ ಎಂದು ಅವರು ಹೇಳಿದರು.

ಈ ಪರಿಷ್ಕರಣೆ ಕಾರ್ಯದಲ್ಲಿ ನಗರ ಮತ್ತು ಗ್ರಾಮೀಣ ಭಾಗದ ಎಲ್ಲಾ ಮತದಾರರು ಸಹಕಾರ ನೀಡುವುದು ಅಗತ್ಯವಾಗಿದ್ದು, ಇದರಿಂದ ಪ್ರಕ್ರಿಯೆ ಸುಗಮವಾಗಿ ಹಾಗೂ ಪಾರದರ್ಶಕವಾಗಿ ನಡೆಯುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ತರಬೇತಿ ವೇಳೆ ಅಧಿಕಾರಿಗಳು ತಮ್ಮ ಪ್ರಶ್ನೆಗಳನ್ನು ಕೇಳಿ ಅನುಮಾನಗಳನ್ನು ನಿವಾರಿಸಿಕೊಂಡರು. ಮುಂದಿನ ದಿನಗಳಲ್ಲಿ ಇನ್ನೂ ಎರಡು-ಮೂರು ಹಂತದ ತರಬೇತಿ ಕಾರ್ಯಾಗಾರಗಳನ್ನು ಆಯೋಜಿಸಲಾಗುವುದು ಎಂದು ಜಿಲ್ಲಾಧಿಕಾರಿ ಭರವಸೆ ನೀಡಿದರು. ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕ ಎಸ್. ಎಸ್. ಅಬೀದ್, ತಹಶೀಲ್ದಾರ್ ಎನ್. ಗಗನಸಿಂಧು, ನಗರಸಭೆ ಪೌರಾಯುಕ್ತೆ ಜಿ. ಅಮೃತಗೌಡ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದರು.

# ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿಯೇ ಆದ್ಯತೆ

ತುಮಕೂರು

ಗ್ರಾಮೀಣ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಉದ್ಯೋಗ ಸೃಷ್ಟಿಯೇ ಪ್ರಮುಖ ಆದ್ಯತೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಶ್ವಿಜ ಬಿ.ವಿ. ಹೇಳಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಳ್ಳಲಾದ "ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್‌ಗಾರ್ ಮತ್ತು ಆಜೀವಿಕ ಮಿಷನ್ (ಗ್ರಾಮೀಣ)" ಯೋಜನೆಯ ತರಬೇತಿ ಕಾರ್ಯಾಗಾರಕ್ಕೆ ಗಿಡಕ್ಕೆ ನೀರೆರೆಯುವ ಮೂಲಕ ಅವರು ಚಾಲನೆ ನೀಡಿದರು.

ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜುಲೈ 1ರಿಂದ ಯೋಜನೆ ಜಾರಿಗೆ ಬರಲಿದ್ದು, ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅಧಿಕಾರಿಗಳು ಮತ್ತು ಸಿಬ್ಬಂದಿಗೆ ತರಬೇತಿ ನೀಡಲಾಗುತ್ತಿದೆ ಎಂದು ತಿಳಿಸಿದರು. ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸಹಾಯಕ ನಿರ್ದೇಶಕರು ಹಾಗೂ ತಾಂತ್ರಿಕ ಸಿಬ್ಬಂದಿ ಈ ತರಬೇತಿಯಲ್ಲಿ ಭಾಗವಹಿಸಿದ್ದಾರೆ ಎಂದು ಅವರು ಹೇಳಿದರು.

ಈ ಯೋಜನೆಯಡಿ ಗ್ರಾಮೀಣ ಜನರಿಗೆ



ಉದ್ಯೋಗಾವಕಾಶ ಒದಗಿಸುವ ಜೊತೆಗೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಕಾಮಗಾರಿಗಳನ್ನು ಸಮನ್ವಯವಾಗಿ ಜಾರಿಗೆ ತರಲಾಗುವುದು ಎಂದು ಅವರು ವಿವರಿಸಿದರು. ಯೋಜನೆಗೆ ಸಂಬಂಧಿಸಿದ ಎಲ್ಲಾ ರೂಪುರೇಷೆಗಳನ್ನು ಈಗಾಗಲೇ ಸಿದ್ಧಪಡಿಸಲಾಗುತ್ತಿದೆ ಎಂದು ಅವರು ಹೇಳಿದರು.

ಮೈಸೂರು ಮೂಲದ ಅಬ್ದುಲ್ ನಜೀರ್ ಸಾಬ್ ಮಾತನಾಡಿ, ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯಿಂದ ತರಬೇತಿ ಪಡೆದ ಮಾಸ್ಟರ್ ಟ್ರೈನರ್‌ಗಳ ಮೂಲಕ ಯೋಜನೆಯ ಎಲ್ಲಾ ಅಂಶಗಳನ್ನು ಅಧಿಕಾರಿಗಳಿಗೆ ವಿವರಿಸಲಾಗುತ್ತಿದೆ ಎಂದು ಹೇಳಿದರು.

ಈ ಯೋಜನೆಯಡಿ ಪ್ರತಿ ಅರ್ಹ ಗ್ರಾಮೀಣ ಕುಟುಂಬಕ್ಕೆ ಒಂದು ಆರ್ಥಿಕ ವರ್ಷದಲ್ಲಿ 125 ದಿನಗಳ ಉದ್ಯೋಗ ಖಾತರಿ ನೀಡಲಾಗುತ್ತದೆ. ಕೃಷಿ ಕಾರ್ಯಗಳ ಉನ್ನತ ಕಾಲದಲ್ಲಿ 60 ದಿನಗಳ ವಿರಾಮವನ್ನು ಸಹ ಪರಿಗಣಿಸಲಾಗುತ್ತದೆ ಎಂದು ಅವರು ವಿವರಿಸಿದರು.

ವಿಕಸಿತ ಗ್ರಾಮ ಪಂಚಾಯತ್ ಯೋಜನೆಗಳ ಮೂಲಕ ಸಮಗ್ರ ಅಭಿವೃದ್ಧಿ, ಡಿಜಿಟಲ್ ಆಡಳಿತ, ಹೊಣೆಗಾರಿಕೆ ಮತ್ತು ನಾಗರಿಕರ ಪಾಲ್ಗೊಳ್ಳುವಿಕೆ ಹೆಚ್ಚಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ತರಬೇತಿ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಂಜೀವಪ್ಪ ಕೆ.ಪಿ., ಮಾಸ್ಟರ್ ಟ್ರೈನರ್ ಸುರೇಶ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಸುಬ್ಬರಾಜು ಅರಸ್ ಮತ್ತು ಗಂಗಾಧರ್ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

# ಆಕರ್ಷಕ ಬಡ್ಡಿದರ ಸಾಲ ಯೋಜನೆ

ಕೋಲಾರ

ಆಕರ್ಷಕ ಬಡ್ಡಿದರ ಸಾಲ ಯೋಜನೆಗಳು ಹೊಸ ಘಟಕಗಳಿಗೆ ಹಾಗೂ ಅಸ್ತಿತ್ವದಲ್ಲಿದ್ದು ಲಾಭಗಳಿಸುತ್ತಿರುವ ಘಟಕಗಳ ವಿಸ್ತರಣೆ / ಆಧುನೀಕರಣ / ತಾಂತ್ರಿಕ ಉನ್ನತೀಕರಣಕ್ಕೆ ನೇರವಾಗಿ ತೊಡಗಿಸುವ ಹೊಸ ಕಟ್ಟಡ ಹಾಗೂ ಯಂತ್ರೋಪಕರಣಗಳ ಹೂಡಿಕೆಗೆ ಲಭ್ಯವಿದೆ. ಸಂಸ್ಥೆಯಲ್ಲಿ ಚಾಲ್ತಿಯಲ್ಲಿರುವ ಸಾಮಾನ್ಯ ಬಡ್ಡಿದರದ ಅನ್ವಯ ಅವಧಿ ಸಾಲಗಳನ್ನು ಮಂಜೂರಾತಿ ಮಾಡಲಾಗುವುದು.

ಸೂಕ್ಷ್ಮ ಹಾಗೂ ಸಣ್ಣ ಪ್ರಮಾಣದ ಕೈಗಾರಿಕಾ ಚಟುವಟಿಕೆಗಳ ಘಟಕಗಳಿಗೆ ರೂ.5.00 ಲಕ್ಷದಿಂದ 5.00 ಕೋಟಿ ರೂ.ಗಳವರೆಗೆ ಬಡ್ಡಿ ಸಹಾಯಧನ ಸಾಲ ಯೋಜನೆಗೆ 5.50%, ಮಹಿಳಾ ಉದ್ಯಮಿಗಳಿಗೆ ಆರೋಗ್ಯ ಹಾಗೂ ಆತಿಥ್ಯ ಸೇವಾ ಚಟುವಟಿಕೆಗಳ ಘಟಕಗಳಿಗೆ ರೂ.5.00 ಲಕ್ಷದಿಂದ 5.00 ಕೋಟಿ ರೂ.ಗಳವರೆಗೆ ಬಡ್ಡಿ ಸಹಾಯಧನ ಸಾಲ ಯೋಜನೆಗೆ 4%, ಪರಿಶಿಷ್ಟ ಜಾತಿ (ಎಸ್.ಸಿ) / ಪರಿಶಿಷ್ಟ ಪಂಗಡಗಳ (ಎಸ್.ಟಿ.) ಉದ್ಯಮಿಗಳಿಗೆ ಸೂಕ್ಷ್ಮ, ಸಣ್ಣ ಪ್ರಮಾಣದ ಕೈಗಾರಿಕಾ, ಆರೋಗ್ಯ ಮತ್ತು ಆತಿಥ್ಯ ಸೇವಾ ಘಟಕಗಳಿಗೆ ರೂ.10.00 ಲಕ್ಷದಿಂದ 10.00 ಕೋಟಿ ರೂ.ಗಳವರೆಗೆ ಬಡ್ಡಿ ಸಹಾಯಧನ ಸಾಲ ಯೋಜನೆಗೆ 4%, ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು ಪ್ರವರ್ಗ-2(ಎ) ಜಾತಿಗಳ ಉದ್ಯಮಿಗಳಿಗೆ ಸೂಕ್ಷ್ಮ, ಸಣ್ಣ ಪ್ರಮಾಣದ ಕೈಗಾರಿಕಾ, ಆರೋಗ್ಯ ಹಾಗೂ ಆತಿಥ್ಯ ಸೇವಾ ಚಟುವಟಿಕೆಗಳ ಘಟಕಗಳಿಗೆ ರೂ.5.00 ಲಕ್ಷದಿಂದ 10.00 ಕೋಟಿ ರೂ.ಗಳವರೆಗೆ ಬಡ್ಡಿ ಸಹಾಯಧನ ಸಾಲ ಯೋಜನೆಗೆ 5.5%, ಅಲ್ಪಸಂಖ್ಯಾತ ಸಮುದಾಯಗಳ ಉದ್ಯಮಿಗಳಿಗೆ ಸೂಕ್ಷ್ಮ, ಸಣ್ಣ ಪ್ರಮಾಣದ ಕೈಗಾರಿಕಾ, ಆರೋಗ್ಯ ಹಾಗೂ ಆತಿಥ್ಯ ಸೇವಾ ಚಟುವಟಿಕೆಗಳ ಘಟಕಗಳಿಗೆ ರೂ.5.00 ಲಕ್ಷದಿಂದ 10.00 ಕೋಟಿ ರೂ.ಗಳವರೆಗೆ ಬಡ್ಡಿ ಸಹಾಯಧನ ಸಾಲ ಯೋಜನೆಗೆ 5.5% ಯೋಜನೆಗಳಿಗೆ ಅನ್ವಯವಾಗುವ ಬಡ್ಡಿ ಸಹಾಯಧನದ ಮೊತ್ತವನ್ನು ಕರ್ನಾಟಕ ಸರ್ಕಾರದ ಸಂಬಂಧಪಟ್ಟ ಇಲಾಖೆಗಳಿಂದ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಗೆ ದೊರೆತ ನಂತರ ಫಲಾನುಭವಿ ಘಟಕಳಿಗೆ ಲಭ್ಯವಿರುವುದು. ನಿಯಮಿತ ಸಾಲ ಕಂತುಗಳನ್ನು ಮರುಪಾವತಿ ಮಾಡಿದ ಘಟಕಗಳಿಗೆ ಶೇ.:0.50 ಬಡ್ಡಿ ರಿಯಾಯಿತಿ ಹಾಗೂ ರಾಜ್ಯ ಸರ್ಕಾರದಿಂದ ಲಭ್ಯವಿರುವ ಬಡ್ಡಿ ಸಹಾಯಧನ ಪರಿಗಣಿಸಿ ನಿವ್ವಳ ಬಡ್ಡಿ ದರವು ಮೇಲಿನ ಸಾಲ ಯೋಜನೆಗಳಿಗೆ ಅನ್ವಯಿಸುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಾಲತಾಣ: ksfc.karnataka.gov.in ಹಾಗೂ ದೂರವಾಣಿ ಸಂಖ್ಯೆ: 08152-222661, 9845441426, 08152-224757 ಯನ್ನು ಸಂಪರ್ಕಿಸಬಹುದೆಂದು ಸಂಸ್ಥೆಯ ಶಾಖಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯಾವ ಮಗುವಿಗೂ ಲಸಿಕೆ ತಪ್ಪಿಸಬಾರದು: ಡಾ.ಶ್ರೀನಿವಾಸ್



ಕೋಲಾರ

"ದೇಶವು ಪೋಲಿಯೋ ಮುಕ್ತವಾಗಿದ್ದರೂ ಸಹ, ನೆರೆಹೊರೆಯ ದೇಶಗಳಲ್ಲಿ ಇನ್ನೂ ಪೋಲಿಯೋ ವೈರಸ್ ಇರುವುದರಿಂದ ಮುಂಜಾಗ್ರತಾ ಕ್ರಮವಾಗಿ ಜೂನ್ 28 ರ ಭಾನುವಾರದಂದು ಜಿಲ್ಲೆಯಾದ್ಯಂತ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ" ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಜಿ. ಶ್ರೀನಿವಾಸ್ ಅವರು ತಿಳಿಸಿದರು.

ನಗರದ ಹೊರವಲಯದಲ್ಲಿರುವ ಡಿ.ಹೆಚ್.ಓ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಪತ್ರಿಕಾಘೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡುತ್ತಿದ್ದರು

ಭಾರತ ದೇಶವು 2014 ರಲ್ಲೇ ಪೋಲಿಯೋ ಮುಕ್ತ ರಾಷ್ಟ್ರ ಎಂದು ವಿಶ್ವ ಆರೋಗ್ಯ ಸಂಸ್ಥೆಯಿಂದ ಪ್ರಮಾಣಪತ್ರ ಪಡೆದಿದೆ. ಆದಾಗ್ಯೂ, ನೆರೆದೇಶಗಳಾದ ಪಾಕಿಸ್ತಾನ, ಅಫ್ಘಾನಿಸ್ತಾನ ಹಾಗೂ ಕೆಲವು ಆಫ್ರಿಕನ್ ದೇಶಗಳು ಸೇರಿದಂತೆ ಸುಮಾರು 32 ರಾಷ್ಟ್ರಗಳಲ್ಲಿ ಪೋಲಿಯೋ ವೈರಸ್ ಇಂದಿಗೂ ಸಕ್ರಿಯವಾಗಿದೆ. ಅಲ್ಲಿಂದ ಬರುವ ಪ್ರವಾಸಿಗರಿಂದ ಅಥವಾ ವೈರಸ್‌ನ ರೂಪಾಂತರ ತಳಿಗಳಿಂದ ನಮ್ಮ ದೇಶದ ಮಕ್ಕಳಿಗೆ ಮತ್ತೆ ತೊಂದರೆಯಾಗಬಾರದು ಎಂಬ ಮುಂಜಾಗ್ರತೆಯಿಂದ ಈ ಮಾಸ್ ಕ್ಯಾಂಪೇನ್ ಹಮ್ಮಿಕೊಳ್ಳಲಾಗುತ್ತಿದೆ ಎಂದು ಡಾ. ಜಿ. ಶ್ರೀನಿವಾಸ್ ವಿವರಿಸಿದರು.

ಜಿಲ್ಲೆಯಲ್ಲಿ 0 ಯಿಂದ 5 ವರ್ಷದೊಳಗಿನ ಒಟ್ಟು 1,64,992 ಮಕ್ಕಳನ್ನು ಗುರುತಿಸಲಾಗಿದ್ದು, ಇವರೆಲ್ಲರಿಗೂ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದೆ.

ಜೂನ್ 28ರ ಪೋಲಿಯೋ ಭಾನುವಾರದಂದು ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಅಂಗನವಾಡಿಗಳು ಹಾಗೂ ಸರ್ಕಾರಿ ಆಸ್ಪತ್ರೆಗಳ ಪೋಲಿಯೋ ಬೂತ್‌ಗಳಲ್ಲಿ ಲಸಿಕೆ ನೀಡಲಾಗುವುದು. ಅಂದು ಲಸಿಕೆಯಿಂದ ವಂಚಿತರಾಗುವ ಮಕ್ಕಳಿಗಾಗಿ ಸೋಮವಾರ ಮತ್ತು ಮಂಗಳವಾರ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ ಲಸಿಕೆ ಹಾಕಲಿದ್ದಾರೆ.

ಅಭಿಯಾನಕ್ಕಾಗಿ 3,114 ವ್ಯಾಕ್ಸಿನೇಟರ್ಸ್ ಹಾಗೂ ಮೇಲ್ವಿಚಾರಣೆಗಾಗಿ 210 ಸೂಪರ್‌ವೈಸರ್‌ಗಳನ್ನು ನಿಯೋಜಿಸಲಾಗಿದೆ. ಲಸಿಕೆಗಳ ಸಾಗಣೆಗೆ ಪಂಚಾಯತ್ ರಾಜ್ ಇಲಾಖೆಯಿಂದ 233 ಆಟೋಗಳು ಮತ್ತು ಸರ್ಕಾರದ 73 ವಾಹನಗಳನ್ನು ಬಳಸಿಕೊಳ್ಳಲಾಗುತ್ತಿದೆ. ಜಿಲ್ಲೆಯಲ್ಲಿ ಒಟ್ಟು 10,399 ಕ್ಕೂ ಹೆಚ್ಚು ಲಸಿಕಾ ವಯಲ್ಸ್ ಗಳನ್ನು ಸಿದ್ಧವಾಗಿಟ್ಟುಕೊಳ್ಳಲಾಗಿದೆ.

ಜಿಲ್ಲೆಯು ಆಂಧ್ರಪ್ರದೇಶ ಮತ್ತು ತಮಿಳುನಾಡು ಗಡಿಗೆ ಹೊಂದಿಕೊಂಡಿರುವುದರಿಂದ ಗಡಿ ಭಾಗದ ಸುಮಾರು 30 ರಿಂದ 35 ಹಳ್ಳಿಗಳ ಮೇಲೆ ವಿಶೇಷ ನಿಗಾ ವಹಿಸಲಾಗಿದೆ. ಇದಲ್ಲದೆ, ಇಟ್ಟಿಗೆ ಭಟ್ಟಿ, ಕೋಳಿ ಫಾರಂ ಹಾಗೂ ಕೊಳಗೇರಿ ಪ್ರದೇಶಗಳಲ್ಲಿ ವಾಸಿಸುವ ವಲಸೆ ಕಾರ್ಮಿಕರ ಮಕ್ಕಳನ್ನು ತಲುಪಲು 1,720 ಹೈ ರಿಸ್ಕ್ ವಲಸೆ ಪ್ರದೇಶಗಳನ್ನು ಗುರುತಿಸಿ ನಕ್ಷೆ ಮಾಡಲಾಗಿದೆ. ಈ ಪ್ರದೇಶಗಳಲ್ಲೇ ಜಿಲ್ಲೆಯ ಸುಮಾರು 87,764 ರಷ್ಟು (ಅಂದರೆ ಸುಮಾರು ಶೇ. 50 ರಷ್ಟು) ಮಕ್ಕಳು ಇರುವುದರಿಂದ ಇಲಾಖೆಯು ಇಲ್ಲಿ ಹೆಚ್ಚಿನ ಗಮನ ಹರಿಸಿದೆ.

ಈ ಪೋಲಿಯೋ ಲಸಿಕೆ ಸಂಪೂರ್ಣ ಉಚಿತವಾಗಿದ್ದು, ಲಸಿಕೆ ಹಾಕಿಸಲು ಯಾವುದೇ ರೀತಿಯ ಗುರುತಿನ ಚೀಟಿ ಅಥವಾ ದಾಖಲೆಗಳ ಅಗತ್ಯವಿರುವುದಿಲ್ಲ. ಮಗುವಿಗೆ ಜೂನ್ 27 ರ ಸಂಜೆಯೇ ಪೋಲಿಯೋ ಡ್ರಾಪ್ಸ್ ಹಾಕಿಸಿದ್ದರೂ ಸಹ, ಜೂನ್ 28 ರ ಭಾನುವಾರ ಮತ್ತೊಮ್ಮೆ ಲಸಿಕೆ ಹಾಕಿಸುವುದು ಅತ್ಯಗತ್ಯ ಎಂದು ಜಿ. ಶ್ರೀನಿವಾಸ್ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡರು.

ಪತ್ರಿಕಾಗೋಷ್ಠಿಯಲ್ಲಿ ಆರ್.ಸಿ.ಹೆಚ್ ಅಧಿಕಾರಿ ಡಾ. ಚಾರ್ಮಿಣಿ, ತಾಲೂಕು ಆರೋಗ್ಯಾಧಿಕಾರಿ ಡಾ. ಹೆಚ್.ವಿ. ನಾರಾಯಣಸ್ವಾಮಿ ಸೇರಿದಂತೆ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# 'ಯಾವುದೇ ರೀತಿಯ ನಿರ್ಲಕ್ಷ್ಯವನ್ನು ಸಹಿಸುವುದಿಲ್ಲ'

ಕೋಲಾರ

ಜಿಲ್ಲೆಯಲ್ಲಿ ಸರ್ಕಾರದ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳು ಹಾಗೂ ಜನಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯವನ್ನು ಸಹಿಸುವುದಿಲ್ಲ ಎಂದು ಕೋಲಾರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಡಾ. ಪ್ರವೀಣ್ ಪಿ. ಬಾಗೇವಾಡಿ ಅವರು ಬ್ಯಾಂಕ್ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಸಮಾಲೋಚನಾ ಸಮಿತಿ (ಡಿಸಿಸಿ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಮಹತ್ವಾಕಾಂಕ್ಷಿ ವಿಮಾ ಯೋಜನೆಗಳ ಅನುಷ್ಠಾನದಲ್ಲಿ ಕೋಲಾರ ಜಿಲ್ಲೆಯು ರಾಜ್ಯದಲ್ಲೇ ಕೊನೆಯ ಸ್ಥಾನದಲ್ಲಿದ್ದು, ಸಿಇಒ ಅವರು ಬ್ಯಾಂಕರ್‌ಗಳ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ ಅಡಿ ಅರ್ಹರಿರುವ ಒಟ್ಟು 8 ಲಕ್ಷ ಖಾತೆಗಳ ಪೈಕಿ ಕೇವಲ 2,03,000 ಖಾತೆಗಳನ್ನು ಮಾತ್ರ ಇದುವರೆಗೆ ವಿಮೆಯ ವ್ಯಾಪ್ತಿಗೆ ತರಲಾಗಿದೆ. ಅಂದರೆ ಜಿಲ್ಲೆಯ ಒಟ್ಟು ಸಾಧನೆ ಕೇವಲ 25% ಮಾತ್ರ ಆಗಿದ್ದು, ಇನ್ನುಳಿದ 75% ಪ್ರಗತಿ ಬಾಕಿ ಉಳಿದಿದೆ.

"ಪ್ರತಿ ಸಭೆಯಲ್ಲೂ ಪ್ರಗತಿ ಪರಿಶೀಲನೆ ನಡೆಸುತ್ತಿದ್ದರೂ ಬ್ಯಾಂಕ್‌ಗಳಿಂದ ನಿರೀಕ್ಷಿತ ಸ್ಪಂದನೆ ಸಿಗುತ್ತಿಲ್ಲ" ಎಂದು ತರಾಟೆಗೆ ತೆಗೆದುಕೊಂಡ ಸಿಇಒ ಅವರು, ಇನ್ಮುಂದೆ ಎಲ್ಲಾ ಬ್ಯಾಂಕ್‌ಗಳು ತಮ್ಮ ವ್ಯಾಪ್ತಿಯ ಪ್ರಗತಿಯ ವರದಿಯನ್ನು ಪ್ರತಿ ವಾರವೂ ಕಡ್ಡಾಯವಾಗಿ ಸಲ್ಲಿಸಬೇಕು ಎಂದು ಆದೇಶಿಸಿದರು. ಕೆನರಾ ಬ್ಯಾಂಕ್ ಪಿಎಂಜೆಜೆಬಿವೈ ನಲ್ಲಿ 13% ಸಾಧನೆ ಮಾಡಿದ್ದು, ತೀರಾ ಹಿಂದುಳಿದಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿರುವ ಬ್ಯಾಂಕ್ ಬಿಸಿನೆಸ್ ಕರೆಸ್ಪಾಂಡೆಂಟ್ಸ್ ಹಾಗೂ ಎನ್‌ಆರ್‌ಎಲ್‌ಎಂ




ಸ್ವಸಹಾಯ ಗುಂಪುಗಳ ಸಹಕಾರದೊಂದಿಗೆ ಪ್ರತಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ವಿಶೇಷ ಜಾಗೃತಿ ಕ್ಯಾಂಪ್‌ಗಳನ್ನು ಆಯೋಜಿಸಿ, ಈ ವಿಮಾ ಯೋಜನೆಗಳ ನೊಂದಣಿ ಪ್ರಮಾಣವನ್ನು ಹೆಚ್ಚಿಸಲು ಸೂಚಿಸಲಾಯಿತು.

ಕೋಲಾರ ಜಿಲ್ಲೆಯಲ್ಲಿ ಪಿಎಂ ಸ್ವನಿಧಿ (ಬೀದಿ ಬದಿ ವ್ಯಾಪಾರಿಗಳ ಸಾಲ) ಯೋಜನೆಯಡಿ ಒಟ್ಟು 2,241 ಫಲಾನುಭವಿಗಳು ಅರ್ಜಿ ಸಲ್ಲಿಸಿದ್ದರು. ಈ ಪೈಕಿ 2,139 ಕೋಟಿ ರೂ. ಮೊತ್ತದ ಅರ್ಜಿಗಳನ್ನು ಪರಿಶೀಲಿಸಲಾಗಿದ್ದು, 1,202 ಖಾತೆಗಳನ್ನು ಈಗಾಗಲೇ ಕ್ಲೋಸ್ ಮಾಡಲಾಗಿದೆ. ಸದ್ಯ 1,259 ಅರ್ಜಿಗಳ ಸಾಲ ಮಂಜೂರಾತಿ ಪ್ರಕ್ರಿಯೆ ಪೂರ್ಣಗೊಂಡಿದ್ದು, ಇವುಗಳ ವಿತರಣೆ ಬಾಕಿ ಇದೆ. ಈ ವಿತರಣೆಯನ್ನು ತಕ್ಷಣವೇ ಪೂರ್ಣಗೊಳಿಸಲು ಬ್ಯಾಂಕ್‌ಗಳಿಗೆ ಸೂಚಿಸಲಾಯಿತು.

ಜಿಲ್ಲೆಯಲ್ಲಿ ಪಿಎಂ-ಎಫ್‌ಎಂಇ ಯೋಜನೆಯಡಿ ಒಟ್ಟು 220 ಉದ್ಯಮಿಗಳು ಅರ್ಜಿ ಸಲ್ಲಿಸಿದ್ದರು. ಇವುಗಳಲ್ಲಿ ಬ್ಯಾಂಕ್‌ಗಳು 84 ಜನರಿಗೆ (ಅಂದರೆ 84%) ಸಾಲ ಮಂಜೂರು ಮಾಡಿವೆ. 18 ಅರ್ಜಿಗಳು ಸದ್ಯ ಪರಿಶೀಲನೆಯಲ್ಲಿ ಬಾಕಿ ಇವೆ.

ಆದರೆ, ಒಟ್ಟು ಸಲ್ಲಿಕೆಯಾದ ಅರ್ಜಿಗಳಲ್ಲಿ 73 ಅರ್ಜಿಗಳನ್ನು ಬ್ಯಾಂಕ್‌ಗಳು ತಿರಸ್ಕರಿಸಿರುವುದು ಸಿಇಒ ಅವರ ಅಸಮಾಧಾನಕ್ಕೆ ಕಾರಣವಾಯಿತು. ಸಿಬಿಲ್ ಸ್ಕೋರ್ ನೆಪವೊಡ್ಡಿ ಅರ್ಜಿಗಳನ್ನು ತಿರಸ್ಕರಿಸುತ್ತಿರುವ ಕೆನರಾ ಬ್ಯಾಂಕ್ (11 ಅರ್ಜಿ ತಿರಸ್ಕಾರ, 7 ಬಾಕಿ) ಮತ್ತು ಎಸ್‌ಬಿಐ (11 ಅರ್ಜಿಗಳಲ್ಲಿ 10 ತಿರಸ್ಕಾರ) ಬ್ಯಾಂಕ್‌ಗಳ ಧೋರಣೆಯನ್ನು ಖಂಡಿಸಿದ ಸಿಇಒ ಅವರು, ನಿಯಮಾನುಸಾರ ಸಾಲ ಸೌಲಭ್ಯ ಒದಗಿಸಲು ತಿಳಿಸಿದರು.

ಜಿಲ್ಲೆಯಲ್ಲಿ ಸ್ವಸಹಾಯ ಗುಂಪುಗಳ ವಸೂಲಾತಿ ಪ್ರಗತಿಯನ್ನು ಪರಿಶೀಲಿಸಲಾಯಿತು. ಜಿಲ್ಲೆಯ ಒಟ್ಟು 325 ಗುಂಪುಗಳ ಖಾತೆಗಳು ಎನ್‌ಪಿಎ ಆಗಿದ್ದು, ಒಟ್ಟು 12.69 ಕೋಟಿ ರೂ. ಬಾಕಿ ಉಳಿದಿದೆ.

ಈ ಪೈಕಿ ಕೇವಲ ಎಸ್‌ಎಚ್‌ಜಿಗಳ ನವೀಕರಣ ಮತ್ತು ರಿವಾಲ್ವಿಂಗ್ ಫಂಡ್ ಇತ್ಯಾದಿಗಳಿಗೆ ಸಂಬಂಧಿಸಿದಂತೆ 1,100 ಖಾತೆಗಳಲ್ಲಿ ಸುಮಾರು 32 ಕೋಟಿ ರೂ. ಎನ್‌ಪಿಎ ವ್ಯಾಪ್ತಿಯಲ್ಲಿ ತೋರಿಸುತ್ತಿರುವುದನ್ನು ಬ್ಯಾಂಕರ್‌ಗಳು ಗಮನಕ್ಕೆ ತಂದರು. ಇವುಗಳ ಸಮರ್ಪಕ ನಿರ್ವಹಣೆಗೆ ಸಿಇಒ ಸೂಚಿಸಿದರು.

ಆರ್‌ಸೆಟಿ ನಿರ್ದೇಶಕರು ಮಾಹಿತಿ ನೀಡಿ, ಜಿಲ್ಲೆಯಲ್ಲಿ ಏಪ್ರಿಲ್ 1 ರಿಂದ ಇದುವರೆಗೆ 7 ಉದ್ಯಮಶೀಲತೆ ತರಬೇತಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸಲಾಗಿದ್ದು, ಒಟ್ಟು 230 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗಿದೆ ಎಂದು ತಿಳಿಸಿದರು.

ಸದ್ಯ ಮಹಿಳೆಯರಿಗಾಗಿ ಟೈಲರಿಂಗ್ ಮತ್ತು ಅಣಬೆ ಬೇಸಾಯದ ಎರಡು ಹೊಸ ಬ್ಯಾಚ್‌ಗಳು ಆರಂಭವಾಗಿವೆ. ಪಿಎಂಇಜಿಪಿ ಯೋಜನೆಯಡಿ ಸಾಲ ಪಡೆಯುವ ಅಭ್ಯರ್ಥಿಗಳಿಗೆ ಕಡ್ಡಾಯವಾಗಿ ಇಲ್ಲಿ ತರಬೇತಿ ನೀಡಲಾಗುತ್ತಿದ್ದು, ಬ್ಯಾಂಕ್‌ಗಳು ಇಂತಹ ಅಭ್ಯರ್ಥಿಗಳನ್ನು ಆರ್‌ಸೆಟಿಗೆ ಕಳುಹಿಸಿಕೊಡಲು ಕೋರಲಾಯಿತು.

ಸಿಎಂ ಸ್ವಯಂ ಉದ್ಯೋಗ ಯೋಜನೆಯಡಿ ಜಿಲ್ಲೆಗೆ ಒಟ್ಟು 107 ಗುರಿ ನೀಡಲಾಗಿದ್ದು, ಬ್ಯಾಂಕ್‌ಗಳಿಂದ 90 ಕ್ಲೈಮ್‌ಗಳನ್ನು ಸಬ್ಸಿಡಿಗಾಗಿ ಸ್ವೀಕರಿಸಲಾಗಿದೆ. ಇದರಲ್ಲಿ 25 ಕ್ಲೈಮ್‌ಗಳನ್ನು ಈಗಾಗಲೇ ಬ್ಯಾಂಕ್‌ಗಳಿಗೆ ಸಬ್ಮಿಟ್ ಮಾಡಲಾಗಿದ್ದರೂ, ಎಸ್‌ಬಿಐ ಬಂಗಾರಪೇಟೆ ಶಾಖೆಯು ಸಿಬಿಲ್ ನೆಪವೊಡ್ಡಿ ಸಾಲ ನೀಡದೆ ಹಣವನ್ನು ವಾಪಸ್ ಕಳುಹಿಸುತ್ತಿರುವುದನ್ನು ನಿಗಮದ ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು. ಈ ತಾರತಮ್ಯವನ್ನು ತಕ್ಷಣ ಸರಿಪಡಿಸಲು ಸಿಇಒ ನಿರ್ದೇಶಿಸಿದರು.

"ಜಿಲ್ಲೆಯ ಒಟ್ಟಾರೆ ಅಭಿವೃದ್ಧಿ ಬ್ಯಾಂಕುಗಳು ನೀಡುವ ಸಹಕಾರದ ಮೇಲೆ ನಿಂತಿದೆ. ಕೆನರಾ ಬ್ಯಾಂಕ್, ಎಸ್‌ಬಿಐ, ಯೂನಿಯನ್ ಬ್ಯಾಂಕ್ ಹಾಗೂ ಬ್ಯಾಂಕ್ ಆಫ್ ಬರೋಡಾ ಜಿಲ್ಲೆಯ ಪ್ರಮುಖ ನಾಲ್ಕು ಬ್ಯಾಂಕ್‌ಗಳಾಗಿದ್ದು, ಇವು ಸರ್ಕಾರದ ಯೋಜನೆಗಳನ್ನು ತಳಮಟ್ಟದ ಜನರಿಗೆ ತಲುಪಿಸಲು ಕಟ್ಟುನಿಟ್ಟಾಗಿ ಕೆಲಸ ಮಾಡಬೇಕು. ಮುಂದಿನ ತ್ರೈಮಾಸಿಕ ಸಭೆಯ ವೇಳೆಗೆ ಜಿಲ್ಲೆಯ ಎಲ್ಲಾ ಸಾಮಾಜಿಕ ಭದ್ರತಾ ಯೋಜನೆಗಳ ಪ್ರಗತಿ ಪ್ರಮಾಣವು ಗಣನೀಯವಾಗಿ ಉತ್ತಮಗೊಳ್ಳಬೇಕು" ಎಂದು ಡಾ. ಪ್ರವೀಣ್ ಪಿ. ಬಾಗೇವಾಡಿ ಅವರು ಆದೇಶ ನೀಡಿದರು.

# 75 ಸಾವಿರಕ್ಕೂ ಹೆಚ್ಚು ಮಕ್ಕಳಿಗೆ ಲಸಿಕೆ ಗುರಿ

ರಾಮನಗರ

2026ರ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನವನ್ನು ದೇಶಾದ್ಯಂತ, ಇದೇ ಜೂನ್ 28 ರಿಂದ ಜುಲೈ 01ರ ವರೆಗೆ ಹಮ್ಮಿಕೊಂಡಿರುವ ಹಿನ್ನೆಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಸಕಲ ಸಿದ್ದತೆ ಕೈಗೊಳ್ಳಲಾಗಿದ್ದು, ಜಿಲ್ಲೆಯ 75,581 ಮಕ್ಕಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ತಿಳಿಸಿದರು.

ಅವರು ಜೂ. 24ರ ಬುಧವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಲಸಿಕಾ ಕಾರ್ಯಪಡೆ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕಾಗಿ ಒಟ್ಟು 548 ಬೂತ್ ಮಟ್ಟದ ತಂಡಗಳನ್ನು ರಚಿಸಿಕೊಳ್ಳಲಾಗಿದೆ. ಕಳೆದ ಬಾರಿ ನಡೆಸಿದ ಲಸಿಕಾ ಕೇಂದ್ರಗಳಲ್ಲಿಯೇ ಈ ಬಾರಿಯೂ ಸಹ ಎರಡು ಹನಿಗಳ ಪೋಲಿಯೋ ಲಸಿಕೆಯನ್ನು ಹಾಕಲಾಗುವುದು. ಈ ಮಹತ್ವಾಕಾಂಕ್ಷಿ ಕಾರ್ಯಕ್ರಮದ ಯಶಸ್ವಿ ಮೇಲ್ವಿಚಾರಣೆಗಾಗಿ 110 ಮೇಲ್ವಿಚಾರಕರನ್ನು ನೇಮಕ ಮಾಡಲಾಗಿದೆ. 2,400 ಲಸಿಕಾದಾರರು ಕಾರ್ಯನಿರ್ವಹಿಸಲಿದ್ದಾರೆ ಎಂದರು.

ಪ್ರತೀ ಮಗುವಿನ ಸುರಕ್ಷಿತ ಭವಿಷ್ಯಕ್ಕಾಗಿ ಜಿಲ್ಲೆಯಲ್ಲಿ 0–5 ವರ್ಷದೊಳಗಿನ ಒಟ್ಟು 75,581 ಮಕ್ಕಳನ್ನು ಲಸಿಕೆ ಹಾಕಲು ಗುರುತಿಸಲಾಗಿದೆ. ಈ ಹಿಂದೆ ಮಕ್ಕಳಿಗೆ ಎಷ್ಟೇ ಬಾರಿ ಪೋಲಿಯೋ ಹನಿ ಹಾಕಿಸಿದ್ದರೂ ಸಹ, ಜೂನ್ 28 ರಿಂದ ಜುಲೈ 01 ರವರೆಗೆ ನಡೆಯುವ ಅಭಿಯಾನದಲ್ಲಿ ಪೋಷಕರು ಕಡ್ಡಾಯವಾಗಿ ಮತ್ತೊಮ್ಮೆ ಪೋಲಿಯೋ ಲಸಿಕೆ ಹಾಕಿಸಬೇಕು ಎಂದು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಿರಂಜನ್, ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಮಂಜುನಾಥ್, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ. ರಾಜು, ಜಿಲ್ಲಾ ರೋಗವಾಹಕ ಆಶ್ರಿತ ರೋಗಳ ನಿಯಂತ್ರಣಾಧಿಕಾರಿ ಡಾ. ಪದ್ಮಾವತಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಕಿರಣ್ ಶಂಕರ್, ಎಲ್ಲಾ ತಾಲ್ಲೂಕು ಆರೋಗ್ಯಧಿಕಾರಿಗಳು, ಇತರೆ ಇಲಾಖೆಯ ಅಧಿಕಾರಿಗಳು ಹಾಗೂ ಆರೋಗ್ಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ವಿದ್ಯುತ್ ವ್ಯತ್ಯಯ

ರಾಮನಗರ

66/11 ಕೆವಿ ಚಿಕ್ಕಗಂಗವಾಡಿ ಮತ್ತು 66/11ಕೆವಿ ಶಿವನಹಳ್ಳಿ ವಿದ್ಯುತ್ ಉಪಕೇಂದ್ರಗಳ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಅದಾನಿ ಸೋಲಾರ್, ಗೊಲ್ಲರದೊಡ್ಡಿ, ಬಲ್ಲೇಲಿಂಗೇಗೌಡನದೊಡ್ಡಿ, ಚಿಕ್ಕಗಂಗವಾಡಿ, ದೊಡ್ಡಗಂಗವಾಡಿ, ಅಕ್ಕೂರು, ತಾಳವಾಡಿ, ವಿರುಪಸಂದ್ರ, ಬಿ.ಎಸ್. ದೊಡ್ಡಿ, ವಿಭೂತಿಕೆರೆ, ಅಂಜನಾಪುರ, ಕುಂಬಾಪುರ ಕಾಲೋನಿ, ದೇವರದೊಡ್ಡಿ, ಲಕ್ಕಪ್ಪನಹಳ್ಳಿ, ಚಕ್ಕೇರೆದೊಡ್ಡಿ, ಹೊಸೂರುದೊಡ್ಡಿ, ಹೊಸದೊಡ್ಡಿ, ಬ್ಯಾಲಕುಳದೊಡ್ಡಿ, ತಿಮ್ಮಯ್ಯನದೊಡ್ಡಿ, ವಡ್ಡರದೊಡ್ಡಿ, ಶಿವನಹಳ್ಳಿ, ಅಂಕನಹಳ್ಳಿ, ಬನ್ನಿಕುಪ್ಪೆ, ಕಾಡನಕುಪ್ಪೆ, ಲಕ್ಕೋಜನಹಳ್ಳಿ, ದೊಡ್ಡನಹಳ್ಳಿ, ಕಾವೇರಿದೊಡ್ಡಿ, ನಂಜಾಪುರ ಹಾಗೂ ಸುತ್ತಮುತ್ತಲಿನ ಪ್ರದೇಶಗಳು ವ್ಯಾಪ್ತಿಯಲ್ಲಿ ಜೂ. 25ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾಹನಗಳ ಕಳವು ಮಾಡಿದ್ದ ಆರೋಪಿ ಬಂಧನ, ವಾಹನಗಳ ವಶ

ವಿಜಯಪುರ

20 ಲಕ್ಷ ಮೌಲ್ಯದ 42 ದ್ವಿಚಕ್ರ ವಾಹನಗಳನ್ನು ಕಳವು ಮಾಡಿದ್ದ ಆರೋಪಿಯನ್ನು, ದೂರು ದಾಖಲಾದ ಮಾರನೇ ದಿನವೇ ಬಂಧಿಸುವ ಮೂಲಕ ವಿಜಯಪುರ ಪೊಲೀಸರು ಉತ್ತಮ ಸಾಧನೆ ಮಾಡಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ಚಂದ್ರಕಾಂತ್ ಅವರು ಪ್ರಶಂಸೆ ವ್ಯಕ್ತಪಡಿಸಿದರು.

ಪಟ್ಟಣದ ಪೊಲೀಸ್ ಠಾಣೆಯ ಆವರಣದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಮುನಿಕೃಷ್ಣ ಎಂಬುವವರು ತನ್ನ ದ್ವಿಚಕ್ರ ವಾಹನ ಕಳುವಾಗಿರುವ ಕುರಿತು, ಜೂ.18 ರಂದು ವಿಜಯಪುರ ಪೊಲೀಸ್ ಠಾಣೆಗೆ ದೂರು ನೀಡುತ್ತಾರೆ. ದೂರನ್ನು ಆಧರಿಸಿ, ಕಳ್ಳರಿಗಾಗಿ ಬೆನ್ನತ್ತಿದ ಪೊಲೀಸರು, ಜೂ.19 ರಂದು ಆರೋಪಿ, ವಿಜಯಪುರ ಟೌನ್ ನ ನಿವಾಸಿ ಖಲೀಲ್ ಅಹ್ಮದ್ ಎಂಬಾತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ, ದೇವನಹಳ್ಳಿ, ನಂದಗುಡಿ, ಹೊಸಕೋಟೆ, ಸೂಲಿಬೆಲೆ, ಚಿಕ್ಕಬಳ್ಳಾಪುರ ಜಿಲ್ಲೆ ನಂದಿ, ಶಿಡ್ಲಘಟ್ಟ, ಹೆಚ್.ಕ್ರಾಸ್, ಮತ್ತು ಕೋಲಾರ ಜಿಲ್ಲೆಯ ಮಾಸ್ತಿ, ಮಾಲೂರು, ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿಗಳಲ್ಲಿ ಸುಮಾರು 20 ಲಕ್ಷ ರೂಗಳ ಬೆಲೆ ಬಾಳುವ 42 ದ್ವಿಚಕ್ರ ವಾಹನಗಳನ್ನು ಕಳವು ಮಾಡಿರುವುದಾಗಿ ಒಪ್ಪಿಕೊಂಡಿದ್ದು,

ಕಳುವಾಗಿರುವ ಎಲ್ಲಾ ವಾಹನಗಳನ್ನು ವಶಕ್ಕೆ ಪಡೆದುಕೊಂಡು, ದೂರು ದಾಖಲಿಸಿದ್ದ ವಾಹನಗಳ ಮಾಲೀಕರಿಗೆ ಹಸ್ತಾಂತರಿಸಲಾಗಿದೆ. ಜನರಿಗೆ ಜಾಗೃತಿ ಮೂಡಿಸುವಂತಹ ಕೆಲಸವನ್ನೂ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು.

ಪೆಟ್ರೋಲ್ ಬಂಕ್ ನಲ್ಲಿ ಕೆಲಸ ಮಾಡುತ್ತಿದ್ದ ಆರೋಪಿ, ಜೀವನ ನಡೆಸುವುದು ಕಷ್ಟವೆಂದು ತಿಳಿದು, ವಾಹನಗಳನ್ನು ಕಳ್ಳತನ ಮಾಡಿ, ಸುಲಭವಾಗಿ ಜೀವನ ಸಾಗಿಸಲು ತೊಡಗಿಸಿಕೊಂಡಿದ್ದ, ಸುಮಾರು 25 ಕೀಗಳನ್ನು ಇಟ್ಟುಕೊಂಡಿದ್ದಾನೆ. ಪ್ರಕರಣ ದಾಖಲಾಗಿದೆ. ಕೆಲವರು ದುಷ್ಪೇರಣೆ ಮಾಡುತ್ತಿರುವ ಬಗ್ಗೆಯೂ ಮಾಹಿತಿಯಿದೆ. ಸ್ಪೆಂಡ್ಲರ್ ವಾಹನಗಳನ್ನೆ ಟಾರ್ಗೆಟ್ ಮಾಡಿದ್ದರು. ಅವರ ಮೇಲೂ ಕ್ರಮ ಕೈಗೊಳ್ಳಲಾಗುತ್ತದೆ. ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ಚಾರ್ಜ್ ಶೀಟ್ ಸಲ್ಲಿಸಲಾಗುತ್ತದೆ.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಪೊಲಿಸ್ ವರಿಷ್ಟಾಧಿಕಾರಿ ಎಂ.ವಿ.ಚಂದ್ರಕಾಂತ್ ಅವರ ಮಾರ್ಗದರ್ಶನದಲ್ಲಿ, ಅಪರ ಪೊಲೀಸ್ ಅಧೀಕ್ಷಕ ವೆಂಕಟೇಶ್ ಪ್ರಸನ್ನ. ಲಕ್ಷ್ಮಿನಾರಾಯಣ, ದೊಡ್ಡಬಳ್ಳಾಪುರ ಉಪವಿಭಾಗದ ಪೊಲೀಸ್ ಉಪಾಧೀಕ್ಷಕ ಎಸ್.ಪಾಂಡುರಂಗ, ಅವರ ಮಾರ್ಗದರ್ಶನದಲ್ಲಿ ವಿಜಯಪುರ ಪೊಲೀಸ್ ಠಾಣೆಯ ಪೊಲೀಸ್ ಇನ್ ಸ್ಪೆಕ್ಟರ್ ಲಕ್ಷ್ಮಿನಾರಾಯಣ ನೇತೃತ್ವದಲ್ಲಿ, ಪಿಎಸ್ಐ ಸುನೀಲ್ ಕುಮಾರ್. ಆರ್, ಪ್ರೊ.ಪಿಎಸ್ಐ ಶಿವಪ್ರಸಾದ್, ಎಎಸ್ಐ ಗಳಾದ ಚಂದ್ರಪ್ಪ, ನಾಗರಾಜ. ಎಂ.ಡಿ. ಮುಕ್ತಿಯಾರ್, ಮಧುಕುಮಾರ್ ಇದ್ದರು.



ಜಿಲ್ಲೆಯಲ್ಲಿ ಮುಂಬರುವ ಎಸ್ಐಆರ್ ಗಣತಿ ಕಾರ್ಯವನ್ನು ಅತ್ಯಂತ ನಿಖರವಾಗಿ ಮತ್ತು ಯಶಸ್ವಿಯಾಗಿ ಪೂರ್ಣಗೊಳಿಸುವ ನಿಟ್ಟಿನಲ್ಲಿ ಇಂದು ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಮಾನ್ಯ ಅಪರ ಜಿಲ್ಲಾಧಿಕಾರಿ ಎಸ್.ಎಂ.ಮಂಗಳ ಅವರು ಪೂರ್ವಭಾವಿ ಸಿದ್ಧತಾ ಕಾರ್ಯದಲ್ಲಿ ಭಾಗಿಯಾದರು. ಜಿಲ್ಲಾ ಮಟ್ಟದ ನಿಯೋಜಿತ ಅಧಿಕಾರಿಗಳ ಉಸ್ತುವಾರಿಯಲ್ಲಿ, ಪ್ರತಿಯೊಂದು ವಿಧಾನಸಭಾ ಕ್ಷೇತ್ರ ಹಾಗೂ ಹೋಬಳಿಗಳಿಗೆ ಅಗತ್ಯವಿರುವ ಗಣತಿ ನಮೂನೆಗಳನ್ನು ವರ್ಗೀಕರಿಸಿ, ಆಯಾ ಭಾಗದ ನಿಯೋಜಿತ ಅಧಿಕಾರಿಗಳಿಗೆ ವಿತರಿಸಲಾಯಿತು. ಗಣತಿ ಕಾರ್ಯವು ಯಾವುದೇ ಗೊಂದಲವಿಲ್ಲದೆ ಸುಗಮವಾಗಿ ನಡೆಯಲು ಈ ವ್ಯವಸ್ಥಿತ ವಿತರಣಾ ಪ್ರಕ್ರಿಯೆಯು ಸಹಕಾರಿಯಾಗಲಿದೆ ಎಂದು ಅಪರ ಜಿಲ್ಲಾಧಿಕಾರಿ ಎಸ್.ಎಂ.ಮಂಗಳ ತಿಳಿಸಿದ್ದಾರೆ.

# ‘ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣ ಪ್ರತಿಯೊಬ್ಬ ನಾಗರಿಕನ ಕರ್ತವ್ಯ’

ಕೊರಟಗೆರೆ




ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣವು ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ಕೊರಟಗೆರೆ ಪೊಲೀಸ್ ಠಾಣೆಯ ಪಿಎಸ್ಐ ತೀರ್ಥೇಶ್ ಹೇಳಿದರು.

ಪಟ್ಟಣದ ಸರ್ಕಾರಿ ಕಿರಿಯ ಕಾಲೇಜಿನಲ್ಲಿ ಗುರುವಾರ ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ಅಂತರರಾಷ್ಟ್ರೀಯ ದಿನಾಚರಣೆ ಅಂಗವಾಗಿ ಪೊಲೀಸ್ ಇಲಾಖೆ ಆಯೋಜಿಸಿದ್ದ ಜಾಗೃತಿ ಅಭಿಯಾನ ಹಾಗೂ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಯುವಜನತೆಯನ್ನು ಗುರಿಯಾಗಿಸಿಕೊಂಡು ಕೆಲವು ದುಷ್ಟ ಶಕ್ತಿಗಳು ವಿವಿಧ ರೀತಿಯ ಮಾದಕ ವಸ್ತುಗಳನ್ನು ತಯಾರಿಸಿ ಹಾಗೂ ಮಾರಾಟ ಮಾಡುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ.

ಮಾದಕ ವಸ್ತುಗಳ ಸಾಗಣೆ, ಸಂಗ್ರಹಣೆ ಮತ್ತು ಗಾಂಜಾ ಬೆಳೆಯುವಂತಹ ಅಕ್ರಮ ಚಟುವಟಿಕೆಗಳನ್ನು ಪೊಲೀಸ್ ಇಲಾಖೆ ಗಂಭೀರವಾಗಿ ಪರಿಗಣಿಸಿದ್ದು, ಇಂತಹ ಕೃತ್ಯಗಳ ಬಗ್ಗೆ ಮಾಹಿತಿ ದೊರೆತರೆ ತಕ್ಷಣ ಪೊಲೀಸರಿಗೆ ತಿಳಿಸಬೇಕು ಎಂದು ಅವರು ಮನವಿ ಮಾಡಿದರು.

ಡ್ರಗ್ಸ್ ವಿರುದ್ಧದ ಹೋರಾಟದಲ್ಲಿ ಸಮುದಾಯದ ಪಾತ್ರವೂ ಮಹತ್ವದ್ದಾಗಿದೆ. ಪೋಷಕರು ತಮ್ಮ ಮಕ್ಕಳ ನಡವಳಿಕೆಯ ಮೇಲೆ ನಿಗಾ ವಹಿಸುವುದರ ಜೊತೆಗೆ ಅವರೊಂದಿಗೆ ಉತ್ತಮ ಸಂವಹನ ಬೆಳೆಸಬೇಕು. ಶಾಲಾ–ಕಾಲೇಜುಗಳು ಹಾಗೂ ಸಮಾಜದ ವಿವಿಧ ಸಂಘಟನೆಗಳು ದುಶ್ಚಟಗಳ ವಿರುದ್ಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಯುವಜನರಲ್ಲಿ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಜಾಗೃತಿ ಜಾಥಾದಲ್ಲಿ ಸರ್ಕಾರಿ ಕಿರಿಯ ಕಾಲೇಜಿನ ಪ್ರಾಂಶುಪಾಲರು, ಶಿಕ್ಷಕರು, ಪೊಲೀಸ್ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ಮಾದಕ ವ್ಯಸನದ ದುಷ್ಪರಿಣಾಮಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಮಾದಕ ವಸ್ತುಗಳ ವಿರುದ್ಧದ ಸಮರದಲ್ಲಿ ಸಮಾಜದ ಎಲ್ಲ ವರ್ಗಗಳ ಸಹಕಾರ ಅಗತ್ಯವಾಗಿದ್ದು, ಯುವಜನತೆಯನ್ನು ವ್ಯಸನದಿಂದ ದೂರವಿಡುವ ಮೂಲಕ ಆರೋಗ್ಯವಂತ ಹಾಗೂ ಸುರಕ್ಷಿತ ಸಮಾಜ ನಿರ್ಮಾಣ ಸಾಧ್ಯ ಎಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

# ಕೆರೆ ಅಂಗಳದಲ್ಲಿ ಗಿಡ ನೆಡುವ ಮೂಲಕ ಪರಿಸರ ಸಂರಕ್ಷಣೆಗೆ ಕರೆ




ಮಧುಗಿರಿ

ಪರಿಸರ ಸಂರಕ್ಷಣೆ, ಜಲಮೂಲಗಳ ಉಳಿವು ಹಾಗೂ ಹಸಿರು ವಾತಾವರಣ ನಿರ್ಮಾಣಕ್ಕೆ ಗ್ರಾಮಸ್ಥರು ಹೆಚ್ಚಿನ ಆದ್ಯತೆ ನೀಡಬೇಕು ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತುಮಕೂರು–2 ಜಿಲ್ಲಾ ನಿರ್ದೇಶಕ ಪ್ರವೀಣ್ ಕುಮಾರ್ ಹೇಳಿದರು.

ತಾಲೂಕಿನ ಬಿಜವರ ವಲಯದ ಭಕ್ತರಹಳ್ಳಿ ಕಾರ್ಯಕ್ಷೇತ್ರದ ಮರುವೇಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವೆಂಕಟಪುರ ಗ್ರಾಮದ ಸುತ್ತುಕಟ್ಟೆ ಕೆರೆ ಅಂಗಳದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಆಯೋಜಿಸಿದ್ದ ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ಕಳೆದ ನಾಲ್ಕು ದಶಕಗಳಿಂದ ಗ್ರಾಮೀಣಾಭಿವೃದ್ಧಿ, ಪರಿಸರ ಸಂರಕ್ಷಣೆ ಹಾಗೂ ಸಾಮಾಜಿಕ ಜಾಗೃತಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲಾಗುತ್ತಿದೆ. "ಹಳ್ಳಿಗಳ ಏಳಿಗೆಯೇ ದೇಶದ ಏಳಿಗೆ" ಎಂಬ ಮಹಾತ್ಮ ಗಾಂಧೀಜಿಯವರ ಕನಸನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಗ್ರಾಮಗಳಿಗೆ ಅಗತ್ಯವಿರುವ ವಿವಿಧ ಯೋಜನೆಗಳನ್ನು ತಲುಪಿಸಲಾಗುತ್ತಿದೆ ಎಂದು ಹೇಳಿದರು.

"ಊರಿಗೊಂದು ಕೆರೆ, ಊರಿಗೊಂದು ವನ" ಎಂಬ ಪರಿಕಲ್ಪನೆ ನಮ್ಮ ಪೂರ್ವಜರಿಂದ ಬಂದ ಅಮೂಲ್ಯ ಪರಂಪರೆಯಾಗಿದ್ದು, ಕೆರೆಗಳು, ಮರಗಿಡಗಳು ಹಾಗೂ ಪ್ರಕೃತಿ ಸಂಪತ್ತನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಅವುಗಳನ್ನು ಮುಂದಿನ ಪೀಳಿಗೆಗೆ ಸುರಕ್ಷಿತವಾಗಿ ಹಸ್ತಾಂತರಿಸುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ ಎಂದು ತಿಳಿಸಿದರು.

ಯೋಜನಾಧಿಕಾರಿ ಸಂತೋಷ್ ಕುಮಾರ್ ಮಾತನಾಡಿ, ಪರಿಸರ ಮಾಲಿನ್ಯ ಹಾಗೂ ಹವಾಮಾನ ವೈಪರೀತ್ಯಗಳು ಹೆಚ್ಚುತ್ತಿರುವ ಇಂದಿನ ಸಂದರ್ಭದಲ್ಲಿ ಪ್ರತಿಯೊಬ್ಬರೂ ಕನಿಷ್ಠ ಒಂದು ಗಿಡವನ್ನಾದರೂ ನೆಟ್ಟು ಅದರ ಪೋಷಣೆ ಮತ್ತು ಸಂರಕ್ಷಣೆಗೆ ಮುಂದಾಗಬೇಕು ಎಂದು ಕರೆ ನೀಡಿದರು. ಪ್ರಕೃತಿಯನ್ನು ಉಳಿಸುವ ಮೂಲಕ ಮುಂದಿನ ಪೀಳಿಗೆಗೆ ಉತ್ತಮ ಪರಿಸರವನ್ನು ಕೊಡುಗೆಯಾಗಿ ನೀಡಬಹುದು ಎಂದರು.

ಕೆರೆ ಸಮಿತಿ ಅಧ್ಯಕ್ಷ ನಟರಾಜು ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಗ್ರಾಮೀಣ ಭಾಗದಲ್ಲಿ ಅನೇಕ ಜನಪರ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು ಜನರಲ್ಲಿ ಜಾಗೃತಿ ಮೂಡಿಸುತ್ತಿದೆ. ಸಮಾಜಕ್ಕೆ ಮಾದರಿಯಾಗಿರುವ ಈ ಯೋಜನೆಯ ಕಾರ್ಯಚಟುವಟಿಕೆಗಳು ಗ್ರಾಮಗಳ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿವೆ ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ಕೆರೆ ಅಂಗಳದಲ್ಲಿ 55ಕ್ಕೂ ಹೆಚ್ಚು ವಿವಿಧ ಜಾತಿಯ ಗಿಡಗಳನ್ನು ನೆಡಲಾಯಿತು. ಈ ಗಿಡಗಳ ಸಂರಕ್ಷಣೆ ಗ್ರಾಮದ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಅವುಗಳನ್ನು ಉಳಿಸಿ ಬೆಳೆಸುವ ಮೂಲಕ ಗ್ರಾಮಕ್ಕೆ ಹಸಿರು ಸಂಪತ್ತಾಗಿ ರೂಪಿಸಬೇಕು ಎಂದು ಗ್ರಾಮಸ್ಥರಿಗೆ ಕರೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಕೆರೆ ಸಮಿತಿಯ ಉಪಾಧ್ಯಕ್ಷ ಭರತ್, ರಂಗನಾಥ್, ಕೃಷಿ ಮೇಲ್ವಿಚಾರಕ ಕುಮಾರ್ ಟಿ.ಆರ್., ಸೇವಾ ಪ್ರತಿನಿಧಿ ತಿಮ್ಮಕ್ಕ, ವಿಎಲ್ಇ ಸೇವಾದಾರರಾದ ತನುಜಾ, ಪ್ರಗತಿ ಬಂಧು ಸ್ವಸಹಾಯ ಸಂಘದ ಸದಸ್ಯರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

# ಡಿಜಿಟಲ್ ಅರೆಸ್ಟ್: 80 ಸ್ಥಳಗಳಲ್ಲಿ ದಾಳಿ, ಇಬ್ಬರ ಬಂಧನ

ಕೋಲಾರ

ಸಿಬಿಐ 60 ವಿಶೇಷ ತನಿಖಾ ತಂಡಗಳನ್ನು ರಚಿಸಿ ಕರ್ನಾಟಕ, ದೆಹಲಿ, ಮಹಾರಾಷ್ಟ್ರ, ಗುಜರಾತ್, ತಮಿಳುನಾಡು, ತೆಲಂಗಾಣ, ಆಂಧ್ರಪ್ರದೇಶ, ಉತ್ತರ ಪ್ರದೇಶ, ರಾಜಸ್ಥಾನ ಸೇರಿದಂತೆ 16 ರಾಜ್ಯಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಿತು.

ಈ ಜಾಲವು ದೇಶದಾದ್ಯಂತ 200ಕ್ಕೂ ಹೆಚ್ಚು ಡಿಜಿಟಲ್ ಅರೆಸ್ಟ್ ಪ್ರಕರಣಗಳಲ್ಲಿ ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದೆ.

ತನಿಖೆಯಲ್ಲಿ ವಂಚಕರು ಸುಪ್ರೀಂ ಕೋರ್ಟ್ ವೆಬ್‌ಸೈಟ್ ಮಾದರಿಯ ನಕಲಿ ತಾಣವನ್ನು ಸೃಷ್ಟಿಸಿ, ತಾವು ಪೊಲೀಸ್, ಸಿಬಿಐ, ಇಡಿ ಅಥವಾ ನ್ಯಾಯಾಂಗ ಅಧಿಕಾರಿಗಳೆಂದು ಪರಿಚಯಿಸಿಕೊಂಡು ಸಾರ್ವಜನಿಕರನ್ನು ಬೆದರಿಸುತ್ತಿದ್ದ ಮಾಹಿತಿ ಬೆಳಕಿಗೆ ಬಂದಿದೆ. ಪ್ರಕರಣಗಳಲ್ಲಿ ಸಿಲುಕಿರುವುದಾಗಿ ನಂಬಿಸಿ, ಬಂಧನದ ಭಯ ಹುಟ್ಟಿಸಿ ಲಕ್ಷಾಂತರ ರೂಪಾಯಿ ಹಣ ವರ್ಗಾಯಿಸಿಕೊಳ್ಳಲಾಗುತ್ತಿತ್ತು.

# ಸ್ವಚ್ಛ ಮತದಾರರ ಪಟ್ಟಿಯೇ ಪ್ರಜಾಪ್ರಭುತ್ವದ ಅಡಿಪಾಯ




ಕೋಲಾರ

“ಸ್ವಚ್ಛ ಮತ್ತು ನಿಖರವಾದ ಮತದಾರರ ಪಟ್ಟಿಯೇ ಪ್ರಜಾಪ್ರಭುತ್ವದ ಅಡಿಪಾಯವಾಗಿದ್ದು, ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ಮತದಾನದ ಹಕ್ಕು ಸಿಗುವಂತೆ ಹಾಗೂ ಅನರ್ಹರ ಹೆಸರುಗಳು ಪಟ್ಟಿಯಿಂದ ಕೈಬಿಡುವಂತೆ ಅಧಿಕಾರಿಗಳು ಅತ್ಯಂತ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು” ಎಂದು ಕೋಲಾರ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ನಡೆದ ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ ಸ್ವೀಪ್ ಚಟುವಟಿಕೆಗಳ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವು ಪಾರದರ್ಶಕವಾಗಿ ನಡೆಯುತ್ತಿದ್ದು, ಯಾವುದೇ ಲೋಪಕ್ಕೆ ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

2002ರ ಮತದಾರರ ಪಟ್ಟಿಯ ಆಧಾರವನ್ನು ಬಳಸಿಕೊಂಡು ಈ ಬಾರಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ಮನೆ–ಮನೆ ಸಮೀಕ್ಷೆಯ ಮೂಲಕ ಪ್ರತಿಯೊಬ್ಬ ಮತದಾರರ ಮಾಹಿತಿಯನ್ನು ಪರಿಶೀಲಿಸಲಾಗುತ್ತಿದೆ ಎಂದು ಅವರು ಹೇಳಿದರು.

ಜೂನ್ 30ರಿಂದ ಜಿಲ್ಲೆಯಾದ್ಯಂತ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್ಒಗಳು) ಮನೆ–ಮನೆ ಭೇಟಿ ಆರಂಭಿಸಲಿದ್ದು, ಪ್ರತಿಯೊಬ್ಬ ಮನೆಗೆ ಎನ್ಯೂಮರೇಷನ್ ಫಾರಂ ವಿತರಿಸಿ ಅಗತ್ಯ ಮಾಹಿತಿಯನ್ನು ಸಂಗ್ರಹಿಸಲಿದ್ದಾರೆ. 18 ವರ್ಷ ಪೂರೈಸಿದ ಹೊಸ ಯುವ ಮತದಾರರನ್ನು ಪಟ್ಟಿಗೆ ಸೇರಿಸುವುದು ಹಾಗೂ ಮರಣ ಹೊಂದಿದವರು ಅಥವಾ ಸ್ಥಳಾಂತರಗೊಂಡವರ ಹೆಸರುಗಳನ್ನು ನಿಯಮಾನುಸಾರ ಕೈಬಿಡುವುದು ಈ ಕಾರ್ಯದ ಮುಖ್ಯ ಉದ್ದೇಶವಾಗಿದೆ ಎಂದು ವಿವರಿಸಿದರು.

ಸಾರ್ವಜನಿಕರು ತಮ್ಮ ಮತದಾರರ ವಿವರಗಳನ್ನು ಮೊಬೈಲ್ ಮೂಲಕ ಪರಿಶೀಲಿಸಲು ಚುನಾವಣಾ ಆಯೋಗದ ಅಧಿಕೃತ ಆಪ್ ಬಳಸುವಂತೆ ಹಾಗೂ 1950 ಸಹಾಯವಾಣಿಯನ್ನು ಸಂಪರ್ಕಿಸುವಂತೆ ಸ್ವೀಪ್ ಸಮಿತಿ ವತಿಯಿಂದ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ಮಹಿಳೆಯರು, ಯುವಕರು ಹಾಗೂ ದಿವ್ಯಾಂಗ ಮತದಾರರನ್ನು ಹೆಚ್ಚಾಗಿ ಒಳಗೊಂಡು ಯಾರೂ ಮತದಾನದ ಹಕ್ಕಿನಿಂದ ವಂಚಿತರಾಗಬಾರದು ಎಂಬುದು ಈ ಅಭಿಯಾನದ ಮುಖ್ಯ ಗುರಿಯಾಗಿದೆ ಎಂದು ಅವರು ಹೇಳಿದರು.

# ನೂತನ ಪದಾಧಿಕಾರಿಗಳ ನೇಮಕ



ಮುಳಬಾಗಿಲು

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಭೋವಿ ಯುವ ವೇದಿಕೆಯ ತಾಲೂಕು ಮಟ್ಟದ ನೂತನ ಪದಾಧಿಕಾರಿಗಳ ಆಯ್ಕೆ ಕಾರ್ಯಕ್ರಮ ನಡೆಯಿತು. ಸಂಸ್ಥಾಪಕ ಅಧ್ಯಕ್ಷ ಎಸ್.ವಿ. ಲೋಕೇಶ್ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಜಿಲ್ಲಾ ಅಧ್ಯಕ್ಷ ತಾರಕ್ ಮಂಜು, ಉಪಾಧ್ಯಕ್ಷ ಕೆ.ವಿ. ಕುಮಾರ್, ವೆಂಕಟರಾಮಪ್ಪ, ದೀಪಕ್, ರಾಕೇಶ್, ಸುನಿಲ್, ಮಂಜುನಾಥ್ ಸೇರಿದಂತೆ ಹಲವು ಜಿಲ್ಲಾ ಮುಖಂಡರು ಭಾಗವಹಿಸಿದ್ದರು.

ಸಭೆಯಲ್ಲಿ ಮುಳಬಾಗಿಲು ತಾಲೂಕು ಭೋವಿ ಯುವ ವೇದಿಕೆಯ ಗೌರವಾಧ್ಯಕ್ಷರಾಗಿ ಹೈದಲಾಪುರ ನಾಗರಾಜಪ್ಪ, ಅಧ್ಯಕ್ಷರಾಗಿ ಎಂ. ವೆಂಕಟಪುರ ಗ್ರಾಮದ ಯುವರಾಜ್, ಉಪಾಧ್ಯಕ್ಷರಾಗಿ ಬಾಲಚಂದ್ರ, ಕಾರ್ಯದರ್ಶಿಯಾಗಿ ಮಂಜುನಾಥ್, ಖಜಾಂಚಿಯಾಗಿ ಕೆಲಸಮಂಗಲ ಗ್ರಾಮದ ವೆಂಕಟೇಶ್ ಹಾಗೂ ಸಂಚಾಲಕರಾಗಿ ರಾಮಾಂಜಿ ಮತ್ತು ಶೇಖರ್ ಅವರನ್ನು ನೇಮಕ ಮಾಡಲಾಯಿತು. ಜೊತೆಗೆ ಹಲವು ಮುಖಂಡರಿಗೆ ವಿವಿಧ ಜವಾಬ್ದಾರಿಗಳನ್ನು ವಹಿಸಿ ಅಧಿಕೃತವಾಗಿ ಪದಾಧಿಕಾರಿಗಳನ್ನಾಗಿ ಘೋಷಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸ್ಥಾಪಕ ಅಧ್ಯಕ್ಷ ಎಸ್.ವಿ. ಲೋಕೇಶ್, ಭೋವಿ ಸಮುದಾಯದ ಸಮಗ್ರ ಅಭಿವೃದ್ಧಿಗೆ ಸಂಘಟನೆ ಶಕ್ತಿಯಾಗಬೇಕು ಎಂದು ಕರೆ ನೀಡಿದರು. ಶೈಕ್ಷಣಿಕ, ಆರ್ಥಿಕ, ಸಾಮಾಜಿಕ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ಸಮುದಾಯವನ್ನು ಮುನ್ನಡೆಸುವ ಉದ್ದೇಶದಿಂದ ಸಂಘಟನೆಯ ಕಾರ್ಯಚಟುವಟಿಕೆಗಳನ್ನು ಗ್ರಾಮ ಮಟ್ಟದಿಂದ ರಾಜ್ಯ ಮಟ್ಟದವರೆಗೆ ವಿಸ್ತರಿಸುವ ಅಗತ್ಯವಿದೆ ಎಂದು ಹೇಳಿದರು.

ಸಮುದಾಯದ ಯುವಕರನ್ನು ಸಂಘಟಿಸಿ ಅವರಲ್ಲಿ ನಾಯಕತ್ವ ಗುಣಗಳನ್ನು ಬೆಳೆಸುವುದು ಹಾಗೂ ಹಿಂದುಳಿದ ವರ್ಗಗಳ ಹಕ್ಕುಗಳಿಗಾಗಿ ಹೋರಾಟ ನಡೆಸುವುದು ಸಂಘಟನೆಯ ಪ್ರಮುಖ ಉದ್ದೇಶವಾಗಿದೆ. ನೂತನ ಪದಾಧಿಕಾರಿಗಳು ಪ್ರಾಮಾಣಿಕತೆ ಮತ್ತು ಬದ್ಧತೆಯಿಂದ ಕಾರ್ಯನಿರ್ವಹಿಸಿ ಸಂಘಟನೆಯನ್ನು ಇನ್ನಷ್ಟು ಬಲಪಡಿಸಬೇಕು ಎಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಸಮಿತಿ ನಿರ್ದೇಶಕ ಮುರಳಿ, ಕೆಪಿಸಿಸಿ ಕಾರ್ಮಿಕ ವಿಭಾಗದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಾಂದ್ ಪಾಷಾ, ಬ್ಲಾಕ್ ಅಧ್ಯಕ್ಷರು ಹಾಗೂ ಕಾರ್ಮಿಕ ಘಟಕದ ಮುಖಂಡರು ಉಪಸ್ಥಿತರಿದ್ದರು. ನೂತನ ಪದಾಧಿಕಾರಿಗಳ ನೇಮಕದಿಂದ ಭೋವಿ ಸಮುದಾಯದ ಸಂಘಟನಾ ಚಟುವಟಿಕೆಗಳಿಗೆ ಹೊಸ ಚೈತನ್ಯ ದೊರೆಯಲಿದೆ ಎಂಬ ವಿಶ್ವಾಸ ವ್ಯಕ್ತವಾಯಿತು.

# ವಿದ್ಯುತ್ ಖಾಸಗೀಕರಣ ವಿರೋಧಿಸಿ ವೇಮಗಲ್‌ನಲ್ಲಿ ಬೃಹತ್ ಪ್ರತಿಭಟನೆ

ಕೋಲಾರ

ಕರ್ನಾಟಕ ರಾಜ್ಯದಲ್ಲಿ ಕೆಇಆರ್‌ಸಿ ವತಿಯಿಂದ ವಿದ್ಯುತ್ ವಿತರಣಾ ಪರವಾನಗಿಯನ್ನು ಟಾಟಾ ಪವರ್ ಕಂಪನಿಗೆ ನೀಡುವುದನ್ನು ಮತ್ತು ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವುದನ್ನು ವಿರೋಧಿಸಿ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿರುದ್ಧ ಪ್ರಗತಿಪರ ಸಂಘಟನೆಗಳ ಒಕ್ಕೂಟದ ವತಿಯಿಂದ ವೇಮಗಲ್, ನರಸಾಪುರ ಮತ್ತು ಕ್ಯಾಲನೂರು ಭಾಗದ ಹೋರಾಟಗಾರರು ಹಾಗೂ ನೌಕರರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಇಲ್ಲಿನ ಬಯಲು ರಂಗಮಂದಿರದಿಂದ ಪ್ರಾರಂಭವಾದ ಪ್ರತಿಭಟನಾ ಜಾತಾವೂ ವೇಮಗಲ್ ಪೊಲೀಸ್ ಠಾಣೆಯ ಮುಂಭಾಗದ ರಸ್ತೆಯ ಮೂಲಕ ಸಾಗಿ, ರಾಮಶೆಟ್ಟಿ ಸರ್ಕಲ್‌ನಲ್ಲಿ ಕೆಲಕಾಲ ರಸ್ತೆ ತಡೆ ನಡೆಸಿತು. ನಂತರ ವೇಮಗಲ್–ಕುರುಗಲ್ ಪಟ್ಟಣ ಪಂಚಾಯಿತಿ ಕಚೇರಿ ಮುಂದೆ ಜಮಾಯಿಸಿದ ಪ್ರತಿಭಟನಾಕಾರರು ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರೊಫೆಸರ್ ನಂಜುಂಡಸ್ವಾಮಿ ಸ್ಥಾಪಿತ




ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಯುಗ ಘಟಕದ ಅಧ್ಯಕ್ಷರಾದ ಕಲ್ವಮಂಜಲಿ ರಾಮುಶಿವಣ್ಣ, “ವಿದ್ಯುತ್ ಕ್ಷೇತ್ರ ಖಾಸಗೀಕರಣವಾದರೆ ರೈತರಿಗೆ ನೀಡುತ್ತಿರುವ ಉಚಿತ ವಿದ್ಯುತ್ ಸಂಪೂರ್ಣ ರದ್ದಾಗಲಿದೆ.

ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಕಡ್ಡಾಯವಾಗಿ ಮೀಟರ್ ಅಳವಡಿಸಲಾಗುತ್ತದೆ. ಬಡವರಿಗೆ ಆಸರೆಯಾಗಿರುವ ಗೃಹಜ್ಯೋತಿ, ಭಾಗ್ಯಜ್ಯೋತಿ, ಕುಟೀರಜ್ಯೋತಿ ಹಾಗೂ ಗಂಗಾ ಕಲ್ಯಾಣದಂತಹ ಪ್ರಮುಖ ಯೋಜನೆಗಳು ರದ್ದಾಗಲಿವೆ” ಎಂದು ಎಚ್ಚರಿಸಿದರು.

“ಸಣ್ಣ ಕೈಗಾರಿಕೆಗಳಿಗೆ ನೀಡುವ ರಿಯಾಯಿತಿ ದರದ ವಿದ್ಯುತ್ ಸ್ಥಗಿತಗೊಂಡು, ಕಾಲಾಂತರದಲ್ಲಿ ಟಾಟಾ ಕಂಪನಿಯು ತನ್ನಿಷ್ಟದಂತೆ ಹೆಚ್ಚಿನ ದರ ನಿಗದಿ ಮಾಡಲಿದೆ. ಮೊಬೈಲ್‌ಗೆ ರೀಚಾರ್ಜ್ ಮಾಡುವ ಮಾದರಿಯಲ್ಲಿ ಕೃಷಿ ಪಂಪ್‌ಸೆಟ್‌ಗಳಿಗೂ ಮುಂಗಡವಾಗಿ ಹಣ ಪಾವತಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತದೆ.

ಕೋಟ್ಯಂತರ ರೂಪಾಯಿ ಮೌಲ್ಯದ ಬೆಸ್ಕಾಂ ಆಸ್ತಿ ಖಾಸಗಿ ಕಂಪನಿಯ ಪಾಲಾಗುವುದಲ್ಲದೆ, ರಾಜ್ಯದ ಯುವಜನತೆಗೆ ಸರ್ಕಾರಿ ಉದ್ಯೋಗದ ಅವಕಾಶಗಳು ಕೈತಪ್ಪಲಿವೆ” ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಯಾವುದೇ ಕಾರಣಕ್ಕೂ ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣ ಮಾಡಬಾರದು, ಬೆಸ್ಕಾಂ ನೌಕರರು, ರೈತರು ಹಾಗೂ ಬಡವರ ಹಿತ ಕಾಯುವುದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಜವಾಬ್ದಾರಿಯಾಗಿದೆ ಎಂದು ಒತ್ತಾಯಿಸಿದ ಹೋರಾಟಗಾರರು, ವೇಮಗಲ್–ಕುರುಗಲ್ ಪಟ್ಟಣ ಪಂಚಾಯಿತಿಯ ಮುಖ್ಯ ಅಧಿಕಾರಿಗಳಾದ ವೆಂಕಟೇಶ್ ಅವರ ಮೂಲಕ ಸಂಬಂಧಪಟ್ಟ ಕೆಇಆರ್‌ಸಿ ಕಾರ್ಯದರ್ಶಿಗಳಿಗೆ ಹಾಗೂ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಈ ಬೃಹತ್ ಹೋರಾಟಕ್ಕೆ ವೇಮಗಲ್–ಕುರುಗಲ್ ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಅನುಷಾ ಮುನಿರಾಜು, ಸ್ಥಾಯಿ ಸಮಿತಿ ಅಧ್ಯಕ್ಷರಾದ ವಕೀಲ ನಾಗೇಶ್, ಕೌನ್ಸಿಲರ್‌ಗಳಾದ ಲೋಕೇಶ್, ಮರಿಯಪ್ಪ, ಜೆಸಿಬಿ ರವಿ, ಜೆಸಿಬಿ ರಾಮು, ಶಿಲ್ಪಾ ಶಂಕರ್ ಹಾಗೂ ಕುರುಗಲ್ ರಮೇಶ್ ಬೆಂಬಲ ಸೂಚಿಸಿ ಭಾಗವಹಿಸಿದ್ದರು.

ಪ್ರತಿಭಟನೆಯಲ್ಲಿ ಮುಖಂಡರಾದ ಜಿ. ನಾರಾಯಣಸ್ವಾಮಿ, ಎಂ.ಐ.ಸಿ.ಟಿ. ಮಂಜುನಾಥ್, ಕಲ್ವಮಂಜಲಿ ಸಿ. ಶಿವಣ್ಣ, ಮಡಿವಾಳ ಮುನಿರಾಜು, ವಿಶ್ವ ನಗರ ಕೃಷ್ಣಯ್ಯ, ಶಬೀರ್, ಕೆಇಬಿ ಚಂದ್ರು, ವೇಮಗಲ್ ಸುಧಾಕರ್, ಕಾರ್ಮಿಕ ಘಟಕದ ಅಧ್ಯಕ್ಷ ನಾಗರಾಜ್, ದಿನ್ನೆಹೊಸಹಳ್ಳಿ ರಮೇಶ್, ಸತೀಶ್, ಪಾನಿಪುರಿ ವೆಂಕಟೇಶ್, ಕಲ್ಲಹಳ್ಳಿ ನಾಗಭೂಷಣ್, ಹಾರ್ಜೇನಹಳ್ಳಿ ಕೃಷ್ಣಪ್ಪ, ಚಕ್ಕಪುರ ಆಂಜಿ, ಚಂದ್ರಶೇಖರ್, ಮುನಿರಾಜು, ಮುನಿಕೃಷ್ಣಪ್ಪ, ಹನುಮಪ್ಪ, ರವಿ, ಬ್ಯಾಟಪ್ಪ, ಸಂಜೀವಯ್ಯ, ಹೊಲೇರಹಳ್ಳಿ ಅಶೋಕ್, ಆಂಜಿನಪ್ಪ ಹಾಗೂ ಅಸಿಸ್ಟೆಂಟ್ ಇಂಜಿನಿಯರ್ ವೇಮಗಲ್ ಗುರಪ್ಪ, ನರಸಾಪುರ ಕೋಟರೆಡ್ಡಿ, ಕ್ಯಾಲನೂರು ನಾಗರತ್ನ, ಸುಗಟೂರು ಆಲಿ ಭಾಷಾ, ಚೌಡರೆಡ್ಡಿ, ಪ್ರಭಾಕರ್ ಸೇರಿದಂತೆ ನೌಕರರ ಸಿಬ್ಬಂದಿ ವರ್ಗ, ರೈತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

27/06/2026

ಭಾರತ ಸಾರಥಿ
BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# 27ರಂದು ಪ್ರತಿಭಟನೆ



ಜಿಲ್ಲೆಯ ಹಲವು ಕಡೆಗಳಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ರೈತರು ಹಾಗೂ ದಲಿತ ಕುಟುಂಬಗಳಿಗೆ ಅನ್ಯಾಯವಾಗಿ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿ, ಜೂನ್ 27ರಂದು ಜಿಲ್ಲೆಯ ಎಲ್ಲಾ ತಾಲೂಕುಗಳ ವಲಯ ಅರಣ್ಯಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ದಸಂಸ ಜಿಲ್ಲಾ ಸಂಚಾಲಕ ಎನ್. ಎ. ವೆಂಕಟೇಶ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿಕ್ಕಬಳ್ಳಾಪುರ ತಾಲೂಕಿನ ನಂದಿ ಹೋಬಳಿಯ ಸಿಂಗಾಟಕದಿರೇನಹಳ್ಳಿ ಬಳಿ 1995ರಲ್ಲಿ 7 ದಲಿತ ಕುಟುಂಬಗಳಿಗೆ ಸರ್ಕಾರದಿಂದ ಮಂಜೂರಾದ 21 ಎಕರೆ ಜಮೀನಿನ ವಿಚಾರದಲ್ಲಿ ನಿರಂತರ ಗೊಂದಲ ಹಾಗೂ ಕಿರುಕುಳ ನಡೆಯುತ್ತಿದೆ ಎಂದು ಆರೋಪಿಸಿದರು.

ಅವರು ಹೇಳುವಂತೆ, ಈ ಜಮೀನು ಬಗ್ಗೆ ಅರಣ್ಯ ಇಲಾಖೆ ಮತ್ತು ಕಂದಾಯ ಇಲಾಖೆ ನಡುವೆ ಸ್ಪಷ್ಟತೆ ಇಲ್ಲದೆ ಪರಸ್ಪರ ವಿರುದ್ಧ ಹೇಳಿಕೆಗಳು ಬರುತ್ತಿವೆ. ಒಂದೆಡೆ ಇದು ಅರಣ್ಯ ಇಲಾಖೆ ವ್ಯಾಪ್ತಿಗೆ ಸೇರಿಲ್ಲ ಎಂದು ಹೇಳಲಾಗುತ್ತಿದ್ದು, ಮತ್ತೊಂದೆಡೆ ಅರಣ್ಯ ಭೂಮಿಯಾಗಿದೆ ಎಂದು ಹೇಳಲಾಗುತ್ತಿದೆ ಎಂದು ಅವರು ಆರೋಪಿಸಿದರು.

ಸೆಟ್ಲ್‌ಮೆಂಟ್ ಅಧಿಕಾರಿಗಳ ಮಟ್ಟದಲ್ಲಿಯೂ ಈ ಜಮೀನು 7 ದಲಿತ ಕುಟುಂಬಗಳಿಗೆ ಸೇರಿದುದಾಗಿ ತೀರ್ಪು ನೀಡಿದ್ದರೂ, ಸ್ಥಳೀಯ ಮಟ್ಟದಲ್ಲಿ ಅಧಿಕಾರಿಗಳು ಅದನ್ನು ಒಪ್ಪಿಕೊಳ್ಳದೇ ಒತ್ತಡ ಹೇರುತ್ತಿದ್ದಾರೆ ಎಂದು ಅವರು ದೂರಿದರು. ಇದರಿಂದ ರೈತ ಕುಟುಂಬಗಳು ಅನ್ಯಾಯಕ್ಕೆ ಒಳಗಾಗುತ್ತಿವೆ ಎಂದು ಅವರು ಹೇಳಿದರು.

ಈ ಹಿನ್ನೆಲೆಯಲ್ಲಿ ದಲಿತ ಸಂಘರ್ಷ ಸಮಿತಿ ಜೂನ್ 27ರಂದು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ವಲಯ ಅರಣ್ಯಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಲು ನಿರ್ಧರಿಸಿದೆ ಎಂದು ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ದಸಂಸ ತಾಲೂಕು ಸಂಚಾಲಕ ದೊಡ್ಡತಿರುಮಳಪ್ಪ, ಸಂಘಟನಾ ಸಂಚಾಲಕ ಡಿ. ಎಂ. ವೆಂಕಟೇಶ್ ಸೇರಿದಂತೆ ರಾಜ್ ಕುಮಾರ್, ಮುನಿಕದರಪ್ಪ, ರಾಮದಾಸ್ ಹಾಗೂ ರಾಮಕೃಷ್ಣಪ್ಪ ಉಪಸ್ಥಿತರಿದ್ದರು.

# ಫಸಲ್ ಭಿಮಾ ಯೋಜನೆ: ಬೆಳೆ ವಿಮೆ ನೋಂದಣಿಗೆ ಮನವಿ

ತುಮಕೂರು

ಮುಂಗಾರು ಹಂಗಾಮಿಗಾಗಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭಿಮಾ(ವಿಮಾ) ಯೋಜನೆಯಡಿ ಜಿಲ್ಲೆಯ ರೈತರು ತಮ್ಮ ಬೆಳೆಯನ್ನು ವಿಮೆಗೆ ನೋಂದಾಯಿಸಬೇಕೆಂದು ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಎಸ್. ಕಳ್ಳೆನ್ನವರ ಮನವಿ ಮಾಡಿದ್ದಾರೆ.

ವಿಮಾ ಯೋಜನೆಯಡಿ ಪ್ರಕೃತಿ ವಿಕೋಪ/ಕೀಟ ಅಥವಾ ರೋಗಬಾಧೆಯಿಂದ ಬೆಳೆ ನಷ್ಟ ಸಂಭವಿಸಿದಲ್ಲಿ ವಿಮಾ ಪರಿಹಾರ ನೀಡಲಾಗುವುದು. ಜಿಲ್ಲೆಯಲ್ಲಿ ಈಗಾಗಲೇ ವಿಮಾ ನೋಂದಣಿ ಪ್ರಾರಂಭವಾಗಿದ್ದು, ಬೆಳೆ ಸಾಲ ಪಡೆಯದ/ಪಡೆದ ರೈತರು ವಿಮಾ ಕಂತು ಪಾವತಿಸಿ ವಿಮಾ ಸೌಲಭ್ಯ ಪಡೆಯಬಹುದಾಗಿದೆ.

ಮಳೆಯಿಂದ ಅಥವಾ ಇತರೆ ಪ್ರತಿಕೂಲ ಹವಾಮಾನ ಪರಿಸ್ಥಿತಿಗಳಿಂದ ಅಧಿಸೂಚಿತ ಘಟಕದಲ್ಲಿ ಶೇ.75ಕ್ಕಿಂತ ಹೆಚ್ಚಿನ ಕ್ಷೇತ್ರದಲ್ಲಿ ಬಿತ್ತನೆ ವಿಫಲಗೊಂಡಲ್ಲಿ ವಿಮಾ ಮೊತ್ತದ ಗರಿಷ್ಠ ಶೇ.25ರಷ್ಟು ಬೆಳೆ ನಷ್ಟ ಹಾಗೂ ಸ್ಥಳ ನಿರ್ಧಿಷ್ಟ ಪ್ರಕೃತಿ ವಿಕೋಪಗಳಿಂದ ಉಂಟಾಗುವ ನಷ್ಟವನ್ನು ವೈಯಕ್ತಿಕವಾಗಿ ನಿರ್ಧರಿಸಿ ಬೆಳೆ ವಿಮಾ ನಷ್ಟ ನೀಡಲಾಗುವುದು.

ಅಧಿಸೂಚಿತ ವಿಮಾ ಘಟಕದಲ್ಲಿ ಬಿತ್ತನೆಯಾದ ನಂತರ ಕಟಾವಿಗೆ ಮೊದಲು ನಿರೀಕ್ಷಿತ ಇಳುವರಿಯು ಪ್ರಾರಂಭಿಕ ಇಳುವರಿಗಿಂತ ಶೇ.50ಕ್ಕಿಂತ ಕಡಿಮೆ ಇದ್ದರೆ ವಿಮಾ ಮಾಡಿಸಿದ ರೈತರಿಗೆ ಅಂದಾಜು ಮಾಡಲಾದ ಬೆಳೆ ವಿಮಾ ನಷ್ಟ ಪರಿಹಾರದಲ್ಲಿ ಶೇ.25ರಷ್ಟು ಹಣ ಮುಂಚಿತವಾಗಿ ವಿಮಾ ಸಂಸ್ಥೆಯು ನೀಡುತ್ತದೆ.

ಈ ಯೋಜನೆಯಡಿ ಬೆಳೆಯನ್ನು ಜಮೀನಿನಲ್ಲೇ ಒಣಗಲು ಬಿಟ್ಟಂತಹ ಸಂದರ್ಭದಲ್ಲಿ ಕಟಾವು ಮಾಡಿದ ಎರಡು ವಾರದೊಳಗೆ(ಹದಿನಾಲ್ಕು ದಿನಗಳು) ಪ್ರಕೃತಿ ವಿಕೋಪದಿಂದ ಬೆಳೆ ನಾಶವಾದರೆ ವೈಯಕ್ತಿಕವಾಗಿ ವಿಮಾ ಪರಿಹಾರ ನೀಡಲಾಗುತ್ತದೆ. ರೈತರು ಹಾನಿಗೆ ಕಾರಣಗಳನ್ನು 72 ಗಂಟೆಯೊಳಗಾಗಿ ತಿಳಿಸಬೇಕು.

ಅರ್ಹ ರೈತರು ಆರ್ಥಿಕ ಸಂಸ್ಥೆ/ಬ್ಯಾಂಕ್/ಗ್ರಾಮ ಒನ್ ಕೇಂದ್ರ/ಸಾಮಾನ್ಯ ಸೇವಾ ಕೇಂದ್ರಗಳನ್ನು ಸಂಪರ್ಕಿಸಿ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಬಹುದಾಗಿದೆ.

ರೈತರು ವಿಮಾಕಂತು ಪಾವತಿಸಲು ಶೇಂಗಾ(ನೀರಾವರಿ), ತೊಗರಿ(ಮಳೆ ಆಶ್ರಿತ) ಬೆಳೆಗೆ ಜುಲೈ 15; ಮುಸುಕಿನ ಜೋಳ (ನೀರಾವರಿ/ಮಳೆ ಆಶ್ರಿತ) ಬೆಳೆಗೆ ಜುಲೈ 31; ಭತ್ತ(ನೀರಾವರಿ), ಶೇಂಗಾ(ಮಳೆ ಆಶ್ರಿತ), ರಾಗಿ(ಮಳೆ ಆಶ್ರಿತ) ಬೆಳೆಗೆ ಆಗಸ್ಟ್ 14 ಕಡೆಯ ದಿನವಾಗಿದೆ.

ಜಿಲ್ಲೆಯ ಬೆಳೆ ವಿಮೆ ಯೋಜನೆಯನ್ನು ಅನುಷ್ಠಾನ ಮಾಡಲು ಇಫ್ಕೋ ಟೋಕಿಯೋ ಜನರಲ್ ಇನ್ಸ್ಯೂರೆನ್ಸ್ ಕಂಪನಿಯನ್ನು ನಿಗಧಿಪಡಿಸಲಾಗಿದೆ. ರೈತರು ವಿಮಾ ಯೋಜನೆಯಡಿ ನೋಂದಾಯಿಸಲು ಈಖಗಿಖಖಿಖ ಖಆ ಹೊಂದಿರುವುದು ಕಡ್ಡಾಯವಾಗಿದ್ದು, ರೈತರು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಬೆಳೆ ವಿಮೆಗೆ ನೋಂದಾಯಿಸಿಕೊಂಡು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

# 13.3 ಕೋಟಿ ರೂ. ಮೌಲ್ಯದ ಆಸ್ತಿ ಪತ್ತೆ

ತುಮಕೂರು

ಇಡಿ ತನಿಖೆಯಲ್ಲಿ ಅಬಕಾರಿ ಇಲಾಖೆಯ ಕೆಲವು ಅಧಿಕಾರಿಗಳು, ಮಧ್ಯವರ್ತಿಗಳು ಹಾಗೂ ಖಾಸಗಿ ವ್ಯಕ್ತಿಗಳ ಸಹಭಾಗಿತ್ವದಲ್ಲಿ ಸಂಘಟಿತ ಭ್ರಷ್ಟಾಚಾರದ ಜಾಲ ಕಾರ್ಯನಿರ್ವಹಿಸುತ್ತಿದ್ದ ಮಾಹಿತಿ ಬೆಳಕಿಗೆ ಬಂದಿದೆ. ರಾಜ್ಯದ ವಿವಿಧ ಮದ್ಯ ಮಾರಾಟ ಮಳಿಗೆಗಳಿಂದ ಪ್ರತಿತಿಂಗಳು ನಿಗದಿತ ಪ್ರಮಾಣದ ಲಂಚ ಸಂಗ್ರಹಿಸಲಾಗುತ್ತಿದ್ದು, ಪರವಾನಗಿ ನವೀಕರಣ, ಸ್ಥಳಾಂತರ ಹಾಗೂ ಹೊಸ ಲೈಸೆನ್ಸ್ ಮಂಜೂರಾತಿ ಸಂದರ್ಭಗಳಲ್ಲಿಯೂ ಹಣ ವಸೂಲಿ ನಡೆಯುತ್ತಿತ್ತು ಎನ್ನಲಾಗಿದೆ.

ಸಂಗ್ರಹವಾದ ಲಂಚದ ಹಣವನ್ನು ಮಧ್ಯವರ್ತಿಗಳ ಮೂಲಕ ಮೇಲ್ಮಟ್ಟದವರಿಗೆ ಹಂಚಿಕೆ ಮಾಡಲಾಗುತ್ತಿತ್ತು. ಈ ಹಣದ ವಿವರಗಳನ್ನು ದಾಖಲಿಸಿದ್ದ ಲೆಕ್ಕಪತ್ರ ಪುಸ್ತಕವನ್ನು ಇಡಿ ವಶಪಡಿಸಿಕೊಂಡಿದ್ದು, ತನಿಖೆಗೆ ಪ್ರಮುಖ ಸಾಕ್ಷಿಯಾಗಿ ಪರಿಗಣಿಸಲಾಗಿದೆ. ಅಕ್ರಮವಾಗಿ ಸಂಗ್ರಹಿಸಿದ ಹಣವನ್ನು ವೈಯಕ್ತಿಕ ವೆಚ್ಚ, ಆಸ್ತಿ ಖರೀದಿ ಹಾಗೂ ವಿವಿಧ ವ್ಯವಹಾರಗಳಲ್ಲಿ ಹೂಡಿಕೆ ಮಾಡಿರುವ ಶಂಕೆಯೂ ವ್ಯಕ್ತವಾಗಿದೆ.

ಇನ್ನೊಂದು ಮಹತ್ವದ ಅಂಶವೆಂದರೆ, ಕೆಲವು ಅಬಕಾರಿ ಅಧಿಕಾರಿಗಳು ತಮ್ಮ ಕುಟುಂಬ ಸದಸ್ಯರ ಹೆಸರಿನಲ್ಲಿ ಮದ್ಯದಂಗಡಿ ಪರವಾನಗಿಗಳನ್ನು ಪಡೆದು ಪರೋಕ್ಷವಾಗಿ ಮದ್ಯ ವ್ಯವಹಾರ ನಡೆಸುತ್ತಿದ್ದರೆಂಬ ಮಾಹಿತಿ ತನಿಖೆಯಲ್ಲಿ ಹೊರಬಂದಿದೆ.

ಅಬಕಾರಿ ಇಲಾಖೆಯ ಅಧಿಕಾರಿಗಳಾದ ಜಗದೀಶ ನಾಯಕ್, ಕೆ.ಎಂ. ತಮ್ಮಣ್ಣ, ವೈ.ಡಿ. ಮಂಜುನಾಥ್ ಹಾಗೂ ಅವರ ಕುಟುಂಬ ಸದಸ್ಯರು, ವ್ಯವಹಾರ ಪಾಲುದಾರರು ಮತ್ತು ಆಪ್ತ ಸಹಚರರಿಗೆ ಸಂಬಂಧಿಸಿದ ಸ್ಥಳಗಳ ಮೇಲೆ ಇಡಿ ದಾಳಿ ನಡೆಸಿದ್ದು, ಪ್ರಕರಣದ ತನಿಖೆ ಮತ್ತಷ್ಟು ಚುರುಕುಗೊಂಡಿದೆ. ಅಧಿಕಾರಿಗಳ ವಿರುದ್ಧ ಇನ್ನಷ್ಟು ಕ್ರಮಗಳು ಕೈಗೊಳ್ಳುವ ಸಾಧ್ಯತೆ ಇದೆ.

# ಚಿಕ್ಕಬಳ್ಳಾಪುರದಲ್ಲಿ ಪಲ್ಸ್ ಪೋಲಿಯೋ ಅಭಿಯಾನಕ್ಕೆ ಸಿದ್ಧತೆ

ಚಿಕ್ಕಬಳ್ಳಾಪುರ

ಪೋಲಿಯೋ ರೋಗವು ಮಕ್ಕಳಲ್ಲಿ ಶಾಶ್ವತ ಅಂಗವಿಕಲತೆ ಉಂಟುಮಾಡುವ ಅಪಾಯಕಾರಿ ಸಾಂಕ್ರಾಮಿಕ ರೋಗವಾಗಿದ್ದು, ಸಮಯಕ್ಕೆ ಸರಿಯಾಗಿ ಲಸಿಕೆ ನೀಡುವುದರಿಂದ ಇದನ್ನು ಸಂಪೂರ್ಣವಾಗಿ ತಡೆಗಟ್ಟಬಹುದು ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಇತರ ಇಲಾಖೆಗಳ ಸಹಕಾರದೊಂದಿಗೆ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಅವರು ಸೂಚಿಸಿದರು.

ಭಾರತ ಸರ್ಕಾರದ ನಿರ್ಧಾರದಂತೆ 2026ರ ಜೂನ್ 28ರಂದು ರಾಷ್ಟ್ರೀಯ ಲಸಿಕಾ ದಿನ (ಪೋಲಿಯೋ ಭಾನುವಾರ) ಆಚರಿಸಲಾಗುತ್ತಿದ್ದು, ಆ ದಿನ ಜಿಲ್ಲೆಯಾದ್ಯಂತ 0 ರಿಂದ 5 ವರ್ಷದೊಳಗಿನ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆ ನೀಡಲಾಗುತ್ತದೆ ಎಂದು ಅವರು ತಿಳಿಸಿದರು.

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಟ್ಟು 647 ಲಸಿಕಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಸುಮಾರು 1,23,545 ಮಕ್ಕಳಿಗೆ ಲಸಿಕೆ ನೀಡುವ ಗುರಿ ನಿಗದಿಪಡಿಸಲಾಗಿದೆ. ಈ ಕಾರ್ಯಕ್ಕಾಗಿ 2,668 ವ್ಯಾಕ್ಸಿನೇಟರ್‌ಗಳು ಹಾಗೂ 141 ಮೇಲ್ವಿಚಾರಕರು ಕಾರ್ಯನಿರ್ವಹಿಸಲಿದ್ದಾರೆ ಎಂದು ಮಾಹಿತಿ ನೀಡಲಾಯಿತು.



ಬೂತ್ ದಿನದಲ್ಲಿ ಲಸಿಕೆ ಪಡೆಯಲು ಸಾಧ್ಯವಾಗದ ಮಕ್ಕಳಿಗೆ ನಂತರ ಗ್ರಾಮೀಣ ಪ್ರದೇಶಗಳಲ್ಲಿ ಎರಡು ದಿನ ಹಾಗೂ ನಗರ ಪ್ರದೇಶಗಳಲ್ಲಿ ಮೂರು ದಿನ ಮನೆ-ಮನೆ ಭೇಟಿ ಮೂಲಕ ಲಸಿಕೆ ನೀಡಲಾಗುವುದು. ಈ ಕಾರ್ಯದಲ್ಲಿ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಆರೋಗ್ಯ ಸಿಬ್ಬಂದಿ ಭಾಗವಹಿಸಲಿದ್ದಾರೆ ಎಂದು ತಿಳಿಸಲಾಯಿತು.

ಪ್ರಯಾಣದಲ್ಲಿರುವ ಕುಟುಂಬಗಳ ಮಕ್ಕಳಿಗೂ ಲಸಿಕೆ ಸಿಗುವಂತೆ ಬಸ್ ನಿಲ್ದಾಣಗಳು ಸೇರಿದಂತೆ ಜನನಿಬಿಡ ಪ್ರದೇಶಗಳಲ್ಲಿ 36 ಟ್ರಾನ್ಸಿಟ್ ಬೂತ್‌ಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹೇಳಿದರು.

ಹಿಂದೆ ಎಷ್ಟು ಬಾರಿ ಲಸಿಕೆ ಪಡೆದಿದ್ದರೂ ಸಹ, ಪ್ರತಿಯೊಂದು ಸುತ್ತಿನಲ್ಲಿಯೂ ಎರಡು ಹನಿ ಪೋಲಿಯೋ ಲಸಿಕೆ ನೀಡುವುದು ಅಗತ್ಯವಾಗಿದ್ದು, ಇದರಿಂದ ಮಕ್ಕಳ ರೋಗನಿರೋಧಕ ಶಕ್ತಿ ಹೆಚ್ಚುತ್ತದೆ ಎಂದು ಅವರು ಒತ್ತಿಹೇಳಿದರು.

"ಪ್ರತಿ ಬಾರಿ ಎರಡು ಹನಿಗಳು ಪೋಲಿಯೋ ವಿರುದ್ಧ ನಿರಂತರ ಗೆಲುವು" ಹಾಗೂ "ಪೋಲಿಯೋ ರಹಿತ ವಿಶ್ವ" ಎಂಬ ಘೋಷವಾಕ್ಯಗಳೊಂದಿಗೆ ಅಭಿಯಾನ ನಡೆಯುತ್ತಿದ್ದು, ಸಾರ್ವಜನಿಕರು ತಮ್ಮ ಮಕ್ಕಳನ್ನು ಕಡ್ಡಾಯವಾಗಿ ಲಸಿಕಾ ಕೇಂದ್ರಗಳಿಗೆ ಕರೆತರುವಂತೆ ಅವರು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಚಿತ ಶೇಂಗಾ ಬಿತ್ತನೆ ಬೀಜ ವಿತರಣೆಗೆ ಚಾಲನೆ

ವೈ.ಎನ್.ಹೊಸಕೋಟೆ

ರೈತರ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಹಾಗೂ ಉತ್ತಮ ಇಳುವರಿ ಸಾಧಿಸಲು ನೆರವಾಗುವ ಉದ್ದೇಶದಿಂದ ಕೃಷಿ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ಶೇಂಗಾ ಬಿತ್ತನೆ ಬೀಜ ವಿತರಣಾ ಕಾರ್ಯಕ್ರಮಕ್ಕೆ ಶಾಸಕ ಹೆಚ್.ವಿ.ವೆಂಕಟೇಶ್ ಚಾಲನೆ ನೀಡಿದರು.

ಹೋಬಳಿಯ ರಂಗಸಮುದ್ರ ಮತ್ತು ದೊಡ್ಡೇನಹಳ್ಳಿ ಗ್ರಾಮಗಳಲ್ಲಿ ನಡೆದ ಕಾರ್ಯಕ್ರಮದಲ್ಲಿ ರೈತರಿಗೆ ಶೇಂಗಾ ಬಿತ್ತನೆ ಬೀಜಗಳನ್ನು ವಿತರಿಸಿ ಮಾತನಾಡಿದ ಅವರು, ಸರ್ಕಾರದ ಕೃಷಿ ಯೋಜನೆಗಳು ರೈತರ ಅಭಿವೃದ್ಧಿಗೆ ಪೂರಕವಾಗಿದ್ದು, ಕೃಷಿ ಇಲಾಖೆಯ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉತ್ಪಾದನೆ ಹೆಚ್ಚಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮಳೆಯಾಧಾರಿತ ಕೃಷಿಯಲ್ಲಿ ಗುಣಮಟ್ಟದ ಬಿತ್ತನೆ ಬೀಜಗಳ ಬಳಕೆ ಅತ್ಯಂತ ಮಹತ್ವದ್ದಾಗಿದ್ದು, ರೈತರು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಂಡು ಹೆಚ್ಚಿನ ಇಳುವರಿ ಪಡೆಯಲು ಮುಂದಾಗಬೇಕು ಎಂದು ಹೇಳಿದರು. ಕೃಷಿ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ರೈತರಿಗೆ ಅಗತ್ಯವಾದ ನೆರವು ಮತ್ತು ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಉಪನಿರ್ದೇಶಕ ಅಜಯ್ ಕುಮಾರ್, ಹೋಬಳಿ ಕೃಷಿ ಅಧಿಕಾರಿ ಷಂಷೂದ್ ಉನ್ನೀಸಾ, ಸ್ಥಳೀಯ ಮುಖಂಡರು, ರೈತರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ಉಚಿತ ಶೇಂಗಾ ಬಿತ್ತನೆ ಬೀಜ ವಿತರಣೆಯಿಂದ ರೈತರಿಗೆ ನೆರವಾಗಲಿದ್ದು, ಮುಂಗಾರು ಹಂಗಾಮಿನಲ್ಲಿ ಉತ್ತಮ ಬೆಳೆ ಬೆಳೆಯುವ ವಿಶ್ವಾಸ ರೈತರಲ್ಲಿ ಮೂಡಿದೆ.

# ಅರ್ಹ ಫಲಾನುಭವಿಗಳಿಗೆ ಮಾತ್ರ ಸೌಲಭ್ಯಕ್ಕೆ ಒತ್ತು



ತುಮಕೂರು

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎನ್. ರಮೇಶ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಮಿನಿ ಸಭಾಂಗಣದಲ್ಲಿ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಸಭೆಯಲ್ಲಿ ವಿವಿಧ ಯೋಜನೆಗಳ ಅನುಷ್ಠಾನವನ್ನು ಅವಲೋಕಿಸಿ ಅಧಿಕಾರಿಗಳಿಗೆ ಅಗತ್ಯ ಸಲಹೆ ಹಾಗೂ ಸೂಚನೆಗಳನ್ನು ನೀಡಲಾಯಿತು.

ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಮರುಪರಿಶೀಲನೆಗೆ ವಿಶೇಷ ಒತ್ತು ನೀಡಲಾಗುತ್ತಿದ್ದು, ನಿಜವಾದ ಅರ್ಹ ಫಲಾನುಭವಿಗಳಿಗೆ ಮಾತ್ರ ಸೌಲಭ್ಯ ತಲುಪುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು. ಮರಣ ಹೊಂದಿದವರ ಹೆಸರಿನಲ್ಲಿ ಅಥವಾ ಅನರ್ಹ ಖಾತೆಗಳಿಗೆ ಹಣ ಜಮೆಯಾಗದಂತೆ ಕಟ್ಟುನಿಟ್ಟಿನ ಪರಿಶೀಲನೆ ನಡೆಯಲಿದೆ ಎಂದು ಅವರು ತಿಳಿಸಿದರು.

ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಸ್ಮಾರ್ಟ್ ಕಾರ್ಡ್ ವಿತರಣೆಯನ್ನು ವೇಗಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಶಾಲಾ ಮತ್ತು ಕಾಲೇಜುಗಳಲ್ಲಿ ಓದುತ್ತಿರುವ ಗಂಡು ವಿದ್ಯಾರ್ಥಿಗಳಿಗೂ ಉಚಿತ ಬಸ್ ಪಾಸ್ ವಿತರಣೆಯ ಪ್ರಗತಿಯನ್ನು ಪರಿಶೀಲಿಸಲಾಗಿದ್ದು, ಯಾವುದೇ ಅರ್ಹ ವಿದ್ಯಾರ್ಥಿ ವಂಚಿತರಾಗಬಾರದು ಎಂದು ಅವರು ಹೇಳಿದರು.

ಗೃಹ ಜ್ಯೋತಿ ಯೋಜನೆಯಡಿ ವಿದ್ಯುತ್ ಸಂಪರ್ಕವನ್ನು ವಾಣಿಜ್ಯ ಉದ್ದೇಶಕ್ಕೆ ದುರುಪಯೋಗ ಪಡಿಸಿಕೊಳ್ಳುತ್ತಿರುವ ಪ್ರಕರಣಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅವರು ಹೇಳಿದರು.

ಅನ್ನಭಾಗ್ಯ ಯೋಜನೆಯಡಿ 5 ಕೆ.ಜಿ ಅಕ್ಕಿಯ ಜೊತೆಗೆ ಸಕ್ಕರೆ, ಬೇಳೆ, ಉಪ್ಪು ಮತ್ತು ಅಡುಗೆ ಎಣ್ಣೆ ಒಳಗೊಂಡ ಇಂದಿರಾ ಕಿಟ್ ಅನ್ನು ಮುಂದಿನ ಒಂದೆರಡು ತಿಂಗಳಲ್ಲಿ ವಿತರಿಸಲು ಯೋಜಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಗೃಹಲಕ್ಷ್ಮಿ, ಅನ್ನಭಾಗ್ಯ ಮತ್ತು ಶಕ್ತಿ ಯೋಜನೆಗಳು ಯಶಸ್ವಿಯಾಗಿ ಜಾರಿಯಲ್ಲಿದ್ದು, ಸರ್ಕಾರದ ಉದ್ದೇಶವು ಯಾವುದೇ ಯೋಜನೆಯನ್ನು ಸ್ಥಗಿತಗೊಳಿಸುವುದಲ್ಲ, ಬದಲಾಗಿ ಅರ್ಹ ಫಲಾನುಭವಿಗಳಿಗೆ ಪಾರದರ್ಶಕವಾಗಿ ಸೌಲಭ್ಯ ತಲುಪಿಸುವುದೇ ಆಗಿದೆ ಎಂದು ಅವರು ಸ್ಪಷ್ಟಪಡಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ. ನವೀನ್ ಭಟ್, ಉಪಾಧ್ಯಕ್ಷ ರಾಮಕೃಷ್ಣಪ್ಪ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

# 'ದುಶ್ಚಟಗಳಿಗೆ ದಾಸರಾಗದೇ ಉತ್ತಮ ಭವಿಷ್ಯ ರೂಪಿಸಿಕೊಳ್ಳಿ'

ಗುಡಿಬಂಡೆ

ಯುವಜನತೆ ಮೋಜು-ಮಸ್ತಿಯ ಹೆಸರಿನಲ್ಲಿ ಮಾದಕ ವಸ್ತುಗಳ ವ್ಯಸನಕ್ಕೆ ಒಳಗಾಗಿ ತಮ್ಮ ಅಮೂಲ್ಯ ಜೀವನವನ್ನು ಹಾಳು ಮಾಡಿಕೊಳ್ಳುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ವಿದ್ಯಾರ್ಥಿಗಳು ಇಂತಹ ದುಶ್ಚಟಗಳಿಂದ ದೂರವಿದ್ದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಆರಕ್ಷಕ ವೃತ್ತ ನಿರೀಕ್ಷಕ ಮುನಿಕೃಷ್ಣ ಕರೆ ನೀಡಿದರು.

ಪಟ್ಟಣದಲ್ಲಿ ಪೊಲೀಸ್ ಇಲಾಖೆ ವತಿಯಿಂದ ಅಂತರರಾಷ್ಟ್ರೀಯ ಮಾದಕ ವಸ್ತುಗಳ ವಿರೋಧಿ ದಿನದ ಅಂಗವಾಗಿ ಆಯೋಜಿಸಿದ್ದ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಯುವಜನತೆ ದೇಶದ ಅಮೂಲ್ಯ ಸಂಪತ್ತಾಗಿದ್ದು, ಅವರ ಶಕ್ತಿ ಮತ್ತು ಸಾಮರ್ಥ್ಯ ದೇಶದ ಅಭಿವೃದ್ಧಿಗೆ ಬಳಕೆಯಾಗಬೇಕು. ಆದರೆ ಕೆಲವರು ತಪ್ಪು ಮಾರ್ಗಗಳನ್ನು ಅನುಸರಿಸಿ ಮಾದಕ ವಸ್ತುಗಳ ವ್ಯಸನಕ್ಕೆ ಬಲಿಯಾಗುತ್ತಿದ್ದಾರೆ. ಇದರಿಂದ ಆರೋಗ್ಯ ಹದಗೆಡುವುದರ ಜೊತೆಗೆ ಕುಟುಂಬಗಳ ಮೇಲೂ ದುಷ್ಪರಿಣಾಮ ಬೀರುತ್ತದೆ ಎಂದು ಹೇಳಿದರು.

ಸಾಮಾನ್ಯವಾಗಿ ಡ್ರಗ್ಸ್ ಎಂದರೆ ಗಾಂಜಾ ಅಥವಾ ಅಫೀಮು ಮಾತ್ರವಲ್ಲ, ಹಲವು ವಿಧದ ಮಾದಕ ವಸ್ತುಗಳು ಸಮಾಜದಲ್ಲಿ ಹರಡುತ್ತಿವೆ. ಇವುಗಳ ಸೇವನೆಯಿಂದ ಉಂಟಾಗುವ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಸಮಸ್ಯೆಗಳ ಬಗ್ಗೆ ವಿದ್ಯಾರ್ಥಿಗಳು ಅರಿವು ಹೊಂದಬೇಕು. ಜೊತೆಗೆ ತಮ್ಮ ಸಹಪಾಠಿಗಳು ಹಾಗೂ ಸಾರ್ವಜನಿಕರಲ್ಲಿಯೂ ಜಾಗೃತಿ ಮೂಡಿಸುವ ಜವಾಬ್ದಾರಿ ವಹಿಸಬೇಕು ಎಂದು ಸಲಹೆ ನೀಡಿದರು.

ಮಾದಕ ವಸ್ತುಗಳ ಸಾಗಾಟ, ಮಾರಾಟ ಮಾತ್ರವಲ್ಲದೆ ಅವುಗಳ ಸೇವನೆಯೂ ಕಾನೂನುಬಾಹಿರ ಅಪರಾಧವಾಗಿದೆ. ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಡ್ರಗ್ಸ್ ಮತ್ತು ಮದ್ಯಪಾನದಂತಹ ದುಶ್ಚಟಗಳನ್ನು ನಿಯಂತ್ರಿಸುವುದು ಅಗತ್ಯವಾಗಿದೆ. ಎಲ್ಲಿಯಾದರೂ ಮಾದಕ ವಸ್ತುಗಳ ಬಳಕೆ ಅಥವಾ ಅಕ್ರಮ ಮಾರಾಟ ಕಂಡುಬಂದರೆ ಸಾರ್ವಜನಿಕರು ತಕ್ಷಣ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ಮನವಿ ಮಾಡಿದರು.

ಜಾಗೃತಿ ಜಾಥಾದಲ್ಲಿ ವಿವಿಧ ಶಾಲೆಗಳ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪೊಲೀಸ್ ಸಿಬ್ಬಂದಿ ಭಾಗವಹಿಸಿ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಪೊಲೀಸ್ ಸಬ್ ಇನ್‌ಸ್ಪೆಕ್ಟರ್ ಮುತ್ತುರಾಜ್, ರಮೇಶ್, ಸಿಬ್ಬಂದಿ ನರೇಂದ್ರ ಸೇರಿದಂತೆ ಪೊಲೀಸ್ ಇಲಾಖೆ ಸಿಬ್ಬಂದಿ, ವಿವಿಧ ಶಾಲೆಗಳ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂಬ ಸಂದೇಶ ಸಾರಲಾಯಿತು.

# 1,86,831 ಮಕ್ಕಳಿಗೆ ಲಸಿಕೆ ಗುರಿ: ಡಾ.ಚಂದ್ರಶೇಖರ್

ತುಮಕೂರು

ಇದೇ 28ರಂದು ಭಾನುವಾರ ನಡೆಯಲಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ತುಮಕೂರು ಜಿಲ್ಲೆಯ 5 ವರ್ಷದೊಳಗಿನ 1,86,831 ಮಕ್ಕಳಿಗೆ ಲಸಿಕೆ ಹಾಕುವ ಕಾರ್ಯಕ್ರಮ ಯೋಜಿಸಿರುವುದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಬಿ.ಎಂ. ಚಂದ್ರಶೇಖರ್ ತಿಳಿಸಿದ್ದಾರೆ.

ಬುಧವಾರ ತಮ್ಮ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು, ತುಮಕೂರು ಜಿಲ್ಲೆಯಲ್ಲಿ ಈಗಾಗಲೇ ಪೋಲಿಯೋ ನಿವಾರಣೆಯಾಗಿದೆ. ಆದರೂ ಮುನ್ನೆಚ್ಚರಿಕೆ ಕ್ರಮವಾಗಿ ದೇಶಾದ್ಯಂತ ಜೂನ್ 28ರಂದು ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ನಡೆಯುತ್ತಿದ್ದು, ತುಮಕೂರು ಜಿಲ್ಲೆಯಲ್ಲಿ ಆಂದೋಲನ ರೂಪದಲ್ಲಿ ಕಾರ್ಯಕ್ರಮ ರೂಪಿಸಿರುವುದಾಗಿ ಅವರು ತಿಳಿಸಿದರು.

5 ವರ್ಷದೊಳಗಿನ 1,86,831 ಮಕ್ಕಳನ್ನು ಗುರುತಿಸಲಾಗಿದ್ದು, 1219 ಲಸಿಕಾ ಕೇಂದ್ರಗಳು ಹಾಗೂ 60 ಟ್ರಾನ್ಸಿಟ್ ಕೇಂದ್ರಗಳಲ್ಲಿ 5,122 ಲಸಿಕಾ ಸಿಬ್ಬಂದಿಯನ್ನು ನೇಮಿಸಲಾಗಿದೆ. ಅಲ್ಲದೆ, 265 ಮೇಲ್ವಿಚಾರಕರನ್ನು ಲಸಿಕಾ ಕಾರ್ಯಕ್ರಮಕ್ಕೆ ನೇಮಿಸಿರುವುದಾಗಿ ಅವರು ತಿಳಿಸಿದರು.

ಜಿಲ್ಲೆಯಾದ್ಯಂತ ಜೂನ್ 28ರಂದು ಲಸಿಕಾ ಭಾನುವಾರವಾಗಿದ್ದು, ಎಲ್ಲಾ ಕೇಂದ್ರಗಳಲ್ಲಿ ಪಲ್ಸ್ ಪೋಲಿಯೋ ಲಸಿಕೆ ಹಾಕಲಾಗುತ್ತದೆ. ನಂತರ ಗ್ರಾಮಾಂತರ ಪ್ರದೇಶದಲ್ಲಿ ಹೆಚ್ಚುವರಿಯಾಗಿ 2 ದಿನ ಹಾಗೂ ನಗರ ಪ್ರದೇಶದಲ್ಲಿ 3 ದಿನಗಳ ಕಾಲ ಮನೆ-ಮನೆಗೆ ಭೇಟಿ ನೀಡಿ ಯಾವ ಮಕ್ಕಳು ಬಿಟ್ಟು ಹೋಗದಂತೆ ಲಸಿಕೆ ನೀಡುವ ಯೋಜನೆಯನ್ನು ರೂಪಿಸಿರುವುದಾಗಿ ಅವರು ತಿಳಿಸಿದರು.



ಲಸಿಕಾ ಕಾರ್ಯಕ್ರಮ ಇರುವ ಮಾಹಿತಿಯನ್ನು ಸಾರ್ವಜನಿಕ ಶಿಕ್ಷಣ ಇಲಾಖೆ ಮೂಲಕ ಮುನ್ನಾ ದಿನ ಶನಿವಾರ ವ್ಯಾಪಕ ಜಾಥಾ ಹಾಗೂ ಪ್ರಾರ್ಥನಾ ಸಭೆಯಲ್ಲಿ ಶಾಲಾ ಅವಧಿಯಲ್ಲಿ ಮಾಹಿತಿಯನ್ನು ನೀಡುವ ಕಾರ್ಯಕ್ರಮವನ್ನು ರೂಪಿಸಲಾಗಿದೆ. ಅಲ್ಲದೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮೂಲಕ ಅಂಗನವಾಡಿ ಕಾರ್ಯಕರ್ತೆಯರ ಮೂಲಕ ವಿವಿಧ ಪ್ರಚಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಅಲ್ಲದೆ, ಮಹಾನಗರಪಾಲಿಕೆ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲೂ ವ್ಯಾಪಕ ಪ್ರಚಾರ ಹಾಗೂ ಕಾರ್ಯಕ್ರಮಕ್ಕಾಗಿ ವಿಶೇಷ ವ್ಯವಸ್ಥೆಗಳನ್ನು ರೂಪಿಸಲಾಗಿದೆ ಎಂದರು.

ಬೆಸ್ಕಾಂ ವತಿಯಿಂದ ಲಸಿಕೆ ಶೇಖರಣೆ ಶೀಥಲೀಕರಣ ಘಟಕ ನಿರಂತರವಾಗಿ ಕಾರ್ಯ ನಿರ್ವಹಿಸಬೇಕಿರುವುದರಿಂದ ನಿರಂತರ ವಿದ್ಯುತ್ ವ್ಯವಸ್ಥೆಗೆ ಈಗಾಗಲೇ ಜಿಲ್ಲಾಧಿಕಾರಿಗಳು ಇಲಾಖೆಗೆ ಸೂಚನೆ ನೀಡಿದ್ದಾರೆ.

ಅಲ್ಲದೆ, ಸಾರಿಗೆ, ಕಾರ್ಮಿಕ ಇಲಾಖೆ ಹಾಗೂ ರೋಟರಿ ಸಂಸ್ಥೆ ಸೇರಿದಂತೆ ಸ್ವಯಂ ಸೇವಾ ಸಂಸ್ಥೆಗಳು ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಲಿದ್ದಾರೆ ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಆರ್‌ಸಿಹೆಚ್ ಅಧಿಕಾರಿ ಡಾ. ಮೋಹನ್, ಜಿಲ್ಲಾ ವಾರ್ತಾಧಿಕಾರಿ ಹಿಮಂತರಾಜು ಜಿ. ಉಪಸ್ಥಿತರಿದ್ದರು.

# 'ಯುವ ವಕೀಲರು ಕ್ರಿಯಾಶೀಲತೆ, ಅಧ್ಯಯನಶೀಲತೆ ಬೆಳೆಸಿಕೊಳ್ಳಿ'

ತುಮಕೂರು

ಕಾನೂನು ಪದವಿ ಮುಗಿಸಿದ ಯುವ ವಕೀಲರ ಹೆಗಲ ಮೇಲೆ ದೊಡ್ಡ ಜವಾಬ್ದಾರಿ ಇರುತ್ತದೆ. ಆವಾಬ್ದಾರಿಯನ್ನು ನಿಭಾಯಿಸಿಲು ನಿರಂತರ ಅಧ್ಯಯನ, ಶಿಸ್ತು, ಬದ್ಧತೆ, ನೈತಿಕತೆ, ಕ್ರಿಯಾಶೀಲತೆ ರೂಢಿಸಿಕೊಂಡು ವೃತ್ತಿಬದುಕಿನಲ್ಲಿ ಯಶಸ್ವಿಯಾಗಬೇಕು ಎಂದು ಹೈ ಕೋರ್ಟ್ ವಿಶ್ರಾಂತ ನ್ಯಾಯಧೀಶರಾದ ಪಿ. ಕೃಷ್ಣ ಭಟ್ ಹೇಳಿದರು.

ಬುಧವಾರ ನಗರದ ವಿದ್ಯೋದಯ ಕಾನೂನು ಕಾಲೇಜಿನ ಈ ಸಾಲಿನ ಸಾಂಸ್ಕೃತಿಕ, ಕ್ರೀಡೆ, ಎನ್‌ಎಸ್‌ಎಸ್, ಕಾನೂನು ಸೇವಾ ಕೇಂದ್ರ, ಸ್ಕೌಟ್ಸ್ ಮತ್ತು ಗೈಡ್ಸ್ ಮತ್ತಿತರ ಚಟುವಟಿಕೆಗಳ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಕಾನೂನು ಪದವಿಯ ನಂತರ ಯಶಸ್ವಿ ವಕೀಲರಾಗಲು ಕಾನೂನಿನ ಆಳವಾದ ಅಧ್ಯಯನ ಮಾಡಬೇಕು. ಜೊತೆಗೆ ಮಹನೀಯ ಸಾಧನೆಗಳ ಜೀವನಚರಿತ್ರೆ, ಅವರು ಬರೆದ ಪುಸ್ತಕಗಳನ್ನು ಓದಿ ಅವರ ಅನುಭವ, ಸಲಹೆಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು,

ಮಹಾತ್ಮ ಗಾಂಧಿ, ಡಾ. ಅಂಬೇಡ್ಕರ್, ವಲ್ಲಭಭಾಯಿ ಪಟೇಲ್, ಅಬ್ರಹಾಂ ಲಿಂಕನ್ ಸೇರಿದಂತೆ ಜಗತ್ತಿನ ಬಹುತೇಕ ನಾಯಕರು ಕಾನೂನು ಅಧ್ಯಯನ ಮಾಡಿದವರು ಇಲ್ಲವೆ, ಕಾನೂನು ತಿಳಿದವರೇ ಆಗಿದ್ದಾರೆ. ಉತ್ತಮ ನಾಯಕರಾಗಲು ಕಾನೂನಿನ ಹಿನ್ನೆಯೂ ಅಗತ್ಯವೆಂದುದು ಇದರಿಂದ ತಿಳಿಯುತ್ತದೆ. ಇಂತಹ ಸಾಧಕರ ಜೀವನ ಚರಿತ್ರೆ ಓದಬೇಕು, ಅವರಂತೆ ಯಶಸ್ಸಿನ ಹಾದಿಯಲ್ಲಿ ಸಾಗಬೇಕು. ಸಾರ್ವಜನಿಕರಿಗೆ ಕಾನೂನು ಸೇವೆ, ಸಲಹೆ ನೀಡಬೇಕಾದ ವಕೀಲರು ಅಡ್ಡದಾರಿಯಲ್ಲಿ ನ್ಯಾಯ ಒದಗಿಸುವ ಪ್ರಯತ್ನ ಮಾಡಬಾರದು, ಸರಿಯಾದ ಕಾನೂನು ಮಾರ್ಗ ಅನುಸರಿಸುವ ನ್ಯಾಯವಾದಿಗಳಿಗೆ ಹೆಚ್ಚಿನ, ಶಾಶ್ವತ ಗೌರವ, ಮಾನ್ಯತೆ ದೊರೆಯುತ್ತದೆ ಎಂದು ತಿಳಿಸಿದರು.



ನಾವು ಎಷ್ಟರ ಮಟ್ಟಿಗೆ ಉನ್ನತ ಮಟ್ಟದ ನೈತಿಕತೆ ಕಾಪಾಡಿಕೊಳ್ಳುತ್ತೇವೆ ಎಂಬುದೂ ಹೆಚ್ಚಿನ ಗೌರವ ದೊರೆಯಲು ಕಾರಣವಾಗುತ್ತದೆ. ಕಾನೂನು ಪದವಿ ನಂತರ ವಿಫುಲ ಅವಕಾಶಗಳಿವೆ. ವಕೀಲರಾಗಿ ಸಾರ್ವಜನಿಕರ ಪರವಾಗಿ ನ್ಯಾಯಾಲಯಗಳಲ್ಲಿ ವಾದ ಮಂಡನೆ ಮಾಡಬಹುದು, ನ್ಯಾಯಾಧೀಶರಾಗಬಹುದು, ಕಾನೂನು ಕಾಲೇಜುಗಳ ಉಪನ್ಯಾಸಕರಾಗಬಹುದು, ದೊಡ್ಡ ಕಂಪನಿಗಳಲ್ಲಿ ಕಾನೂನು ಸಲಹೆಗಾರರಾಗಬಹುದು. ಓದುವ ಹವ್ಯಾಸ ಬೆಳೆಸಿಕೊಂಡು ಜ್ಞಾನ ವೃದ್ಧಿಸುಕೊಳ್ಳುವವರು, ಎಲ್ಲರಿಗಿಂಥಾ ಭಿನ್ನವಾಗಿ ಯೋಚಿಸುವ ಕ್ರಿಯಾಶೀಲತೆ ರೂಢಿಸಿಕೊಳ್ಳುವವರಿಗೆ ಅವಕಾಶಗಳು ಹುಡಕಿಕೊಂಡು ಬರುತ್ತವೆ ಎಂದು ಹೇಳಿದ ನ್ಯಾಯಮೂರ್ತಿ ಕೃಷ್ಣ ಭಟ್, ವಿದ್ಯೋದಯ ಕಾನೂನು ಕಾಲೇಜು ನ್ಯಾಯಾಧೀಶರನ್ನು ತಯಾರು ಮಾಡುವ ನರ್ಸರಿ ಇದ್ದಂತೆ ಇಲ್ಲಿ ಕಲಿತ ನೂರಕ್ಕೂ ಹೆಚ್ಚು ಜನ ನ್ಯಾಯಾಧೀಶರಾಗಿದ್ದಾರೆ ಎಂದರು.

ವಿದ್ಯೋದಯ ಕಾನೂನು ಕಾಲೇಜಿನ ಶೈಕ್ಷಣಿಕ ಮತ್ತು ಆಡಳಿತ ನಿರ್ದೇಶಕರು, ವಿದ್ಯೋದಯ ಫೌಂಡೇಶನ್ ಟ್ರಸ್ಟ್‌ನ ಮ್ಯಾನೇಜಿಂಗ್ ಟ್ರಸ್ಟಿ ಹೆಚ್.ಎಸ್. ರಾಜು ಅವರು ನ್ಯಾಯಮೂರ್ತಿ ಪಿ. ಕೃಷ್ಣ ಭಟ್ ಅವರು ಕಾನೂನು ಕ್ಷೇತ್ರದಲ್ಲಿ ಮಾಡಿರುವ ಸೇವಾಸಾಧನೆ ಪರಿಚಯಿಸಿದರು. ಟ್ರಸ್ಟ್‌ನ ಸಿಇಓ ಪ್ರೊ.ಕೆ. ಚಂದ್ರಣ್ಣ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಕಾಲೇಜಿನ ಪ್ರಾಚಾರ್ಯರಾದ ಶಮಾ ಸೈದಿ ವಾರ್ಷಿಕ ವರದಿ ವಾಚಿಸಿದರು.

ವಿವಿಧ ವಿಷಯಗಳಲ್ಲಿ ಡಾಕ್ಟರೇಟ್ ಗೌರವ ಗಳಿಸಿದ ಕಾಲೇಜಿನ ಸಹಾಯಕ ಪ್ರಾಧ್ಯಾಪಕರುಗಳಾದ ಡಾ.ಎ. ನಾರಾಯಣಸ್ವಾಮಿ, ಡಾ.ಆರ್. ರಮೇಶ್, ಡಾ.ಜಿ.ವೈ. ನಟರಾಜ್, ಡಾ.ಎಸ್. ಗಂಗಾಧರ್, ಡಾ. ಮುದ್ದುರಾಜು, ಡಾ.ಎನ್.ಹೆಚ್. ಕುಮಾರ್, ಡಾ. ಮಮತಾ ಕ್ಯಾತಣ್ಣನವರ್, ಡಾ. ಆಂಜನೇಯ ನಾಯಕ್, ಡಾ.ವಿ. ಕಿಶೋರ್ ಅವರನ್ನು ಈ ವೇಳೆ ಸನ್ಮಾನಿಸಿ ಗೌರವಿಸಲಾಯಿತು.

ನ್ಯಾಯಮೂರ್ತಿ ಪಿ. ಕೃಷ್ಣ ಭಟ್ ಅವರು ಕಾಲೇಜಿನ ವಾರ್ಷಿಕ ಸಂಚಿಕೆ ಬಿಡುಗಡೆ ಮಾಡಿದರು. ವಿವಿಧ ಸ್ಪರ್ಧೆಗಳ ವಿಜೇತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಐಕ್ಯೂಎಸಿ ಸಂಯೋಜಕ ಡಾ.ಎನ್. ಹೆಚ್. ಕುಮಾರ್, ಕ್ರೀಡೆ ಮತ್ತು ಎನ್‌ಎಸ್‌ಎಸ್ ಸಮಿತಿ ಸಂಯೋಜಕ ಡಾ.ವಿ. ಕಿಶೋರ್, ಯುವ ಮತ್ತು ರೆಡ್‌ಕ್ರಾಸ್ ಸಮಿತಿ ಸಂಯೋಜಕಿ ಕೆ.ಎಸ್. ಪುಷ್ಪ, ಸಾಂಸ್ಕೃತಿಕ ಸಮಿತಿ ಸಂಯೋಜಕ ಡಾ.ಜಿ.ವೈ. ನಾಗರಾಜು, ಕಾನೂನು ಸೇವೆಗಳ ಸಂಯೋಜಕಿ ಎ.ಹೆಚ್. ರಶ್ಮಿ ಮೊದಲಾದವರು ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy